**ಡಾ|| ರಾಜ್‌ಕುಮಾರ್ ಅಕಾಡೆಮಿ ಬೆಂಗಳೂರು**

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು




## ನವೆಂಬರ್ ೧ನೇ ವಾರ

03-11-2025 TO 08-11-2025

# ಭಾರತ ನಾರಿಯರಿಗೆ ಕಿರೀಟ

ಕರ್ನಾಟಕ ನವೋದ್ಯಮ ನೀತಿ 2025

ದೇಶದ ಆರನೇ ಕಲುಷಿತ ನಗರ ದೆಹಲಿ

ತ್ವರಿತ ನ್ಯಾಯಕ್ಕೆ 'ಎಐ' ತಂತ್ರಜ್ಞಾನ

ಸಿಎಂಎಸ್ – 3 ಕಕ್ಷೆಗೆ

## ❖ ಭಾರತ ನಾರಿಯರಿಗೆ ಕಿರೀಟ: ಚೊಚ್ಚಲ ವಿಶ್ವಕಪ್ ಗೆದ್ದು ಬೀಗಿದ ಹರ್ಮನ್‌ಪ್ರೀತ್ ಬಳಗ

**ಸಂದರ್ಭ: ಮಹಿಳಾ ಕ್ರಿಕೆಟ್ ರಂಗದಲ್ಲಿ ಹೊಸ ಶಕೆ ಆರಂಭವಾಯಿತು. ಡಿ.ವೈ. ಪಾಟೀಲ ಕ್ರೀಡಾಂಗಣದಲ್ಲಿ ಭಾರತ ತಂಡವು ಮೊದಲ ಬಾರಿಗೆ ವಿಶ್ವ ಕಿರೀಟ ಮುಡಿಗೇರಿಸಿಕೊಂಡು ಚಾರಿತ್ರಿಕ ಸಾಧನೆ ಮೆರೆಯಿತು. ಹಲವು ವರ್ಷಗಳಿಂದ ಕೋಟ್ಯಂತರ ಕ್ರಿಕೆಟ್ ಅಭಿಮಾನಿಗಳು ಕಂಡಿದ್ದ ಕನಸು ನನಸಾಯಿತು. ಹರ್ಮನ್ ಪ್ರೀತ್ ಕೌರ್ ಬಳಗದ ಆಟಗಾರ್ತಿಯರು ಹರ್ಷದ ಹೊನಲಲ್ಲಿ ತೇಲಿದರು.**

- 2005 ಮತ್ತು 2017ರ ಟೂರ್ನಿಗಳಲ್ಲಿ ಫೈನಲ್‌ನಲ್ಲಿ ಎಡವಿದ್ದ ಭಾರತ ತಂಡ ಈ ಬಾರಿ ಗುರಿ ತಪ್ಪಲಿಲ್ಲ. ದೀಪ್ತಿ ಶರ್ಮಾ ಮತ್ತು ಶಫಾಲಿ ವರ್ಮಾ ಅವರ ಆಲ್‌ರೌಂಡ್ ಆಟದ ಬಲದಿಂದ ಭಾರತವು 52 ರನ್‌ಗಳಿಂದ ದಕ್ಷಿಣ ಆಫ್ರಿಕಾ ವನಿತೆಯರ ಎದುರು ಜಯಭೇರಿ ಬಾರಿಸಿತು.




ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಟ್ರೋಫಿಯೊಂದಿಗೆ ಭಾರತ ತಂಡದ ಆಟಗಾರ್ತಿಯರ ಸಂಭ್ರಮ ಎಎಫ್‌ಪಿ ಚಿತ್ರ

**ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ವಿಜೇತರು**

| ವರ್ಷ | ಆತಿಥ್ಯ | ಚಾಂಪಿಯನ್ | ರನ್ನರ್ಸ್ ಅಪ್ | ಒಟ್ಟು ತಂಡ |
|---|---|---|---|---|
| 1973 | ಇಂಗ್ಲೆಂಡ್ | ಇಂಗ್ಲೆಂಡ್ | ಆಸ್ಟ್ರೇಲಿಯಾ | 7 |
| 1978 | ಭಾರತ | ಆಸ್ಟ್ರೇಲಿಯಾ | ಇಂಗ್ಲೆಂಡ್ | 4 |
| 1982 | ನ್ಯೂಜಿಲೆಂಡ್ | ಆಸ್ಟ್ರೇಲಿಯಾ | ಇಂಗ್ಲೆಂಡ್ | 5 |
| 1988 | ಆಸ್ಟ್ರೇಲಿಯಾ | ಆಸ್ಟ್ರೇಲಿಯಾ | ಇಂಗ್ಲೆಂಡ್ | 5 |
| 1993 | ಇಂಗ್ಲೆಂಡ್ | ಇಂಗ್ಲೆಂಡ್ | ನ್ಯೂಜಿಲೆಂಡ್ | 8 |
| 1997 | ಭಾರತ | ಆಸ್ಟ್ರೇಲಿಯಾ | ನ್ಯೂಜಿಲೆಂಡ್ | 11 |
| 2000 | ನ್ಯೂಜಿಲೆಂಡ್ | ನ್ಯೂಜಿಲೆಂಡ್ | ಆಸ್ಟ್ರೇಲಿಯಾ | 8 |
| 2005 | ದಕ್ಷಿಣ ಆಫ್ರಿಕಾ | ಆಸ್ಟ್ರೇಲಿಯಾ | ಭಾರತ | 8 |
| 2009 | ಆಸ್ಟ್ರೇಲಿಯಾ | ಇಂಗ್ಲೆಂಡ್ | ನ್ಯೂಜಿಲೆಂಡ್ | 8 |
| 2013 | ಭಾರತ | ಆಸ್ಟ್ರೇಲಿಯಾ | ವೆಸ್ಟ್ ಇಂಡೀಸ್ | 8 |
| 2017 | ಇಂಗ್ಲೆಂಡ್ | ಇಂಗ್ಲೆಂಡ್ | ಭಾರತ | 8 |
| 2022 | ನ್ಯೂಜಿಲೆಂಡ್ | ಆಸ್ಟ್ರೇಲಿಯಾ | ಇಂಗ್ಲೆಂಡ್ | 8 |
| 2025 | ಭಾರತ | ಭಾರತ | ದಕ್ಷಿಣ ಆಫ್ರಿಕಾ | 8 |

ಟೂರ್ನಿಯಲಿ ಸಂಘಟಿತ ಪ್ರದರ್ಶನ

- ದಕ್ಷಿಣ ಆಫ್ರಿಕಾ ತಂಡಕ್ಕೆ ಚೊಚ್ಚಲ ಪ್ರಶಸ್ತಿ ಜಯಿಸುವ ಅವಕಾಶ ಕೈತಪ್ಪಿತು. ಆದರೆ ತಂಡದ ನಾಯಕಿ ಲಾರಾ ವೋಲ್ವಾರ್ಟ್ (101; 98 ಎಸೆತ; 4X11, 6X1) ಅವರ ಅಮೋಘ ಶತಕವು ಇತಿಹಾಸದ ಪುಟ ಸೇರಿತು. ಅವರ ಬಳಗದ ದಿಟ್ಟ ಹೋರಾಟವೂ ಮನಗೆದ್ದಿತು.
- ಏಳು ಬಾರಿಯ ವಿಶ್ವ ಚಾಂಪಿಯನ್ ಆಸ್ಟ್ರೇಲಿಯಾ ತಂಡವನ್ನು ಸೆಮಿಫೈನಲ್ ನಲ್ಲಿ ಸೋಲಿಸಿದ್ದ ಭಾರತ ಮತ್ತು ನಾಲ್ಕು ಸಲ ಕಿರೀಟ ಧರಿಸಿದ್ದ ಇಂಗ್ಲೆಂಡ್ ತಂಡ ವನ್ನು ಮಣಿಸಿದ್ದ ದಕ್ಷಿಣ ಆಫ್ರಿಕಾ ಫೈನಲ್ ನಲ್ಲಿ ಮುಖಾಮುಖಿಯಾಗಿದ್ದವು.

## ❖ ಸಿಎಂಎಸ್ – 3 ಕಕ್ಷೆಗೆ: ಇತಿಹಾಸ ನಿರ್ಮಿಸಿದ ಇಸ್ರೊ

**ಸಂದರ್ಭ: ಸಂವಹನ ಉಪಗ್ರಹವನ್ನು 'ಬಾಹುಬಲಿ' ನಿಖರವಾಗಿ ಕಕ್ಷೆಗೆ ಸೇರಿಸಿದೆ. ಇದು ಆತ್ಮನಿರ್ಭರ ಭಾರತಕ್ಕೆ ಮತ್ತೊಂದು ಹೆಮ್ಮೆಯ ಗರಿ.ವಿ. ನಾರಾಯಣನ್, ಇಸ್ರೊ ಅಧ್ಯಕ್ಷ**

- ಹೊಸ ತಲೆಮಾರಿನ, ಸ್ವದೇಶಿ ನಿರ್ಮಿತ 'ಬಾಹುಬಲಿ' ರಾಕೆಟ್ ಮೂಲಕ ಅತ್ಯಂತ ಭಾರವಾದ ಉಪಗ್ರಹವನ್ನು ಕಕ್ಷೆಗೆ ಸೇರಿಸುವುದರೊಂದಿಗೆ ಇಸ್ರೊ ಚಾರಿತ್ರಿಕ ಸಾಧನೆ ಮಾಡಿದೆ.
- ಶ್ರೀಹರಿಕೋಟಾದ ಬಾಹ್ಯಾಕಾಶ ಕೇಂದ್ರದಿಂದ 4,410 ಕೆ.ಜಿ ತೂಕದ ಸಂವಹನ ಉಪಗ್ರಹವನ್ನು (ಸಿಎಂಎಸ್-03) ಹೊತ್ತು ನಭಕ್ಕೆ ಚಿಮ್ಮಿದ ಲಾಂಚ್ ವೆಹಿಕಲ್ ಮಾರ್ಕ್-3 (ಎಲ್‌ವಿಎಂ3-ಎಂ5) 'ಬಾಹುಬಲಿ' ಯು 'ಆತ್ಮನಿರ್ಭರ ಭಾರತ' ದ ಸಾಧನೆಗೆ ಸಾಕ್ಷಿಯಾಯಿತು.

- ದೇಶದ ಬಾಹ್ಯಾಕಾಶ ಕೇಂದ್ರ ದಿಂದ ಮೊದಲ ಬಾರಿಗೆ ಉಡ್ಡಯನ ಮಾಡಲಾಗುತ್ತಿರುವ ಭಾರಿ ತೂಕದ ಉಪಗ್ರಹ ಎಂಬ ಹೆಗ್ಗಳಿಕೆಗೆ 'ಸಿಎಂಎಸ್-03' ಪಾತ್ರವಾಯಿತು. ಇದರ ಉಡ್ಡಯನಕ್ಕೆ ಬಳಸಿದ ಭಾರಿ ಗಾತ್ರದ ರಾಕೆಟ್ (ಎಲ್‌ವಿಎಂ3-ಎಂ5) ಕೂಡ 'ಬಾಹುಬಲಿ' ಹೆಸರಿನ ಹಿರಿಮೆಯನ್ನು ಹೆಚ್ಚಿಸಿತು.

***<u>7 ಉಪಗ್ರಹ ಉಡಾವಣೆ ಗುರಿ</u>***

- ಇಸ್ರೊದ ಮಹತ್ವಾಕಾಂಕ್ಷೆಯ ಗಗನಯಾನ ಕಾರ್ಯಕ್ರಮದಡಿ ಮೊದಲ ಮಾನವ ರಹಿತ ಯೋಜನೆಯೂ ಸೇರಿದಂತೆ 2026ರ ಮಾರ್ಚ್ ಒಳಗೆ 7 ಉಪಗ್ರಹ ಉಡಾವಣೆಗಳನ್ನು ನಡೆಸುವ ಗುರಿಯನ್ನು ಇಸ್ರೊ ಹೊಂದಿದೆ.

- **ಉಪಗ್ರಹದ ತೂಕ: 4,410 ಕೆ.ಜಿ**
- **ಉಡ್ಡಯನಕ್ಕೆ ಬಳಸಿದ ರಾಕೆಟ್‌ನ ಎತ್ತರ: 43.5 ಮೀಟರ್**
- **ಉಪಗ್ರಹದ ಕಾರ್ಯ ನಿರ್ವಹಣೆಯ ಅವಧಿ :15 ವರ್ಷ**

- ***<u>ಕನಿಷ್ಠ 15 ವರ್ಷ ಕಾರ್ಯಾಚರಣೆ:</u>*** ಉಪಗ್ರಹವನ್ನು ಭೂಹೊಂದಾಣಿಕೆ ವರ್ಗಾವಣೆ ಕಕ್ಷೆಗೆ (ಜಿಟಿಒ) ಸೇರಿಸಲಾಗಿದ್ದು, ಇದು 2013ರಲ್ಲಿ ಉಡಾವಣೆ ಮಾಡಿದ 'ಜಿಎಸ್‌ಎಟಿ-7' ಸರಣಿಯ ಉಪಗ್ರಹಕ್ಕೆ ಬದಲಿಯಾಗಿ, ಮುಂದಿನ 15 ವರ್ಷಗಳವರೆಗೆ ಕಾರ್ಯ ನಿರ್ವಹಿಸಲಿದೆ ಎಂದು ಇಸ್ರೊ ಹೇಳಿದೆ.
- ಸಾಗರಯಾನಕ್ಕೆ,ಭೂಮೇಲ್ಮೈ ನಲ್ಲಿ ನಡೆಯುವ ಚಟುವಟಿಕೆಗೆ ಅಗತ್ಯವಿರುವ ಸಂವಹನ ಸೇವೆಯನ್ನು ಈ ಉಪಗ್ರಹದ ಮೂಲಕ ನೀಡಲಾಗುತ್ತದೆ.
- ಎಲ್‌ವಿಎಂ-3 ಮೂಲಕ ನಡೆದಿರುವ ಉಡಾವಣೆಗಳು ಶೇ 100ರಷ್ಟು ಯಶಸ್ವಿನ ದರ ಹೊಂದಿವೆ. ಚಂದ್ರಯಾನ- 3ರ (3,841.4 ಕೆ.ಜಿ) ಉಡಾವಣೆ ನಂತರ ಈ ರಾಕೆಟ್, ಮತ್ತೊಂದು ಮೈಲಿಗಲ್ಲು ನಿರ್ಮಿಸಿದೆ.
- ಇಸ್ರೊದ ಗಗನಯಾನ ಯೋಜನೆಯಲ್ಲಿ 'ಎಲ್‌ವಿಎಂ-3' ರಾಕೆಟ್ ಬಳಸುವ ಯೋಜನೆ ಇದ್ದು, ಇದಕ್ಕೆ 'ಎಚ್‌ಆರ್‌ಎಲ್‌ವಿ' ಎಂದು ಹೆಸರಿಡಲಾಗಿದೆ. 2018ರಲ್ಲಿ ಜಿಸ್ಯಾಟ್-11 (5,854 ಕೆ.ಜಿ) ಉಪಗ್ರಹವನ್ನು ಫ್ರೆಂಚ್ ಗಯಾನದಿಂದ ಉಡ್ಡಯನ ಮಾಡಲಾಗಿತ್ತು.

## ❖ ಪವನ ವಿದ್ಯುತ್: ಕರ್ನಾಟಕಕ್ಕೆ ಪ್ರಶಸ್ತಿ

**ಸಂದರ್ಭ: ಅತ್ಯಧಿಕ ಪವನ ವಿದ್ಯುತ್ ಉತ್ಪಾದನೆ ಮೂಲಕ 2024-25ನೇ ಸಾಲಿನಲ್ಲಿ ಪ್ರಶಸ್ತಿ ಪಡೆದಿದ್ದ ಕರ್ನಾಟಕ ನವೀಕರಿಸಬಹು ದಾದ ಇಂಧನ ಅಭಿವೃದ್ಧಿ ನಿಯಮಿತವು (ಕ್ರೆಡಲ್), ಇದೇ ಸಾಲಿನಲ್ಲಿ 'ಅನುಷ್ಠಾನದ ಹಂತದಲ್ಲಿರುವ ಅತ್ಯಧಿಕ ಪವನ ವಿದ್ಯುತ್ ಸಾಮರ್ಥ್ಯ'ಕ್ಕಾಗಿ ರಾಷ್ಟ್ರೀಯ ಮಟ್ಟದ ಪ್ರಶಸ್ತಿಯನ್ನೂ ತನ್ನದಾಗಿಸಿಕೊಂಡಿದೆ.**

- ವಿಂಡ್ ಟರ್ಬೈನ್ ತಯಾರಕರ ಸಂಘ (ಐಡಬ್ಲ್ಯುಟಿಎಂಎ) ಚೆನ್ನೈನ ಟ್ರೇಡ್ ಸೆಂಟರ್‌ನಲ್ಲಿ ಆಯೋಜಿಸಿದ್ದ 'ವಿಂಡ್ ಎನರ್ಜಿ ಇಂಡಿಯಾ 2025'ರ ಏಳನೇ ಆವೃತ್ತಿಯಲ್ಲಿ ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರು ಕ್ರೆಡಲ್ ಅಧ್ಯಕ್ಷರೂ ಆದ ಶಾಸಕ ಟಿ.ಡಿ. ರಾಜೇಗೌಡ ಮತ್ತು ವ್ಯವಸ್ಥಾಪಕ ನಿರ್ದೇಶಕ ಕೆ.ಪಿ. ರುದ್ರಪ್ಪಯ್ಯ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು.
- ನಂತರ ಮಾತನಾಡಿದ ರಾಜೇಗೌಡ, 'ಇದು ನಮ್ಮ ರಾಜ್ಯಕ್ಕೆ ಹೆಮ್ಮೆಯ ಸಂಗತಿ. ಶುದ್ಧ ಇಂಧನ ಉತ್ಪಾದನೆ ಮತ್ತು ಬಳಕೆಗೆ ಆದ್ಯತೆ ನೀಡಿ, ಈ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿರುವ ಎಲ್ಲಾ ಪಾಲುದಾರರ ಬೆಂಬಲಕ್ಕಾಗಿ ಧನ್ಯವಾದಗಳನ್ನು ಅರ್ಪಿಸುತ್ತೇನೆ' ಎಂದರು.
- 'ಅನುಷ್ಠಾನ ಹಂತದಲ್ಲಿರುವ ಪವನ ವಿದ್ಯುತ್ ಸಾಮರ್ಥ್ಯದಲ್ಲಿ ಕರ್ನಾಟಕವು ದೇಶದಲ್ಲಿ ಮೊದಲ ಸ್ಥಾನ ಹೊಂದಿದೆ. ಇದನ್ನು ಗುರುತಿಸಿ ಪ್ರಶಸ್ತಿ ನೀಡಲಾಗಿದೆ' ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಹೇಳಿದ್ದಾರೆ.
- 'ಇಂಧನ ವಲಯದಲ್ಲಿನ ಹೊಸ ನೀತಿಗಳು ರಾಜ್ಯವನ್ನು ನವೀಕರಿಸಬಹುದಾದ ಇಂಧನದ ಶಕ್ತಿ ಕೇಂದ್ರವನ್ನಾಗಿ ರೂಪಿಸುತ್ತಿವೆ' ಎಂದು ಇಂಧನ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಹೇಳಿದ್ದಾರೆ.

Dr. Rajkumar IAS/KAS Academy

- ‘ನವೀಕರಿಸಬಹುದಾದ ಇಂಧನದ ರಾಷ್ಟ್ರೀಯ ಗುರಿಗಳನ್ನು ಬೆಂಬಲಿಸುವ ನಿಟ್ಟಿನಲ್ಲಿ ಮಾಡುತ್ತಿರುವ ಅವಿರತ ಪ್ರಯತ್ನಕ್ಕೆ ಈ ಪ್ರಶಸ್ತಿ ಸಂದಿದೆ’ ಎಂದು ಕೆ.ಪಿ. ರುದ್ರಪ್ಪಯ್ಯ ಅವರು ತಿಳಿಸಿದ್ದಾರೆ.

## ❖ ವೇಣುಗೆ ‘ಕೆಂಧೂಳಿ ರಾಜ್ಯೋತ್ಸವ ಪ್ರಶಸ್ತಿ’

**ಸಂದರ್ಭ: ಕೆಂಧೂಳಿ ಪತ್ರಿಕೆ ನೀಡುವ ‘ಕೆಂಧೂಳಿ ರಾಜ್ಯೋತ್ಸವ’ ಪ್ರಶಸ್ತಿಗೆ ಸಾಹಿತಿ ಬಿ.ಎಲ್. ವೇಣು ಆಯ್ಕೆಯಾಗಿದ್ದಾರೆ.**

- ಈ ಪ್ರಶಸ್ತಿಯು ₹ 10 ಸಾವಿರ ನಗದು ಒಳಗೊಂಡಿದೆ. ಶಿವಕುಮಾರ್ ಕಂಪ್ಲಿ ಅಧ್ಯಕ್ಷತೆಯಲ್ಲಿ ತುರುವನೂರು ಮಂಜುನಾಥ, ಶ್ರೀದೇವಿ ಕೆರೆಮನೆ ಮತ್ತು ಪರಶಿವ ಧನಗೂರು ಅವರ ಸಮಿತಿ ಈ ಆಯ್ಕೆ ಮಾಡಿದೆ.
- ‘ಕೆಂಧೂಳಿ ಪತ್ರಿಕೆ ಐದು ವರ್ಷ ಪೂರೈಸಿದ ಈ ಸಂದರ್ಭದಲ್ಲಿ ಸಾಹಿತ್ಯ, ಪತ್ರಿಕೋದ್ಯಮ, ಕೃಷಿ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಗಣ್ಯರಿಗೆ ಪ್ರತಿ ವರ್ಷ ಪ್ರಶಸ್ತಿ ನೀಡಲು ತೀರ್ಮಾನಿಸಿದೆ’ ಎಂದು ಪತ್ರಿಕೆ ಸಂಪಾದಕ ತುರುವನೂರು ಮಂಜುನಾಥ ತಿಳಿಸಿದ್ದಾರೆ.

## ❖ ‘ನೀರಿನ ಹೆಜ್ಜೆ’ 5ರಂದು ಬಿಡುಗಡೆ

**ಸಂದರ್ಭ: ‘ರಾಜ್ಯ, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಜಲ ವಿವಾದಗಳು, ಒಪ್ಪಂದಗಳು, ನ್ಯಾಯಾಲಯದ ತೀರ್ಪುಗಳು, ನೀರಾವರಿ ಯೋಜನೆಗಳು, ಸಮಸ್ಯೆಗಳು ಮತ್ತು ಪರಿಹಾರ ಗಳ ಚಿತ್ರಣವಿರುವ ನಾನು ಬರೆದಿರುವ ‘ನೀರಿನ ಹೆಜ್ಜೆ’ ಕೃತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದೇ 5ರಂದು ಬಿಡುಗಡೆ ಮಾಡಲಿದ್ದಾರೆ.**

- ‘1956 ಆಗಸ್ಟ್ 28ರಂದು ದೇಶದ ನದಿಗಳ ಮತ್ತು ಕಣಿವೆ ವಿವಾದಗಳ ನ್ಯಾಯ ನಿರ್ಣಯಕ್ಕೆ ಜಾರಿಗೊಳಿಸಲಾದ ಅಂತರರಾಷ್ಟ್ರೀಯ ಜಲ ಕಾಯ್ದೆ, ಜಲ ಒಪ್ಪಂದಗಳು ಯಾವುವು, ಆ ದೇಶಗಳು ಕೈಗೊಂಡ ನಿರ್ಧಾರಗಳೇನು? ಭಾರತದ ನಿಲುವುಗಳು ಏನಾಗಿತ್ತು? ದೇಶದ ನದಿಗಳ ಜೋಡಣೆ ಬಿಕ್ಕಟ್ಟು, ಪರಿಹಾರ ಹಾಗೂ ಜೋಡಣೆ ಸಾಧ್ಯವೇ? ದೇಶದಲ್ಲಿನ ನದಿಗಳ ವಿವಾದ ಮತ್ತು ಅಲ್ಲಿನ ಪರಿಸ್ಥಿತಿ ಏನು ಎಂಬುದರ ಬಗ್ಗೆ ಈ ಕೃತಿಯಲ್ಲಿ ದಾಖಲಿಸಿದ್ದೇನೆ. ರಾಜ್ಯದ ಮಹದಾಯಿ ಸೇರಿದಂತೆ ವಿವಿಧ ನೀರಾವರಿ ಯೋಜನೆಗಳ ಬಗ್ಗೆಯೂ ಸಮಗ್ರ ಮಾಹಿತಿಯಿದೆ’ ಎಂದರು.
- **‘ಬಾಂಗ್ಲಾದೇಶದೊಂದಿಗೆ** ಬೇಸಿಗೆ ಅವಧಿಯಲ್ಲಿ ನೀರಿನ ಹರಿವು ಹಂಚಿ ಕೊಳ್ಳಬೇಕೆಂಬ ಒಪ್ಪಂದ ಮಾಡಿಕೊಳ್ಳ ಲಾಗಿತ್ತು.
- ಮಹಾನದಿ, ಶಾರದಾ ಒಪ್ಪಂದಕ್ಕೆ ಅಂದಿನ ಪ್ರಧಾನಿ ದೇವೇಗೌಡರು ಸಹಿ ಹಾಕಿ, ಪ್ರಮುಖ 12 ಅಧ್ಯಾಯಗಳನ್ನು ಒಳಗೊಂಡ ನಿಯಮಾವಳಿ ರೂಪಿಸಲಾಗಿತ್ತು.
- **1971ರಲ್ಲಿ ನೀರಾವರಿ ಯೋಜನೆಗಳಿಗೆ ವಿಶ್ವಬ್ಯಾಂಕ್ ನೆರವು ನೀಡುವುದಕ್ಕೆ ಆರಂಭಿಸಿತ್ತು**.
- ನಂತರದಲ್ಲಿ ದೇಶದ ನದಿ ಜೋಡಣೆ ವಿಚಾರ ಮುನ್ನೆಲೆಗೆ ಬಂತು. ಕೇಂದ್ರ ಸರ್ಕಾರದ ರಾಷ್ಟ್ರೀಯ ನೀರಾವರಿ ಅಭಿವೃದ್ಧಿ ಸಂಸ್ಥೆಯು ಹಿಮಾಲಯದ 14 ನದಿ, ದಕ್ಷಿಣ ಭಾರತದ 16 ನದಿ ಜೋಡಣೆ ಹಾಗೂ ರಾಜ್ಯದ ಒಳಗಿನ 37 ನದಿ ಜೋಡಣೆಗೆ ವರದಿ ನೀಡಿತ್ತು. ಆ ಎಲ್ಲ ವಿಷಯಗಳು ಈ ಕೃತಿಯಲ್ಲಿದೆ’ ಎಂದು ವಿವರಿಸಿದರು.
- ‘1952ರ ಸೆ. 29ರಂದು ಕೃಷ್ಣಾ ನದಿ ಅಣೆಕಟ್ಟು ನಿರ್ಮಾಣಕ್ಕೆ ಶಂಕುಸ್ಥಾಪನೆಗೆ ಬಂದಿದ್ದ ಅಂದಿನ ಪ್ರಧಾನಿ ಜವಾಹರಲಾಲ್ ನೆಹರೂ ಅವರು ಅಣೆಕಟ್ಟುಗಳು ಆಧುನಿಕ ಭಾರತದ ದೇಗುಲಗಳಿದ್ದಂತೆ ಎಂದು ಉಲ್ಲೇಖಿಸಿದ್ದರು. ಅದನ್ನೂ ಉಲ್ಲೇಖಿಸಿ ದ್ದೇನೆ. ಕೃತಿಯಲ್ಲಿ ಯಾರನ್ನೂ ಟೀಕೆ ಮಾಡಿಲ್ಲ. ರಾಜಕೀಯ ವಿಚಾರಗಳ ಬಗ್ಗೆಯೂ ಪ್ರಸ್ತಾಪ ಮಾಡಿಲ್ಲ. ವಾಸ್ತವಾಂಶಗಳನ್ನಷ್ಟೆ ದಾಖಲಿಸಿದ್ದೇನೆ’ ಎಂದೂ ಅವರು ಸ್ಪಷ್ಟಪಡಿಸಿದರು.

## ❖ 'ನುಗು' ಸನಿಹ ಅದಿರು ಶೋಧ

**ಸಂದರ್ಭ: ಅರಣ್ಯ ಇಲಾಖೆಗೆ ಭಾರತೀಯ ಭೂ ಸರ್ವೇಕ್ಷಣಾ ಸಂಸ್ಥೆ ಪ್ರಸ್ತಾವ: ಅದಿರು ಶೋಧ ಇನ್ನೂ ಪ್ರಸ್ತಾವದ ಹಂತದಲ್ಲಿದ್ದರೂ, ಮಾನವ-ವನ್ಯಜೀವಿ ಸಂಘರ್ಷ ಹೆಚ್ಚಲು ಕಾರಣವಾಗುವ ಇಂಥ ಯೋಜನೆಗಳನ್ನು ಪುರಸ್ಕರಿಸಬಾರದು ಗಿರಿಧರ ಕುಲಕರ್ಣಿ ವನ್ಯಜೀವಿ ಸಂರಕ್ಷಣಾವಾದಿ.**

- ಜಿಲ್ಲೆಯ ಸರಗೂರು ತಾಲ್ಲೂಕಿನ ನುಗು ಅಭಯಾರಣ್ಯದ ಪರಿಸರ ಸೂಕ್ಷ್ಮ ವಲಯದ ಸನಿಹದಲ್ಲಿರುವ ಅರಣ್ಯ ಪ್ರದೇಶ ಸೇರಿ 13 ಗ್ರಾಮಗಳಲ್ಲಿ ಸಿಲಿಮನೈಟ್ ಮತ್ತು ಕಯನೈಟ್ ಅದಿರಿನ ಶೋಧ ನಡೆಸಲು ಭಾರತೀಯ ಭೂಸರ್ವೇಕ್ಷಣಾ ಸಂಸ್ಥೆಯು (ಜಿಎಸ್‌ಐ) ಅರಣ್ಯ ಇಲಾಖೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ್ದು, ಪ್ರಸ್ತಾವವು ಪರಿಶೀಲನಾ ಹಂತದಲ್ಲಿದೆ.
- ಒಂದು ವೇಳೆ ಅನುಮತಿ ದೊರೆತಲ್ಲಿ ಸರಗೂರು ತಾಲ್ಲೂಕಿನ ಹೊನಗನಹಳ್ಳಿ ಮತ್ತು ಶಾಂತಿಪುರ ವಲಯದ 499 ಹೆಕ್ಟೇರ್ ಅರಣ್ಯ ಪ್ರದೇಶ ಹಾಗೂ 1,001 ಅರಣ್ಯೇತರ ಭೂಮಿಯಲ್ಲಿ ಉದ್ದೇಶಿತ ಅದಿರು ಅನ್ವೇಷಣೆ ನಡೆಯಲಿದೆ. ಹಿರಿಯ ಭೂವಿಜ್ಞಾನಿ ನೇತೃತ್ವದ ಮೂವರು ಸಿಬ್ಬಂದಿಯನ್ನು ಅ.16ರಂದು 'ಜಿಎಸ್‌ಐ' ನಿಯೋಜಿಸಿದೆ. '50 ದಿನಗಳಲ್ಲಿ ಶೋಧ ನಡೆಸಿ, ವರದಿ ತಯಾರಿಸಲಿದ್ದಾರೆ' ಎಂದು ಅರ್ಜಿಯಲ್ಲಿ ಹೇಳಿದೆ.
- ಎಚ್.ಡಿ.ಕೋಟೆ, ಸರಗೂರು ತಾಲ್ಲೂಕುಗಳ ಗಡಿಯಾಗಿ ಹರಿಯುವ ಕಬಿನಿ ನದಿ ತೀರದಲ್ಲಿರುವ ಶಾಂತಿಪುರ ಗ್ರಾಮದ ಎರಡು ಬೃಹತ್ ಬೆಟ್ಟಗಳ ಅರಣ್ಯ ಭೂಮಿ ಹಾಗೂ ಸುತ್ತಲ ಗ್ರಾಮಗಳಲ್ಲಿ ಶೋಧ ನಡೆಯಲಿದೆ. ಇಲ್ಲಿಂದ ನುಗು ಜಲಾಶಯ 4.5 ಕಿ.ಮೀ ಹಾಗೂ ಕಬಿನಿ ಜಲಾಶಯದ ಅಣೆಕಟ್ಟೆ 6.8 ಕಿ.ಮೀ ದೂರದಲ್ಲಿವೆ. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ ಹಾಗೂ ನುಗು ವನ್ಯಜೀವಿಧಾಮ ಕೂಡ ಸನಿಹದಲ್ಲಿವೆ. ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಚಿಕ್ಕದೇವಮ್ಮ ಬೆಟ್ಟವೂ 1.5 ಕಿ.ಮೀ ದೂರದಲ್ಲಿದೆ.
- 'ಮಾನವ- ವನ್ಯಜೀವಿ ಸಂಘರ್ಷದಲ್ಲಿ ನಲುಗಿರುವ ಪರಿಸರ ಸೂಕ್ಷ್ಮ ವಲಯದ ಈ ಭಾಗದಲ್ಲಿ ಗಣಿಗಾರಿಕೆ ಆರಂಭವಾದರೆ ಪರಿಸ್ಥಿತಿಯು ಮತ್ತಷ್ಟು ಬಿಗಡಾಯಿಸಲಿದೆ' ಎಂಬ ಆತಂಕವೂ ಇದೇ ವೇಳೆ ಪರಿಸರ ಹೋರಾಟಗಾರರಿಂದ ವ್ಯಕ್ತವಾಗಿದೆ.
- 'ವನ್ಯಜೀವಿ ಹಾಗೂ ಜನರ ಮೇಲೆ ಪರಿಣಾಮ ಬೀರುವ ಗಣಿಗಾರಿಕೆ, ವಾಣಿಜ್ಯ ಪ್ರವಾಸೋದ್ಯಮದಂಥ ಯೋಜನೆ ತರುವ ಮೊದಲು ಸ್ಥಳೀಯರು, ಸಂಘ- ಸಂಸ್ಥೆಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಸೂಕ್ತ' ಎನ್ನುತ್ತಾರೆ ವನ್ಯಜೀವಿ ಸಂರಕ್ಷಣಾವಾದಿ ಗಿರಿಧರ ಕುಲಕರ್ಣಿ.
- ***ಎಲ್ಲೆಲ್ಲಿ ಶೋಧ?:*** ಸರಗೂರು ಪಟ್ಟಣಕ್ಕೆ ಸಮೀಪದಲ್ಲೇ ಇರುವ ಶಾಂತಿಪುರ ಗ್ರಾಮದ ಸರ್ವೆ ಸಂಖ್ಯೆ 49, ಮಂಚಹಳ್ಳಿಯ ಸರ್ವೆ ಸಂಖ್ಯೆ 7, ಹುಣಸೇಹಳ್ಳಿಯ ಸರ್ವೆ ಸಂಖ್ಯೆ 54ರ ಅರಣ್ಯ ಪ್ರದೇಶ, ಅಡಹಳ್ಳಿ, ಹಳೆ ಮಂಚನಹಳ್ಳಿ, ಹುನುಗಹಳ್ಳಿ, ಇಟ್ನ, ಕಾಟೂರು, ಕೂಲ್ಯ, ಕುಂದಾಪಟ್ಟಣ, ಕೆ.ಬೆಳತೂರು, ಲಕ್ಕೂರು, ಮನುಗನಹಳ್ಳಿಯಲ್ಲಿ ಅದಿರು ಶೋಧ ನಡೆಯಲಿದೆ.

Dr. Rajkumar IAS/KAS Academy

## ❖ ವಿದೇಶಿ ಪ್ರವಾಸಿಗರು: ಹಿಂದೆ ಬಿದ್ದ ರಾಜ್ಯ

ಪ್ರಜಾವಾಣಿ ವಾರ್ತೆ

**ಭಾರತದಲ್ಲಿ ಪ್ರವಾಸಿಗರ ನೆಚ್ಚಿನ ರಾಜ್ಯಗಳ ಪೈಕಿ ಕರ್ನಾಟಕವೂ ಒಂದಾಗಿದೆ. ದೇಶಿ ಪ್ರವಾಸಿಗರನ್ನು ಸೆಳೆಯುವಲ್ಲಿ ಕರ್ನಾಟಕವು ಮುಂದಿದೆ. ಆದರೆ, ರಾಜ್ಯಕ್ಕೆ ಭೇಟಿ ನೀಡುತ್ತಿರುವ ವಿದೇಶಿ ಪ್ರವಾಸಿಗರ ಸಂಖ್ಯೆ ಕಡಿಮೆ ಇದೆ. ಮೂರು ವರ್ಷಗಳಿಂದ ವಿದೇಶಿ ಪ್ರವಾಸಿಗರ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿದ್ದರೂ ಅದು ಕೋವಿಡ್‌ಪೂರ್ವದ ಸಂಖ್ಯೆಯನ್ನು ಇನ್ನೂ ಮುಟ್ಟಿಲ್ಲ. ಗಮನಾರ್ಹ ಅಂಶವೆಂದರೆ, ಮೈಸೂರು, ಉಡುಪಿ, ಕೊಪ್ಪಳ ಜಿಲ್ಲೆಗಳು ಹೆಚ್ಚು ವಿದೇಶಿ ಪ್ರವಾಸಿಗರನ್ನು ಆಕರ್ಷಿಸುತ್ತಿವೆ**


‘ಒಂದು ರಾಜ್ಯ, ಹಲವು ಜಗತ್ತುಗಳು’ ಎನ್ನುವ ಧ್ಯೇಯಕ್ಕೆ ತಕ್ಕಂತೆ ಕರ್ನಾಟಕದ ಪ್ರವಾಸಿ ತಾಣಗಳು ವೈವಿಧ್ಯಮಯವಾಗಿವೆ. ಪಾರಂಪರಿಕ ತಾಣಗಳು, ಗಿರಿಧಾಮಗಳು, ಕಡಲ ತೀರಗಳು, ಅರಮನೆ, ಕೋಟೆ ಕೊತ್ತಲಗಳು ರಾಜ್ಯದಲ್ಲಿದ್ದು, ಪ್ರತಿವರ್ಷ ಕೋಟ್ಯಂತರ ಪ್ರವಾಸಿಗರನ್ನು ಆಕರ್ಷಿಸುತ್ತಿವೆ.

ದೇಶದಲ್ಲಿ ಹೆಚ್ಚು ದೇಶಿ ಪ್ರವಾಸಿಗರು ಭೇಟಿ ನೀಡುವ ರಾಜ್ಯಗಳ ಪೈಕಿ ಕರ್ನಾಟಕವು 2024ನೇ ಸಾಲಿನಲ್ಲಿ ಮೂರನೇ ಸ್ಥಾನದಲ್ಲಿದೆ. ಕಳೆದ ವರ್ಷ ರಾಜ್ಯಕ್ಕೆ 30.46 ಕೋಟಿ ದೇಶಿ ಪ್ರವಾಸಿಗರು ಭೇಟಿ ನೀಡಿದ್ದಾರೆ. ಕೋವಿಡ್ ಪೂರ್ವಕ್ಕಿಂತಲೂ ಹೆಚ್ಚು ದೇಶಿ ಪ್ರವಾಸಿಗರು ಈಗ ರಾಜ್ಯಕ್ಕೆ ಭೇಟಿ ನೀಡುತ್ತಿದ್ದಾರೆ. ಆದರೆ, ವಿದೇಶಿ ಪ್ರವಾಸಿಗರನ್ನು ಸೆಳೆಯುವಲ್ಲಿ ಕರ್ನಾಟಕ ಹಿಂದೆ ಬಿದ್ದಿದೆ. ಹೆಚ್ಚು ವಿದೇಶಿ ಪ್ರವಾಸಿಗರು ಭೇಟಿ ನೀಡುವ ಹತ್ತು ರಾಜ್ಯಗಳ ಪಟ್ಟಿಯಲ್ಲಿ ರಾಜ್ಯ ಸ್ಥಾನವನ್ನೇ ಪಡೆದಿಲ್ಲ. ಈ ಪಟ್ಟಿಯಲ್ಲಿ ಮಹಾರಾಷ್ಟ್ರ, ಪಶ್ಚಿಮ ಬಂಗಾಳ, ಉತ್ತರ ಪ್ರದೇಶ ಮುಂದಿವೆ.

2024ರಲ್ಲಿ ರಾಜ್ಯಕ್ಕೆ 4.85 ಲಕ್ಷ ವಿದೇಶಿ ಪ್ರವಾಸಿಗರು ಬಂದಿದ್ದರು. 2023ರಲ್ಲಿ ಈ ಸಂಖ್ಯೆ 4.09 ಲಕ್ಷ ಆಗಿತ್ತು. ಕೋವಿಡ್ ಸಂದರ್ಭದಲ್ಲಿ ರಾಜ್ಯಕ್ಕೆ ಭೇಟಿ ನೀಡಿದ ವಿದೇಶಿ ಪ್ರವಾಸಿಗರ ಸಂಖ್ಯೆ ಕುಸಿದಿತ್ತು. ಮೂರು ವರ್ಷಗಳಿಂದ ಈ ಸಂಖ್ಯೆ ಹೆಚ್ಚುತ್ತಿದ್ದರೂ ಕೋವಿಡ್‌ಪೂರ್ವ ಸಂಖ್ಯೆಯನ್ನು ಇನ್ನೂ ಮುಟ್ಟಿಲ್ಲ. 2019ರಲ್ಲಿ ರಾಜ್ಯಕ್ಕೆ 6.09 ಲಕ್ಷ ವಿದೇಶಿಯರು ಪ್ರವಾಸಕ್ಕಾಗಿ ಬಂದಿದ್ದರು.

ವಿದೇಶಿ ಪ್ರವಾಸಿಗರು ಹೆಚ್ಚು ಭೇಟಿ ನೀಡುವ ಸ್ಥಳಗಳಲ್ಲಿ ಮೈಸೂರು (1.37 ಲಕ್ಷ), ಉಡುಪಿ (89,849) ಮತ್ತು ಕೊಪ್ಪಳ (50,000) ಜಿಲ್ಲೆಗಳು ಮೊದಲ ಮೂರು ಸ್ಥಾನ ಪಡೆದಿವೆ. ರಾಜಧಾನಿ ಬೆಂಗಳೂರಿಗೆ 45,782 ವಿದೇಶಿ ಪ್ರವಾಸಿಗರು ಭೇಟಿ ನೀಡಿದ್ದಾರೆ.

ವಿಜಯನಗರ ಜಿಲ್ಲೆಯ ಹಂಪಿ ಸೇರಿದಂತೆ ಉತ್ತರ ಕರ್ನಾಟಕದ ಹಲವು ತಾಣಗಳು ವಿದೇಶಿಯರನ್ನು ಸೆಳೆಯುವಲ್ಲಿ ಮುಂದಿವೆ. ವಿಶ್ವ ಪಾರಂಪರಿಕ ತಾಣಗಳ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಹಂಪಿಯ ಜತೆಗೆ, ಐಹೊಳೆಯ ದುರ್ಗಾಂಬಾ ದೇವಸ್ಥಾನ, ಬದಾಮಿಯ ಜೈನ ಮತ್ತು ವೈಷ್ಣವ ಗುಹೆ, ಪಟ್ಟದಕಲ್ಲಿನ ವಿಶ್ವ ಪಾರಂಪರಿಕ ಸ್ಮಾರಕಗಳು, ವಿಜಯಪುರದ ಗೋಲ್‌ಗುಂಬಜ್, ಇಬ್ರಾಹಿಂ ರೋಜಾ, ಲಕ್ಕುಂಡಿಯ ದೇವಾಲಯಗಳು, ಬಳ್ಳಾರಿಯ ಕೋಟೆ, ಬೆಂಗಳೂರು ವಲಯ ವ್ಯಾಪ್ತಿಯ ಟಿಪ್ಪು ಸುಲ್ತಾನನ ಅರಮನೆ, ಚಿತ್ರದುರ್ಗದ ಕೋಟೆ, ದರಿಯಾ ದೌಲತ್, ಕೇಶವ ದೇವಸ್ಥಾನ ಮುಂತಾದವು ಹೆಚ್ಚು ವಿದೇಶಿಯರನ್ನು ಆಕರ್ಷಿಸುತ್ತಿವೆ.




### ಅಮೆರಿಕದವರೇ ಹೆಚ್ಚು

**ದೇಶದ** ಚಿತ್ರಣ ಭಿನ್ನವೇನಲ್ಲ. ಕೋವಿಡ್‌ಪೂರ್ವದಲ್ಲಿ, 2019ರಲ್ಲಿ 1.09 ಕೋಟಿ ವಿದೇಶಿ ಪ್ರವಾಸಿಗರು ಭಾರತಕ್ಕೆ ಭೇಟಿ ನೀಡಿದ್ದರು. ಕೋವಿಡ್ ಕಾಲದಲ್ಲಿ ಈ ಸಂಖ್ಯೆ ಗಣನೀಯವಾಗಿ ಕುಸಿದಿತ್ತು. ನಂತರದ ದಿನಗಳಲ್ಲಿ ಈ ಸಂಖ್ಯೆ ನಿಧಾನಕ್ಕೆ ಹೆಚ್ಚಾಗತೊಡಗಿತು. ವಿದೇಶಿಯರಿಗೆ ಹೋಲಿಸಿದರೆ ಅನಿವಾಸಿ ಭಾರತೀಯರೇ (ಎನ್‌ಆರ್‌ಐ) ಭಾರತಕ್ಕೆ ಹೆಚ್ಚು ಭೇಟಿ ನೀಡುತ್ತಿದ್ದು, ಇವರಿಂದಾಗಿ ಅಂತರರಾಷ್ಟ್ರೀಯ ಪ್ರವಾಸಿಗರ ಒಟ್ಟು ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿದೆ.

ಭಾರತಕ್ಕೆ ಭೇಟಿ ನೀಡುವ ವಿದೇಶಿಯರ ಪೈಕಿ ಅಮೆರಿಕದವರು ಮೊದಲ ಸ್ಥಾನದಲ್ಲಿದ್ದಾರೆ. 2024ರಲ್ಲಿ ಇವರ ಸಂಖ್ಯೆಯು 18 ಲಕ್ಷವಿದ್ದು, ಒಟ್ಟು ವಿದೇಶಿ ಪ್ರವಾಸಿಗರಲ್ಲಿ ಇವರ ಪ್ರಮಾಣವು ಶೇ 18.13ರಷ್ಟು ಇದೆ. ಇವರ ನಂತರದ ಸ್ಥಾನದಲ್ಲಿ ಬಾಂಗ್ಲಾದೇಶದವರು (ಶೇ 17.59) ಇದ್ದಾರೆ. ಮೂರನೇ ಸ್ಥಾನದಲ್ಲಿ ಬ್ರಿಟನ್ (ಶೇ 10.28), ನಾಲ್ಕನೇ ಸ್ಥಾನದಲ್ಲಿ ಆಸ್ಟ್ರೇಲಿಯಾ (ಶೇ 5.2) ಇವೆ. ಮಲೇಷ್ಯಾ, ಜರ್ಮನಿ, ಫ್ರಾನ್ಸ್ ಮತ್ತು ಸಿಂಗಪುರಗಳಿಂದಲೂ ಭಾರತಕ್ಕೆ ಹೆಚ್ಚು ಪ್ರವಾಸಿಗರು ಬರುತ್ತಿದ್ದಾರೆ.

### ಭಾರತಕ್ಕೆ ಭೇಟಿ ನೀಡಿದ ವಿದೇಶಿ ಮತ್ತು ಎನ್‌ಆರ್‌ಐ ಪ್ರವಾಸಿಗರು (ಕೋಟಿಗಳಲ್ಲಿ)





ವಿದೇಶಿ ಪ್ರವಾಸಿಗರ ಪೈಕಿ ದೇಶಕ್ಕೆ ಭೇಟಿ ನೀಡುವ ಹೆಚ್ಚಿನವರ (ಶೇ 45ರಷ್ಟು) ಉದ್ದೇಶವು ರಜೆ ಕಳೆಯುವುದು, ಹೊಸ ಸ್ಥಳಗಳನ್ನು ನೋಡುವುದು ಮತ್ತು ಮನರಂಜನೆ ಪಡೆಯುವುದು. ಶೇ 28.49ರಷ್ಟು ಮಂದಿ ಭಾರತದಲ್ಲಿರುವ ತಮ್ಮ ಬಂಧುಮಿತ್ರರನ್ನು ಭೇಟಿ ಮಾಡಲು, ಶೇ 10.52ರಷ್ಟು ಮಂದಿ ತಮ್ಮ ಉದ್ಯೋಗ/ವ್ಯಾಪಾರದ ನಿಮಿತ್ತ ದೇಶಕ್ಕೆ ಬರುತ್ತಿದ್ದಾರೆ.


ಆಧಾರ: ಇಂಡಿಯಾ ಟೂರಿಸಂ ದೇಟಾ ಕಂಪೆಂಡಿಯಮ್, ಪಾಸ್‌ಪೋರ್ಟ್ ಇಂಡೆಕ್ಸ್–2025, ಮಾಧ್ಯಮ ವರದಿಗಳು

### ರಾಜ್ಯಕ್ಕೆ ಭೇಟಿ ನೀಡಿದ ವಿದೇಶಿ ಪ್ರವಾಸಿಗರು (ಲಕ್ಷಗಳಲ್ಲಿ)





### ರಾಜ್ಯಕ್ಕೆ ಭೇಟಿ ನೀಡಿದ ದೇಶೀಯ ಪ್ರವಾಸಿಗರು (ಕೋಟಿಗಳಲ್ಲಿ)




### 2024ರಲ್ಲಿ ಹೆಚ್ಚು ವಿದೇಶಿ ಪ್ರವಾಸಿಗರು ಭೇಟಿ ನೀಡಿದ ರಾಜ್ಯಗಳು (ಲಕ್ಷಗಳಲ್ಲಿ)




### 2024ರಲ್ಲಿ ಹೆಚ್ಚು ದೇಶೀಯ ಪ್ರವಾಸಿಗರು ಭೇಟಿ ನೀಡಿದ ರಾಜ್ಯಗಳು (ಕೋಟಿಗಳಲ್ಲಿ)




### ಅವಕಾಶ ಸಾಕಷ್ಟು, ಸುಧಾರಿಸಬೇಕು ಇನ್ನಷ್ಟು

**ಕರ್ನಾಟಕವೂ** ಸೇರಿ ವಿವಿಧ ರಾಜ್ಯಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಪುಲ ಅವಕಾಶಗಳಿವೆ. ದೇಶದಲ್ಲಿ ವ್ಯವಸ್ಥೆ ಸುಧಾರಣೆಯಾದರೆ ಇನ್ನಷ್ಟು ವಿದೇಶಿ ಪ್ರವಾಸಿಗರನ್ನು ಸೆಳೆಯಬಹುದು. ಭಾರತವು ಸದ್ಯ 57 ರಾಷ್ಟ್ರಗಳ ಜನರಿಗೆ ಮಾತ್ರ ಬಂದಿಳಿದ ತಕ್ಷಣ ವೀಸಾ ನೀಡುವ ಸೌಲಭ್ಯವನ್ನು ಕಲ್ಪಿಸಿದೆ. ಈ ಕಾರಣಕ್ಕಾಗಿಯೇ ಜಾಗತಿಕ ಹೆನ್ಲೀ ಪಾಸ್‌ಪೋರ್ಟ್ ಸೂಚ್ಯಂಕದಲ್ಲಿ ಭಾರತದ ಸ್ಥಾನ ತುಂಬಾ ಕೆಳಮಟ್ಟದಲ್ಲಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ಸೂಚ್ಯಂಕದಲ್ಲಿ ಈ ವರ್ಷ ದೇಶವು ಐದು ಸ್ಥಾನ ಕುಸಿದಿದೆ. 199 ರಾಷ್ಟ್ರಗಳ ಪಾಸ್‌ಪೋರ್ಟ್‌ಗಳ ಪೈಕಿ ಭಾರತದ ಪಾಸ್‌ಪೋರ್ಟ್ 85ನೇ ಸ್ಥಾನ ಪಡೆದಿದೆ. ಕಳೆದ ವರ್ಷ 80ನೇ ಸ್ಥಾನ ಪಡೆದಿತ್ತು. ಏಷ್ಯಾದ ಸಿಂಗಪುರ (ಮೊದಲ ಸ್ಥಾನ), ದಕ್ಷಿಣ ಕೊರಿಯಾ (2ನೇ ಸ್ಥಾನ) ಜಪಾನ್‌ಗಳಿಗೆ (ಮೂರನೇ ಸ್ಥಾನ) ಹೋಲಿಸಿದರೆ ಭಾರತದ ಸ್ಥಾನ ನಗಣ್ಯ.


ನಿರ್ದಿಷ್ಟ ದೇಶಕ್ಕೆ ಭೇಟಿ ನೀಡುವುದಕ್ಕೂ ಮೊದಲು ಅಲ್ಲಿನ ವೀಸಾಕ್ಕೆ ಅರ್ಜಿ ಸಲ್ಲಿಸುವುದು, ಪೂರಕ ದಾಖಲೆಗಳನ್ನು ಒದಗಿಸುವುದು, ಒಪ್ಪಿಗೆ ಪಡೆಯುವುದು ಈ ಪ್ರಕ್ರಿಯೆಗಳು ಹೆಚ್ಚು ಸಮಯ ಬೇಡುತ್ತವೆ. ಇವು ಪ್ರವಾಸಿಗರಿಗೆ ಕಿರಿಕಿರಿಯಾಗಿ ಅವರು ಆ ದೇಶಕ್ಕೆ ಭೇಟಿ ನೀಡಲು ಹಿಂಜರಿಯುತ್ತಾರೆ. ಒಂದು ವೇಳೆ ವೀಸಾ ಇಲ್ಲದೆ, ದೇಶ ಪ್ರವೇಶಿಸಲು ಅವಕಾಶ ಕೊಟ್ಟು ನಂತರ ವೀಸಾ ನೀಡುವ ವ್ಯವಸ್ಥೆ ಮಾಡಿದರೆ ಆ ದೇಶಕ್ಕೆ ಇನ್ನಷ್ಟು ಪ್ರವಾಸಿಗರು ಭೇಟಿ ನೀಡಬಹುದು. ಕೇಂದ್ರ ಸರ್ಕಾರವು ಇಂಥ ಕ್ರಮ ಕೈಗೊಂಡರೆ ದೇಶಕ್ಕೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆಯಲ್ಲಿ ಏರಿಕೆ ಕಾಣಬಹುದು ಎಂಬುದು ಪ್ರವಾಸೋದ್ಯಮ ಕ್ಷೇತ್ರದಲ್ಲಿ ತೊಡಗಿರುವವರ ಮಾತು.


ದೇಶ ಮತ್ತು ಕರ್ನಾಟಕದ ಕೆಲವೇ ಕೆಲವು ಪ್ರವಾಸಿ ತಾಣಗಳನ್ನು ಬಿಟ್ಟು ಉಳಿದ ಕಡೆಗಳಲ್ಲಿ ಮೂಲಸೌಕರ್ಯಗಳ ಕೊರತೆ ಕಾಡುತ್ತಿದೆ. ಕೆಲವೆಡೆ ತಂಗುವ ಸೌಲಭ್ಯಗಳೂ ಇಲ್ಲ. ಸಾರಿಗೆ, ಶೌಚಾಲಯ, ನೀರು ಮುಂತಾದ ವ್ಯವಸ್ಥೆಗಳ ಕೊರತೆಯೂ ಇದೆ. ಬಹುಪಾಲು ತಾಣಗಳಲ್ಲಿ ಸ್ವಚ್ಛ ವಾತಾವರಣವೂ ಕಾಣಸಿಗುವುದಿಲ್ಲ. ಕೇಂದ್ರ ಹಾಗೂ ಆಯಾ ರಾಜ್ಯಗಳ ಪ್ರವಾಸೋದ್ಯಮ ಇಲಾಖೆಗಳು ಇವುಗಳ ಸುಧಾರಣೆಗೆ ಗಮನ ಹರಿಸಿದರೆ ಪ್ರವಾಸಿಗರ ಸಂಖ್ಯೆ ಹೆಚ್ಚುವುದು ಖಚಿತ.

## ❖ ₹14 ಸಾವಿರ ಕೋಟಿ ವಿದೇಶಿ ಹೂಡಿಕೆ

**ಸಂದರ್ಭ: ಸತತ ಮೂರು ತಿಂಗಳುಗಳಿಂದ ದೇಶದ ಬಂಡವಾಳ ಮಾರುಕಟ್ಟೆಗಳಿಂದ ಹಣವನ್ನು ಹಿಂದಕ್ಕೆ ಪಡೆಯುತ್ತಿದ್ದ ವಿದೇಶಿ ಹೂಡಿಕೆದಾರರು (ಎಫ್‌ಪಿಐ) ಅಕ್ಟೋಬರ್ ತಿಂಗಳಲ್ಲಿ ನಿವ್ವಳ ₹14,610 ಕೋಟಿ ಹೂಡಿಕೆ ಮಾಡಿದ್ದಾರೆ.**

- ದೇಶದ ಕಾರ್ಪೊರೇಟ್ ಕಂಪನಿಗಳ ವರಮಾನ ಗಳಿಕೆಯು ಚೆನ್ನಾಗಿ ಇರುವುದು, ಅಮೆರಿಕದ ಫೆಡರಲ್ ರಿಸರ್ವ್ ಬಡ್ಡಿ ದರವನ್ನು ಇಳಿಕೆ ಮಾಡಿರುವುದು ಮತ್ತು ಭಾರತ-ಅಮೆರಿಕ ನಡುವೆ ವಾಣಿಜ್ಯ ಒಪ್ಪಂದವೊಂದು ಶೀಘ್ರವೇ ಸಾಧ್ಯವಾಗ ಬಹುದು ಎಂಬ ಆಶಾಭಾವನೆಯಲ್ಲಿ ಅವರು ಈ ಹೂಡಿಕೆ ಮಾಡಿದ್ದಾರೆ.
- ವಿದೇಶಿ ಹೂಡಿಕೆದಾರರು ಸೆಪ್ಟೆಂಬರ್‌ನಲ್ಲಿ ₹23,885 ಕೋಟಿ, ಆಗಸ್ಟ್‌ನಲ್ಲಿ ₹34,990 ಕೋಟಿ ಹಾಗೂ ಜುಲೈನಲ್ಲಿ ₹17,700 ಕೋಟಿ ಹೂಡಿಕೆಯನ್ನು ಹಿಂಪಡೆದಿದ್ದರು. ಅಕ್ಟೋಬರ್ ತಿಂಗಳಲ್ಲಿ ವಿದೇಶಿ ಹೂಡಿಕೆದಾರರ ನಿಲುವು ಬದಲಾಗಿದೆ. ಅಂದರೆ, ಜಾಗತಿಕ ಹೂಡಿಕೆದಾರರಿಗೆ ಭಾರತದ ಬಂಡವಾಳ ಮಾರುಕಟ್ಟೆಗಳ ಮೇಲೆ ಹೊಸದಾಗಿ ವಿಶ್ವಾಸ ಮೂಡಿದೆ.
- ದೇಶದ ಷೇರುಪೇಟೆಗಳಲ್ಲಿ ಈಚೆಗೆ ಕಂಡುಬಂದ ಇಳಿಕೆ ಹಾಗೂ ಕಾರ್ಪೊರೇಟ್ ಕಂಪನಿಗಳು ಉತ್ತಮ ಫಲಿತಾಂಶ ತೋರಿರುವ ಕಾರಣದಿಂದಾಗಿ ದೇಶದ ಷೇರುಗಳ ಮೌಲ್ಯವು ಆಕರ್ಷಕವಾಗಿ ಕಾಣಲಾರಂಭಿಸಿದೆ. ವಿದೇಶಿ ಹೂಡಿಕೆದಾರರು ಭಾರತದ ಮಾರುಕಟ್ಟೆಗಳತ್ತ ಮತ್ತೆ ಮರಳಿ ರುವುದಕ್ಕೆ ಇದೂ ಒಂದು ಕಾರಣ ಎಂದು ಮಾರ್ನಿಂಗ್‌ಸ್ಟಾರ್ ಇನ್ವೆಸ್ಟ್‌ಮೆಂಟ್ ರಿಸರ್ಚ್ ಇಂಡಿಯಾ ಸಂಸ್ಥೆಯ ಸಂಶೋಧನಾ ನಿರ್ವಾಹಕ ಹಿಮಾಂಶು ಶ್ರೀವಾಸ್ತವ ಹೇಳಿದ್ದಾರೆ.
- ದೇಶದ ಅರ್ಥ ವ್ಯವಸ್ಥೆಯಲ್ಲಿನ ಸ್ಥಿರತೆ, ಜಾಗತಿಕ ಮಟ್ಟದಲ್ಲಿ ಪೂರಕ ಪರಿಸ್ಥಿತಿ ಹಾಗೂ ದೇಶದ ಕಾರ್ಪೊರೇಟ್ ಕಂಪನಿಗಳ ವರಮಾನದಲ್ಲಿ ಸ್ಥಿರತೆ ಕಂಡುಬಂದರೆ ಮುಂದಿನ ದಿನಗಳಲ್ಲಿಯೂ ವಿದೇಶಿ ಹೂಡಿಕೆದಾರರು ಹೂಡಿಕೆಯನ್ನು ಮುಂದುವರಿಸಬಹುದು ಎಂದು ಶ್ರೀವಾಸ್ತವ ಹೇಳಿದ್ದಾರೆ.
- ‘ಕಾರ್ಪೊರೇಟ್ ಕಂಪನಿಗಳ ವರಮಾನವು ಸುಧಾರಿಸಿದ ಸ್ಪಷ್ಟ ಲಕ್ಷಣಗಳು ಇವೆ. ಬೇಡಿಕೆಯಲ್ಲಿ ಉತ್ತಮ ಮಟ್ಟವು ಮುಂದುವರಿದರೆ ವರಮಾನವು ಇನ್ನಷ್ಟು ಹೆಚ್ಚಾಗುತ್ತದೆ. ಆಗ ಷೇರುಗಳ ಮೌಲ್ಯವು ಇನ್ನಷ್ಟು ಸಮಾಧಾನಕರವಾಗುತ್ತದೆ. ಹಾಗೆ ಆದಾಗ ವಿದೇಶಿ ಹೂಡಿಕೆದಾರರು ಹೂಡಿಕೆ ಮುಂದುವರಿಸುವ ಸಾಧ್ಯತೆ ಇದೆ’ ಎಂದು ಜಿಯೋಜಿತ್ ಇನ್ವೆಸ್ಟ್‌ಮೆಂಟ್ಸ್ ಸಂಸ್ಥೆಯ ಮುಖ್ಯ ಹೂಡಿಕೆ ತಜ್ಞ ವಿ.ಕೆ. ವಿಜಯಕುಮಾರ್ ಹೇಳಿದ್ದಾರೆ.



# ದೇಶದಾದ್ಯಂತ ವೈರಾಣು ಸೋಂಕು ಪ್ರಕರಣ ಹೆಚ್ಚಳ

ದೇಶದ ಜನರಲ್ಲಿ ವೈರಾಣು ಸೋಂಕಿನ ಪ್ರಕರಣಗಳು 2025ರ ಅವಧಿಯಲ್ಲಿ ಹೆಚ್ಚಾಗಿವೆ. ಭಾರತೀಯ ವೈದ್ಯಕೀಯ ಸಂಶೋಧನಾ ಪರಿಷತ್ತಿನ (ಐಸಿಎಂಆರ್) ಅಡಿ ಬರುವ ಎಲ್ಲ ಪ್ರಯೋಗಾಲಯಗಳಲ್ಲಿ ದೇಶದಾದ್ಯಂತ 4.5 ಲಕ್ಷ ರೋಗಿಗಳನ್ನು ಪರೀಕ್ಷಿಸಲಾಗಿದೆ. ಇವರಲ್ಲಿ ಶೇ 11.1ರಷ್ಟು ಮಂದಿಯಲ್ಲಿ ರೋಗಕಾರಕ ವೈರಾಣುಗಳು ಪತ್ತೆಯಾಗಿವೆ. ಈ ಬಗ್ಗೆ ಐಸಿಎಂಆರ್ ವರದಿ ಬಿಡುಗಡೆ ಮಾಡಿದೆ. ಪ್ರತೀ ವರ್ಷವು ಐಸಿಎಂಆರ್ ಇಂಥ ಪರೀಕ್ಷೆಗಳನ್ನು ನಡೆಸುತ್ತದೆ

## 0.8% ಅಂಶಗಳಷ್ಟು ಏರಿಕೆ

ಮಾದರಿಗಳ ಸಂಖ್ಯೆ | ಸೋಂಕಿನ ಪ್ರಕರಣಗಳು | ಸೋಂಕು ಹರಡುವಿಕೆ ಪ್ರಮಾಣ

| ಅವಧಿ | ಮಾದರಿಗಳ ಸಂಖ್ಯೆ | ಸೋಂಕಿನ ಪ್ರಕರಣಗಳು | ಸೋಂಕು ಹರಡುವಿಕೆ ಪ್ರಮಾಣ |
|---|---|---|---|
| ಜನವರಿ - ಮಾರ್ಚ್ | 2.28 ಲಕ್ಷ | 24,502 | 10.7 % |
| ಏಪ್ರಿಲ್ - ಜೂನ್ | 2.26 ಲಕ್ಷ | 26,055 | 11.5 % |

### ‘ಎಚ್ಚರಿಕೆ ಗಂಟೆ’

ವೈರಾಣು ಹರಡುವಿಕೆಯ ಪ್ರಮಾಣದ ಏರಿಕೆಯು ದೊಡ್ಡ ಮಟ್ಟದಲ್ಲಿ ಇಲ್ಲ. ಆದರೂ ಇದನ್ನು ಕಡೆಗಣಿಸಲು ಸಾಧ್ಯವಿಲ್ಲ. ಇದೇ ರೀತಿ ತ್ರೈಮಾಸಿಕದ ಅವಧಿಯಲ್ಲಿ ಇಂಥ ಪರಿಶೀಲನೆಗಳನ್ನು ನಡೆಸಿದರೆ, ಭವಿಷ್ಯದಲ್ಲಿ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಬಹುದು

ಹಿರಿಯ ವಿಜ್ಞಾನಿಗಳು


### ಪ್ರಮುಖ ರೋಗಕಾರಕ ವೈರಾಣು

1. ತೀವ್ರ/ಸಾಮಾನ್ಯ ಉಸಿರಾಟ ಸಂಬಂಧಿ ಸೋಂಕಿನಲ್ಲಿ ಇನ್‌ಫ್ಲುಯೆನ್ಜಾ ಪತ್ತೆ
2. ತೀವ್ರ ಜ್ವರ ಪ್ರಕರಣಗಳಲ್ಲಿ ಡೆಂಗಿ ಸೋಂಕು ಮತ್ತು ತೀವ್ರ ರಕ್ತಸ್ರಾವ ಆಗುವುದು ಪತ್ತೆ
3. ಜಾಂಡೀಸ್ ಪ್ರಕರಣಗಳಲ್ಲಿ ಹೆಪಟೈಟೀಸ್ ಎ ಪತ್ತೆ
4. ಅತಿಸಾರ ಪ್ರಕರಣಗಳಲ್ಲಿ ನೋರೊವೈರಸ್ ಪತ್ತೆ
5. ಮಿದುಳಿನ ತೀವ್ರ ಉರಿಯೂತ ಪ್ರಕರಣಗಳಲ್ಲಿ ಹರ್ಪಿಸ್ ಸಿಂಪ್ಲೆಕ್ಸ್ ವೈರಾಣು ಪತ್ತೆ

### ರೋಗ ವಲಯ...

ಒಂದು ರೋಗವು ಪ್ರತಿ ವರ್ಷವೂ ಅದೇ ಅವಧಿಯಲ್ಲಿ ಒಂದು ನಿರ್ದಿಷ್ಟ ಪ್ರದೇಶದಲ್ಲಿ ಹರಡಿಕೊಂಡರೆ, ಅದನ್ನು ‘ರೋಗ ವಲಯ’ ಎನ್ನಲಾಗುವುದು. ಏಪ್ರಿಲ್‌ನಿಂದ ಜೂನ್‌ವರೆಗೆ ಇಂಥ 191 ವಲಯಗಳನ್ನು ಪತ್ತೆ ಮಾಡಲಾಗಿದೆ. ಜನವರಿಯಿಂದ ಮಾರ್ಚ್‌ವರೆಗೆ ಇಂಥ 389 ವಲಯಗಳನ್ನು ಪತ್ತೆ ಮಾಡಲಾಗಿದೆ.

**ಆಧಾರ:** ಪಿಟಿಐ

## ❖ ಡಿಜಿಟಲ್ ಅರೆಸ್ಟ್ ವಿರುದ್ಧ ಕಠಿಣ ಕಾನೂನು: ಸುಪ್ರೀಂ

**ಸಂದರ್ಭ: 'ಡಿಜಿಟಲ್ ಅರೆಸ್ಟ್' ಹೆಸರಿನಲ್ಲಿ ದೇಶದ ಜನರನ್ನು ಬೆದರಿಸಿ ₹3,000 ಕೋಟಿಗೂ ಹೆಚ್ಚು ಮೊತ್ತವನ್ನು ಸುಲಿಗೆ ಮಾಡಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ಮತ್ತು ಸಿಬಿಐ ಸುಪ್ರೀಂ ಕೋರ್ಟ್‌ಗೆ ತಿಳಿಸಿವೆ. ಈ ಕುರಿತು ತೀವ್ರ ಆಘಾತ ವ್ಯಕ್ತಪಡಿಸಿರುವ ಸುಪ್ರೀಂ ಕೋರ್ಟ್, 'ಈ ಪಿಡುಗು ನಿಯಂತ್ರಣಕ್ಕೆ ಕಠಿಣ ಕ್ರಮ ಅಗತ್ಯ' ಎಂದು ಹೇಳಿದೆ.**

- ಹರಿಯಾಣದ ವೃದ್ಧ ದಂಪತಿ ತಾವು 'ಡಿಜಿಟಲ್ ಅರೆಸ್ಟ್' ನಲ್ಲಿ ₹1.5 ಕೋಟಿ ಕಳೆದುಕೊಂಡಿರುವ ಬಗ್ಗೆ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರಿಗೆ ಪತ್ರ ಬರೆದಿದ್ದರು. ಇದನ್ನು ಆಧರಿಸಿ ನ್ಯಾಯಾಲಯವು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ವಿಚಾರಣೆ ನಡೆಸುತ್ತಿದೆ.
- ಎಲ್ಲ ಕೇಂದ್ರಾಡಳಿತ ಪ್ರದೇಶಗಳು ಮತ್ತು ರಾಜ್ಯಗಳು ತಮ್ಮ ವ್ಯಾಪ್ತಿಯಲ್ಲಿ ನಡೆದ ಇಂಥ ಪ್ರಕರಣಗಳ ಮಾಹಿತಿ ನೀಡುವಂತೆ ಸುಪ್ರೀಂ ಕೋರ್ಟ್ ಅ.27ರಂದು ನಡೆದ ವಿಚಾರಣೆ ವೇಳೆ ಸೂಚನೆ ನೀಡಿತ್ತು. ಇದರಂತೆ, ಕೇಂದ್ರ ಗೃಹ ಸಚಿವಾಲಯ ಮತ್ತು ಸಿಬಿಐ ಮುಚ್ಚಿದ ಲಕೋಟೆಯಲ್ಲಿ ವರದಿ ನೀಡಿವೆ.
- ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್, ಉಜ್ಜಲ್ ಭುಯಾನ್ ಮತ್ತು ಜಾಯ್ ಮಾಲ್ಯಾ ಬಾಗ್ಚಿ ಅವರಿರುವ ಪೀಠವು ಈ ವರದಿಯನ್ನು ಪರಿಶೀಲಿಸಿತು. 'ಗೃಹ ಸಚಿವಾಲಯ ಮತ್ತು ಸಿಬಿಐ ವರದಿಯನ್ನು ಪರಿಶೀಲಿಸಿ ನಮ್ಮ ಕಚೇರಿಯು ಸಣ್ಣ ವರದಿಯೊಂದನ್ನು ಸಿದ್ಧಪಡಿಸಿದೆ' ಎಂದು ಪೀಠ ತಿಳಿಸಿತು.
- 'ಡಿಜಿಟಲ್ ಅರೆಸ್ಟ್' ಎನ್ನುವುದು ನಾವು ಅಂದುಕೊಂಡಿದ್ದಕ್ಕಿಂತ ಬಹಳ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ. ವರದಿಯನ್ನು ನೋಡಿದರೆ ದಿಗಿಲಾಗುತ್ತಿದೆ ಎಂದರು.
- ***<u>ಅಮಿಕಸ್ ಕ್ಯೂರಿ ನೇಮಕ:</u>*** ಸೈಬರ್ ಅಪರಾಧ, ಪ್ರಮುಖವಾಗಿ 'ಡಿಜಿಟಲ್ ಅರೆಸ್ಟ್' ಹೆಸರಿನ ವಂಚನೆ ನಿಯಂತ್ರಣ ಕುರಿತು ನ್ಯಾಯಾಲಯಕ್ಕೆ ಸಲಹೆ ಮತ್ತು ಸಹಕಾರ ನೀಡಲು ಅಮಿಕಸ್ ಕ್ಯೂರಿಯನ್ನು ನೇಮಿಸಲಾಗುವುದು ಎಂದು ಪೀಠ ಹೇಳಿತು. ಹಿರಿಯ ವಕೀಲೆ, ಸೈಬರ್ ಕಾನೂನು ತಜ್ಞ ಎನ್.ಎಸ್. ನಪ್ಪಿನಾಯ್ ಅವರನ್ನು ಅಮಿಕಸ್ ಕ್ಯೂರಿಯನ್ನಾಗಿ ನೇಮಿಸಿತು. ಸೈಬರ್ ಅಪರಾಧಗಳಿಗೆ ಸಂಬಂಧಿಸಿ ಕಾನೂನುಗಳ ಬಗ್ಗೆ ಮಾಹಿತಿ ನೀಡುವ 'ಸೈಬರ್ ಸಾಥಿ' ಎಂಬ ವೆಬ್‌ಸೈಟ್ ಅನ್ನೂ ಇವರು ಸ್ಥಾಪಿಸಿದ್ದಾರೆ.
- 'ಕೇಂದ್ರ ಗೃಹ ಸಚಿವಾಲಯದಲ್ಲಿ ಪ್ರತ್ಯೇಕ ತಂಡವೊಂದು ಸೈಬರ್ ಅಪರಾಧಗಳಿಗೆ ಸಂಬಂಧಿಸಿ ಕೆಲಸ ಮಾಡುತ್ತಿದೆ, ಬೇಕಾದ ಕ್ರಮಗಳನ್ನೂ ಕೈಗೊಂಡಿದೆ' ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಪೀಠಕ್ಕೆ ತಿಳಿಸಿದರು. ಅಮಿಕಸ್ ಕ್ಯೂರಿ ಅವರಿಂದ ಸಲಹೆ ಪಡೆದ ಬಳಿಕ ಕೆಲವು ಮಾರ್ಗಸೂಚಿಗಳನ್ನು ನೀಡುವುದಾಗಿ ಹೇಳಿದ ಪೀಠವು, ಮುಂದಿನ ವಿಚಾರಣೆಯನ್ನು ನ.10ಕ್ಕೆ ಮುಂದೂಡಿತು.

## ❖ 'ನೊಬೆಲ್' ಪುರಸ್ಕೃತರ ಜತೆ ಸಂವಾದ

**ಸಂದರ್ಭ: ಸಮಾಜದ ಅಭ್ಯುದಯ ಮತ್ತು ಪ್ರಗತಿಯ ಸಾಧ್ಯತೆಗಳು ಸದ್ಯ ತಿರುವು ದಾರಿಗೆ ಬಂದು ನಿಂತಿವೆ ಎಂದು ನೊಬೆಲ್ ಪ್ರಶಸ್ತಿ ಪುರಸ್ಕೃತ ಜೇಮ್ಸ್ ರಾಬಿನ್‌ಸನ್ ಅಭಿಪ್ರಾಯಪಟ್ಟರು. ಟಾಟಾ ಟ್ರಸ್ಟ್ ಸಹಭಾಗಿತ್ವದಲ್ಲಿ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ಆಯೋಜಿಸಿದ್ದ ಸಂವಾದದಲ್ಲಿ ಅವರು ಮಾತನಾಡಿದರು.**

- 'ಒನ್ ವೇ ಸ್ಟ್ರೀಟ್' ಸಿದ್ಧಾಂತವನ್ನು ವಿವರಿಸಿದ ಅವರು, 'ನಾನು ಸಮೃದ್ಧಿ ಮತ್ತು ಪ್ರಗತಿ ಬಗ್ಗೆ ಯೋಚಿಸುವಾಗ, ಈ ವಿಚಾರಗಳ ಕುರಿತ ಚಿಂತನೆ ಯಾವಾಗ ಪ್ರಾರಂಭವಾಯಿತು' ಎಂಬ ಪ್ರಶ್ನೆ ತಲೆದೋರುತ್ತದೆ. ಇದನ್ನು ವಿಶ್ವ ಇತಿಹಾಸದ ಅನೇಕ ಹಂತಗಳಲ್ಲಿ ಪರಿಗಣಿಸಬಹುದು. ಆದರೆ, ಅದಕ್ಕೆ ಒಂದು ಉಲ್ಲೇಖದ ಬಿಂದುವಾಗಿ ಇಬ್ಬರು ಸ್ಕಾಟ್‌ಲೆಂಡ್ ಚಿಂತಕರು **18ನೇ ಶತಮಾನದಲ್ಲಿ ನಡೆದ ನಗರೀಕರಣ, ಕೈಗಾರೀಕರಣ, ಸಾಮಾಜಿಕ ಬದಲಾವಣೆ** ಗಮನಿಸುತ್ತಾ ಒಂದು ಸಿದ್ಧಾಂತ ರೂಪಿಸಿದರು. ಅದನ್ನು 'ಒನ್ ವೇ ಸ್ಟ್ರೀಟ್ ಸಿದ್ಧಾಂತ' ಎಂದು ಕರೆಯುವೆ' ಎಂದರು.

# ಸಿಗದ ಎಫ್‌ಆರ್‌ಪಿ ರಾಜ್ಯದ ಕಬ್ಬು ನೆರೆರಾಜ್ಯಕ್ಕೆ

**ರಾಜ್ಯದ ಹಲವು ಜಿಲ್ಲೆಗಳಲ್ಲಿ ಕಬ್ಬು ಅರೆಯುವಿಕೆ ಆರಂಭಗೊಂಡಿದೆ. ಕೇಂದ್ರ ಸರ್ಕಾರ ಎಫ್‌ಆರ್‌ಪಿಯನ್ನು ನಿಗದಿ ಪಡಿಸಿದೆ. ಅದರ ಆಧಾರದಲ್ಲಿ ರಾಜ್ಯದಲ್ಲೂ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶನಾಲಯ ಕಾರ್ಖಾನೆವಾರು ಎಫ್‌ಆರ್‌ಪಿ ನಿಗದಿಪಡಿಸಿ ಆದೇಶ ಹೊರಡಿಸಿದೆ. ಆದರೆ, ನಿಗದಿತ ದರವನ್ನು ನೀಡಲು ಕಾರ್ಖಾನೆಗಳು ಹಿಂದೆ ಮುಂದೆ ನೋಡುತ್ತಿವೆ. ನಷ್ಟವನ್ನು ತಪ್ಪಿಸುವುದಕ್ಕಾಗಿ ರಾಜ್ಯದ ಗಡಿ ಜಿಲ್ಲೆಗಳಾದ ಬೆಳಗಾವಿ, ವಿಜಯಪುರ, ಕಲಬುರಗಿ, ಚಾಮರಾಜನಗರದ ಜಿಲ್ಲೆಯ ಬೆಳೆಗಾರರು, ಉತ್ತಮ ದರ ನೀಡುತ್ತಿರುವ ನೆರೆ ರಾಜ್ಯಗಳ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಪೂರೈಸುತ್ತಿದ್ದಾರೆ**

ಪ್ರಜಾವಾಣಿ ವಾರ್ತೆ

ಕೇಂದ್ರ ಸರ್ಕಾರವು ಪ್ರತಿ ಟನ್ ಕಬ್ಬಿಗೆ ನಿಗದಿಪಡಿಸಿರುವ ನ್ಯಾಯಸಮ್ಮತ ಮತ್ತು ಲಾಭದಾಯಕ ದರ (ಎಫ್‌ಆರ್‌ಪಿ) ಆಧಾರದಲ್ಲಿ ರಾಜ್ಯದಲ್ಲಿ ಬೆಲೆ ನಿಗದಿ ಮಾಡಲಾಗಿದ್ದರೂ ಸಕ್ಕರೆ ಕಾರ್ಖಾನೆಗಳು ಕಡಿಮೆ ದರ ನೀಡಲು ಮುಂದಾಗಿವೆ. ಈ ಕಾರಣಕ್ಕೆ ರಾಜ್ಯದ ಗಡಿ ಭಾಗದ ಜಿಲ್ಲೆಗಳ ಕಬ್ಬು ಬೆಳೆಗಾರರು ಹೆಚ್ಚಿನ ದರ ನೀಡುತ್ತಿರುವ ಮತ್ತು ಸಕಾಲದಲ್ಲಿ ಹಣ ಪಾವತಿಸುತ್ತಿರುವ ಹೊರರಾಜ್ಯಗಳ ಸಕ್ಕರೆ ಕಾರ್ಖಾನೆಗಳತ್ತ ಮುಖ ಮಾಡುತ್ತಿದ್ದಾರೆ.

ಉತ್ತರ ಕರ್ನಾಟಕ ಭಾಗದ ಗಡಿ ಜಿಲ್ಲೆಗಳಾದ ಬೆಳಗಾವಿ, ವಿಜಯಪುರ, ಕಲಬುರಗಿಯ ಕಬ್ಬು ಬೆಳೆಗಾರರು ಮಹಾರಾಷ್ಟ್ರದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಮಾರಾಟ ಮಾಡುತ್ತಿದ್ದಾರೆ. ದಕ್ಷಿಣದ ಚಾಮರಾಜನಗರ ಜಿಲ್ಲೆಯಲ್ಲಿ ಬೆಳೆಗಾರರು ತಮಿಳುನಾಡಿನ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಪೂರೈಸುತ್ತಿದ್ದಾರೆ.

ಕೇಂದ್ರ ಸರ್ಕಾರವು 2025ರ ಸಾಲಿಗೆ ಶೇ 10.25ರಷ್ಟು ಇಳುವರಿ (recovery rate) ಇರುವ ಟನ್ ಕಬ್ಬಿಗೆ ₹3,550 ನಿಗದಿ ಮಾಡಿದೆ. ಇದರ ಆಧಾರದಲ್ಲಿ ರಾಜ್ಯ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಆಯುಕ್ತರು ರಾಜ್ಯದಲ್ಲಿರುವ 81 ಕಾರ್ಖಾನೆಗಳು 2025–26ನೇ ಸಾಲಿಗೆ ಬೆಳೆಗಾರರಿಗೆ ಮೊದಲ ಕಂತಿನಲ್ಲಿ ಪಾವತಿಸಬೇಕಾದ ದರವನ್ನು ನಿಗದಿಪಡಿಸಿ ಸೆಪ್ಟೆಂಬರ್ 15ರಂದು ಆದೇಶ ಹೊರಡಿಸಿದ್ದಾರೆ. 2024–25ನೇ ಸಾಲಿನಲ್ಲಿ ಕಾರ್ಖಾನೆಗಳಲ್ಲಿ ಅರೆದ ಕಬ್ಬಿನಿಂದ ಉತ್ಪಾದನೆಯಾದ ಸಕ್ಕರೆಯ ಆಧಾರದಲ್ಲಿ ಎಫ್‌ಆರ್‌ಪಿ ನಿಗದಿಪಡಿಸಲಾಗಿದೆ.

ಆದರೆ, ರಾಜ್ಯದ ಯಾವ ಕಾರ್ಖಾನೆಯೂ ಇಷ್ಟು ಬೆಲೆ ನೀಡಲು ಮುಂದಾಗಿಲ್ಲ. ₹2,700ರಿಂದ ₹3,100ರವರೆಗೆ ದರ ನೀಡಲು ತೀರ್ಮಾನಿಸಿವೆ.

ಸಾಮಾನ್ಯವಾಗಿ ಕಾರ್ಖಾನೆಗಳು ಕಬ್ಬಿನ ಕಟಾವು ಮತ್ತು ಸಾಗಣೆ ವೆಚ್ಚವನ್ನು ಲೆಕ್ಕಹಾಕಿ ಅದನ್ನು ದರದಲ್ಲಿ ಕಡಿತ ಮಾಡುತ್ತವೆ. ₹800ರಿಂದ ₹900ವರೆಗೂ ಕಡಿತ ಮಾಡುತ್ತವೆ. ಹಾಗಾದಾಗ, ಟನ್ ಕಬ್ಬಿನ ದರ ಇನ್ನಷ್ಟು ಕಡಿಮೆಯಾಗುತ್ತದೆ.

‘ರಾಜ್ಯದಲ್ಲಿ ಕಾರ್ಖಾನೆಗಳು ನೀಡುವ ದರವನ್ನು ನೋಡಿದಾಗ, ಮಹಾರಾಷ್ಟ್ರದಲ್ಲಿ ಇಲ್ಲಿಗಿಂತ ಪ್ರತಿ ಟನ್‌ಗೆ ₹300–₹400 ಹೆಚ್ಚು ಸಿಗುತ್ತಿದೆ. ಅಲ್ಲಿನ ಕಾರ್ಖಾನೆಗಳು ಪ್ರತಿ ಟನ್ ಕಬ್ಬಿಗೆ ₹3,400 ನೀಡುತ್ತಿವೆ. ರಾಜ್ಯದ ಕಾರ್ಖಾನೆಗಳು ಹಣ ಪಾವತಿಯನ್ನು ವಿಳಂಬ ಮಾಡುತ್ತಿವೆ. ಅಲ್ಲಿನ ಕಾರ್ಖಾನೆಗಳು ತಕ್ಷಣ ಪಾವತಿಸುತ್ತಿವೆ. ಇಲ್ಲಿ ಕಡಿಮೆ ಪಾವತಿಯ ಜೊತೆಗೆ ತೂಕ, ಇಳುವರಿ ಪ್ರಮಾಣದಲ್ಲೂ ಕಾರ್ಖಾನೆಗಳು ಮೋಸ ಮಾಡುತ್ತವೆ’ ಎಂದು ಹೇಳುತ್ತಾರೆ ಕಬ್ಬು ಬೆಳೆಗಾರರು.

‘ಕೇಂದ್ರ ಸರ್ಕಾರವು ಶೇ 10.25ರಷ್ಟು ಇಳುವರಿ ದರ ಆಧರಿಸಿ ಎಫ್‌ಆರ್‌ಪಿ ನಿಗದಿ ಮಾಡಿದೆ. ಇದು ಕೂಡ ಅವೈಜ್ಞಾನಿಕ. ಇಳುವರಿ ಪ್ರಮಾಣ ಶೇ 9.5ರ ಆಧಾರದ ಮೇಲೆ ಎಫ್‌ಆರ್‌ಪಿ ಘೋಷಿಸಬೇಕು. ಆಗ ಮಾತ್ರ ರೈತರಿಗೆ ಲಾಭದಾಯಕ ದರ ಸಿಗಲು ಸಾಧ್ಯ. ಎಫ್‌ಆರ್‌ಪಿ ಘೋಷಣೆ ಮಾಡಿದ ಮೇಲೂ ದರ ಪರಿಷ್ಕರಣೆ ಮಾಡುವ ಅಧಿಕಾರ ಕರ್ನಾಟಕ ಕಬ್ಬು ನಿಯಂತ್ರಣ ಮಂಡಳಿಗೆ ಇದೆ. ರಾಜ್ಯದ ಬಹುಪಾಲು ಕಾರ್ಖಾನೆಗಳನ್ನು ಜನಪ್ರತಿನಿಧಿಗಳು, ರಾಜಕಾರಣಿಗಳೇ ನಡೆಸುತ್ತಿದ್ದಾರೆ. ಅವರು ಮಂಡಳಿಯನ್ನು ಹಿಡಿತದಲ್ಲಿಟ್ಟು ದರ ಪರಿಷ್ಕರಣೆ ಆಗದಂತೆ ನೋಡಿಕೊಳ್ಳುತ್ತಿದ್ದಾರೆ’ ಎಂಬುದು ಅವರ ತಕರಾರು.



| | | | |
|---|---|---|---|
| **9.87** ಲಕ್ಷ ಹೆಕ್ಟೇರ್‌ಗೂ ಹೆಚ್ಚು ಕರ್ನಾಟಕದಲ್ಲಿ ಕಬ್ಬು ಬೆಳೆಯುವ ಪ್ರದೇಶದ ವಿಸ್ತೀರ್ಣ | **81** ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳು | **29** ಬೆಳಗಾವಿ ಜಿಲ್ಲೆಯಲ್ಲಿರುವ ಕಾರ್ಖಾನೆಗಳು | **5.40** ಕೋಟಿ ಟನ್ ರಾಜ್ಯದಲ್ಲಿ 2024ರಲ್ಲಿ ಉತ್ಪಾದನೆಯಾದ ಕಬ್ಬು |
| **1.94** ಕೋಟಿ ಟನ್ ಕಳೆದ ವರ್ಷ ಬೆಳಗಾವಿ ಜಿಲ್ಲೆಯಲ್ಲಿ ನುರಿಸಲಾದ ಕಬ್ಬಿನ ಪ್ರಮಾಣ | **41** ಲಕ್ಷ ಟನ್ ಕರ್ನಾಟಕದಲ್ಲಿ 2024ರಲ್ಲಿ ಉತ್ಪಾದನೆಯಾದ ಸಕ್ಕರೆಯ ಅಂದಾಜು ಪ್ರಮಾಣ | **16.15** ಲಕ್ಷ ಟನ್ ಬೆಳಗಾವಿಯಲ್ಲಿ ಕಳೆದ ವರ್ಷ ಉತ್ಪಾದನೆಯಾದ ಸಕ್ಕರೆ | |

**ಮಹಾರಾಷ್ಟ್ರದಲ್ಲಿ ಈ ವರ್ಷವೂ ₹3,410 ದರ ನಿಗದಿ ಮಾಡಲಾಗಿದೆ. ಅಲ್ಲಿನ ಇಳುವರಿ ಶೇ 12ಕ್ಕೂ ಹೆಚ್ಚು ಬರುವ ಕಾರಣ ರೈತರಿಗೆ ಹೆಚ್ಚು ದರ ಸಿಗುತ್ತದೆ. ಅದಾಗಿಯೂ ಅಲ್ಲಿನ ರೈತರು ಕೂಡ ₹3,750 ದರಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದಾರೆ**

**ಸಿದಗೌಡ ಮೋದಗಿ,**
ಭಾರತೀಯ ಕೃಷಿಕ ಸಮಾಜದ (ಕರ್ನಾಟಕ) ಅಧ್ಯಕ್ಷ

**10 ಲಕ್ಷ ಟನ್ ಕಬ್ಬು ಮಹಾರಾಷ್ಟ್ರಕ್ಕೆ:** ನೆರೆಯ ಮಹಾರಾಷ್ಟ್ರದೊಂದಿಗೆ ಗಡಿ ಹಂಚಿಕೊಂಡಿರುವ ಬೆಳಗಾವಿ ಜಿಲ್ಲೆಯ ಅಥಣಿ, ಚಿಕ್ಕೋಡಿ, ನಿಪ್ಪಾಣಿ, ರಾಯಬಾಗ ಮತ್ತು ಕಾಗವಾಡ ತಾಲ್ಲೂಕುಗಳ ಹಲವು ರೈತರು ಮಹಾರಾಷ್ಟ್ರದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸಾಗಿಸುತ್ತಾರೆ.

ಅಂದಾಜಿನ ಪ್ರಕಾರ, ಪ್ರತಿ ವರ್ಷ 10 ಲಕ್ಷ ಟನ್‌ಗಳಷ್ಟು ಜಿಲ್ಲೆಯ ಕಬ್ಬು ‘ಮಹಾ’ ಕಾರ್ಖಾನೆಗಳಲ್ಲಿ ನುರಿಯುತ್ತಿದೆ. ಜಿಲ್ಲೆಯಲ್ಲಿ 29 ಸಕ್ಕರೆ ಕಾರ್ಖಾನೆಗಳು ಇದ್ದಾಗ್ಯೂ ಮಹಾರಾಷ್ಟ್ರಕ್ಕೆ ಅಪಾರ ಪ್ರಮಾಣದ ಕಬ್ಬು ಸಾಗಣೆಯಾಗುತ್ತಿದೆ.

ಮಹಾರಾಷ್ಟ್ರದ ಕೊಲ್ಹಾಪುರ ಜಿಲ್ಲೆಯಲ್ಲಿರುವ ಕಲ್ಲಪ್ಪಣ್ಣ ಅವಾಡೆ ಸಹಕಾರ ಸಕ್ಕರೆ ಕಾರ್ಖಾನೆ (ಹುಪರಿ), ದತ್ತ ಸೇತ್ಕರಿ ಸಹಕಾರ ಸಕ್ಕರೆ ಕಾರ್ಖಾನೆ (ಶಿರೋಳ), ಪಂಚಗಂಗಾ ಸಹಕಾರ ಸಕ್ಕರೆ ಕಾರ್ಖಾನೆ (ಇಚಲಕರಂಜಿ), ಛತ್ರಪತಿ ಶಾಹೂ ಸಹಕಾರ ಸಕ್ಕರೆ ಕಾರ್ಖಾನೆ (ಕಾಗಲ್), ಸದಾಶಿವರಾವ್ ಮಂಡಲಿಕ್ ಸಹಕಾರ ಸಕ್ಕರೆ ಕಾರ್ಖಾನೆ (ಹಮೀದವಾಡ), ಸಂತಾಜಿ ಘೋರ್ಪಡೆ ಸಹಕಾರ ಸಕ್ಕರೆ ಕಾರ್ಖಾನೆ (ಸೇನಾಪತಿ ಕಾಪಸಿ), ದೂದಗಂಗಾ ವೇದಗಂಗಾ ಸಹಕಾರ ಸಕ್ಕರೆ ಕಾರ್ಖಾನೆ (ಬಿದರಿ), ಗುರುದತ್ತ ಸಕ್ಕರೆ ಕಾರ್ಖಾನೆ (ಟಾಕಳಿ) ಮುಂತಾದ ಕಾರ್ಖಾನೆಗಳು ಬೆಳಗಾವಿ ಜಿಲ್ಲೆಯ ರೈತರ ಕಬ್ಬನ್ನೇ ನೆಚ್ಚಿಕೊಂಡಿವೆ.

ಜಿಲ್ಲೆಯ ಕಾರ್ಖಾನೆಗಳು ಟನ್ ಕಬ್ಬಿಗೆ ₹3,010 ದರ ವಾಗ್ದಾನ ಮಾಡಿವೆ. ಜಿಲ್ಲಾಧಿಕಾರಿ ಮಧ್ಯಸ್ಥಿಕೆಯಲ್ಲಿ ನಡೆದ ಸಭೆಯಲ್ಲಿ ಇದನ್ನು ₹3,200ಕ್ಕೆ ಏರಿಸುವ ಭರವಸೆ ನೀಡಲಾಗಿದೆ. ಆದರೆ, ₹3,500ಕ್ಕೆ ಏರಿಸಲೇಬೇಕು ಎಂದು ರೈತರು ಜಿಲ್ಲೆಯಾದ್ಯಂತ ಬೃಹತ್ ಪ್ರಮಾಣದ ಪ್ರತಿಭಟನೆ ನಡೆಸಿದ್ದಾರೆ.

‘ಜಿಲ್ಲಾಡಳಿತ ಮಧ್ಯಸ್ಥಿಕೆ ವಹಿಸಿದರೂ ಉತ್ತಮ ದರ ಸಿಗುತ್ತಿಲ್ಲ. ಸದ್ಯ ಕಾರ್ಖಾನೆಗಳು ಕಬ್ಬು ಕಟಾವು ಹಾಗೂ ಸಾಗಣೆ ವೆಚ್ಚ ಸೇರಿಸಿ ₹3,200 ದರ ನೀಡುವುದಾಗಿ ಹೇಳಿವೆ. ಸಾಗಣೆ ವೆಚ್ಚವನ್ನೂ ರೈತರ ಕಬ್ಬಿನ ಬಿಲ್ಲಿನಿಂದಲೇ ಕತ್ತರಿಸಿ ವಾಹನದವರಿಗೆ ನೀಡುತ್ತಾರೆ. ಇದರಿಂದ ರೈತರಿಗೆ ಅನ್ಯಾಯವಾಗುತ್ತಿದೆ. ಹಾಗಾಗಿ, ಕಟಾವು ಮತ್ತು ಸಾಗಣೆ ವೆಚ್ಚದ ಹೊರತಾಗಿ ₹3,500 ದರ ನೀಡಬೇಕು ಎಂದು ರೈತರು ಪಟ್ಟು ಹಿಡಿದಿದ್ದಾರೆ’ ಎನ್ನುವುದು ಕಬ್ಬು ಬೆಳೆಗಾರ, ರೈತ ಮುಖಂಡ ಚೂಣಪ್ಪ ಪೂಜಾರಿ ಅವರ ಮಾತು.

**ಕಬ್ಬು ಸಾಗಿಸಲು ಅಣಿ:** ವಿಜಯಪುರ ಜಿಲ್ಲೆಯಲ್ಲಿ ಇದೇ 1ರಿಂದ ಪ್ರಸಕ್ತ ಸಾಲಿನ ಕಬ್ಬು ಅರೆಯುವಿಕೆ ಆರಂಭವಾಗಬೇಕಿತ್ತು. ಆದರೆ, ಈವರೆಗೆ ಯಾವೊಂದು ಸಕ್ಕರೆ ಕಾರ್ಖಾನೆಯೂ ಕಬ್ಬಿನ ದರವನ್ನು ಘೋಷಿಸಿಲ್ಲ. ಜಿಲ್ಲೆಯ 10 ಸಕ್ಕರೆ ಕಾರ್ಖಾನೆಗಳು ಬೆಳೆಗಾರರಿಗೆ ನೀಡಬೇಕಾದ ದರವನ್ನು ಜಿಲ್ಲಾಧಿಕಾರಿಯವರು ನಿಗದಿಪಡಿಸಿದ್ದಾರೆ. ಇನ್ನೂ ಕಬ್ಬು ನುರಿಯುವಿಕೆ ಆರಂಭವಾಗಿಲ್ಲ.

ಇದರ ನಡುವೆಯೇ ಜಿಲ್ಲೆಯ ಗಡಿಭಾಗದ ಇಂಡಿ, ಚಡಚಣ, ಆಲಮೇಲ ಭಾಗದ ಕಬ್ಬು ಬೆಳೆಗಾರರಿಗೆ ಮಹಾರಾಷ್ಟ್ರ ಸಕ್ಕರೆ ಕಾರ್ಖಾನೆಗಳು ಹೆಚ್ಚಿನ ದರ ನೀಡುವ ಭರವಸೆ ನೀಡಿದ್ದು, ಬೆಳೆಗಾರರು ಮಹಾರಾಷ್ಟ್ರದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸಾಗಿಲು ಅಣಿಯಾಗಿದ್ದಾರೆ.

ಮಹಾರಾಷ್ಟ್ರದಲ್ಲಿ ಕಬ್ಬು ನುರಿಸುವ ಹಂಗಾಮು ನವೆಂಬರ್ 1ರಿಂದ ಆರಂಭವಾಗಿದೆ. ಸೋಲಾಪುರದ ಸಿದ್ದೇಶ್ವರ, ಲೋಕಮಂಗಲ, ಸಿದ್ದನಾಥ ಮತ್ತು ಅಕ್ಕಲಕೋಟದ ಜೈನ್ ಸಕ್ಕರೆ ಕಾರ್ಖಾನೆ ಸೇರಿದಂತೆ ಇತರೆ ಕಾರ್ಖಾನೆಗಳು ಪ್ರತಿ ಟನ್‌ಗೆ ₹3,500 ನೀಡುವುದಾಗಿ ರೈತರೊಂದಿಗೆ ಮಾತುಕತೆ ನಡೆಸಿವೆ. ಸಾಗಣೆ ವೆಚ್ಚ ಪಡೆಯದೇ ಜಿಲ್ಲೆಯ ಕಬ್ಬು ಖರೀದಿಸಲು ಮುಂದಾಗಿವೆ. ಅದಲ್ಲದೆ, ಮಹಾರಾಷ್ಟ್ರದ ಬಹುತೇಕ ಕಾರ್ಖಾನೆಗಳು ಎಥೆನಾಲ್ ಘಟಕ ಹೊಂದಿದ್ದು, ಕಬ್ಬು ಖರೀದಿಗೆ ಪೈಪೋಟಿ ಒಡ್ಡುತ್ತಿವೆ. ಒಂದು ವೇಳೆ ಮಹಾರಾಷ್ಟ್ರಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಕಬ್ಬು ಸಾಗಣೆಯಾದರೆ ರಾಜ್ಯ ಸರ್ಕಾರಕ್ಕೆ ಕೋಟ್ಯಂತರ ತೆರಿಗೆ ನಷ್ಟವಾಗಲಿದೆ ಎನ್ನುತ್ತಾರೆ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಜಿಲ್ಲಾ ಘಟಕದ ಅಧ್ಯಕ್ಷ ಸಂಗಮೇಶ ಸಗರ.

ಮಾಹಿತಿ: ಸಂತೋಷ ಈ.ಚಿನಗುಡಿ, ಬಸವರಾಜ ಸಂಪಳ್ಳಿ, ಮನೋಜ್‌ಕುಮಾರ್ ಗುದ್ದಿ, ಬಾಲಚಂದ್ರ ಎಚ್.

## ಮಾರಾಟಕ್ಕೆ ಅವಕಾಶ

ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) ಕಾಯ್ದೆಗೆ 2014ರಲ್ಲಿ ತಿದ್ದುಪಡಿಯಾಗಿದೆ. ಆದರೆ, ಇದು ರೈತರ ಕಬ್ಬು ಸಾಗಣೆ ಮೇಲೆ ಯಾವುದೇ ನಿಯಂತ್ರಣ ಹೇರುವುದಿಲ್ಲ. ಹಾಗಾಗಿ, ಕೃಷಿಕ ತನ್ನ ಉತ್ಪನ್ನವನ್ನು ಎಲ್ಲಿಯಾದರೂ (ಅಂತರ ಜಿಲ್ಲೆ, ಅಂತರ ರಾಜ್ಯ) ಮಾರಲು ಸ್ವತಂತ್ರ. ಆದರೆ, ಕಾರ್ಖಾನೆಗಳು ನೆರೆ ರಾಜ್ಯದ ಕಬ್ಬು ತರಿಸಿಕೊಳ್ಳಬೇಕಿದ್ದರೆ, ನಿಯಮ ಪಾಲಿಸಬೇಕು. ಇದಕ್ಕಾಗಿ ಕರ್ನಾಟಕ ಹಾಗೂ ಮಹಾರಾಷ್ಟ್ರ ಗಡಿಯಲ್ಲಿರುವ ಬಹುತೇಕ ಕಾರ್ಖಾನೆಗಳು ಅಂತರರಾಜ್ಯ ಅನುಮತಿ (ಮಲ್ಟಿಸ್ಟೇಟ್ ಲೈಸನ್ಸ್) ಪಡೆದಿರುತ್ತವೆ. ಆದರೆ, ರಾಜ್ಯದ ಬಹುಪಾಲು ಸಕ್ಕರೆ ಕಾರ್ಖಾನೆಗಳು, ಸ್ಥಳೀಯವಾಗಿ ಬೆಳೆದ ಕಬ್ಬನ್ನು ತಮಗೇ ಮಾರಾಟ ಮಾಡಬೇಕು ಎಂದು ಬೆಳೆಗಾರರಿಗೆ ನಿರ್ದೇಶನ ನೀಡಬೇಕು ಎಂದು ಜಿಲ್ಲಾಡಳಿತಗಳನ್ನು ಒತ್ತಾಯಿಸುತ್ತಲೇ ಬಂದಿವೆ.

## ನಷ್ಟ ಅನುಭವಿಸಬೇಕೇ?

‘ರಾಜ್ಯದ ಬಹುತೇಕ ಸಕ್ಕರೆ ಕಾರ್ಖಾನೆಗಳ ಮಾಲೀಕತ್ವ ಸಚಿವರು, ಶಾಸಕರು, ಸಂಸದರು, ರಾಜಕಾರಣಿಗಳಲ್ಲಿದೆ. ಇವರು ಯಾರೂ ಬೆಳೆಗಾರರ ಪರವಾಗಿ ಯೋಚನೆ ಮಾಡುವುದಿಲ್ಲ. ಕೇಂದ್ರ ಸರ್ಕಾರ ನಿಗದಿಪಡಿಸಿದ ಎಫ್‌ಆರ್‌ಪಿ ದರವನ್ನು ನೀಡಲೂ ಕಾರ್ಖಾನೆಗಳು ಹಿಂದೆ ಮುಂದೆ ನೋಡುತ್ತವೆ. ಕೇಂದ್ರವು ಶೇ 10.25ರಷ್ಟು ಇಳುವರಿ ದರ ಆಧರಿಸಿ ಎಫ್‌ಆರ್‌ಪಿ ನಿಗದಿಪಡಿಸಿದೆ. ಒಂದು ವೇಳೆ ಇಳುವರಿ ಪ್ರಮಾಣ ಹೆಚ್ಚಿದ್ದರೆ ಹೆಚ್ಚು ದರ ನೀಡಬೇಕು. ಇಳುವರಿ ಶೇ 1ರಷ್ಟು ಹೆಚ್ಚಿದ್ದರೆ ₹346 ಹೆಚ್ಚುವರಿ ನೀಡಬೇಕು. ಬೆಳಗಾವಿ ಜಿಲ್ಲೆಯಲ್ಲಿ ಬೆಳೆಯುತ್ತಿರುವ ಕಬ್ಬಿನ ಇಳುವರಿ ಪ್ರಮಾಣ ಶೇ 12–ಶೇ 13ರವರೆಗೂ ಇದೆ. ಈ ಲೆಕ್ಕದಲ್ಲಿ ಕಾರ್ಖಾನೆಗಳು ಹೆಚ್ಚು ದರ ನೀಡಬೇಕು. ಆದರೆ, ಯಾವ ಕಾರ್ಖಾನೆಗಳೂ ನೀಡುತ್ತಿಲ್ಲ. ರೈತರು ನಷ್ಟ ಅನುಭವಿಸುವುದನ್ನು ತಪ್ಪಿಸಲು ಮಹಾರಾಷ್ಟ್ರದ ಕಾರ್ಖಾನೆಗಳಿಗೆ ಮಾರಾಟ ಮಾಡುತ್ತಾರೆ ಇದು ತಪ್ಪೇ’ ಎಂದು ಪ್ರಶ್ನಿಸುತ್ತಾರೆ ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್.


‘ಮಹಾರಾಷ್ಟ್ರದಲ್ಲಿ ಸಹಕಾರಿ ಕಾರ್ಖಾನೆಗಳು ಹೆಚ್ಚಿವೆ. ಉತ್ತಮ ಬೆಲೆ ಜೊತೆಗೆ ಸಕಾಲದಲ್ಲಿ ಹಣ ಪಾವತಿ ಮಾಡುತ್ತಿವೆ. ರಾಜ್ಯದ ಬಹುತೇಕ ಕಾರ್ಖಾನೆಗಳು ತೂಕ, ಇಳುವರಿ ದರದಲ್ಲಿ ಮೋಸ ಮಾಡುವುದರ ಜೊತೆಗೆ ಕಟಾವು, ಸಾಗಣೆ ವೆಚ್ಚವನ್ನು ಹೆಚ್ಚು ಕಡಿತ ಮಾಡುತ್ತವೆ. ವಿಳಂಬವಾಗಿ ಪಾವತಿ ಮಾಡುತ್ತವೆ’ ಎಂಬುದು ಅವರ ದೂರು.

## ಚಾ.ನಗರದಿಂದ ತಮಿಳುನಾಡಿಗೆ

ಚಾಮರಾಜನಗರ ಜಿಲ್ಲೆಯ ಕೆಲವು ಬೆಳೆಗಾರರು ಕಬ್ಬನ್ನು ಕೊಳ್ಳೇಗಾಲ ಸಮೀಪದ ಕುಂತೂರಿನಲ್ಲಿರುವ ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯ ಬದಲಿಗೆ ತಮಿಳುನಾಡಿನ ಈರೋಡ್‌ನಲ್ಲಿರುವ ಶಕ್ತಿ ಶುಗರ್ಸ್ ಸೇರಿದಂತೆ ಇತರೆ ಕಾರ್ಖಾನೆಗಳಿಗೆ ಪೂರೈಸುತ್ತಿದ್ದಾರೆ.

‘ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯು ಪ್ರತಿ ಟನ್‌ಗೆ ₹3,320 ನೀಡುತ್ತಿದ್ದು, ತಮಿಳುನಾಡಿನ ಕಾರ್ಖಾನೆಗಳು ₹4,000ವರೆಗೂ ನೀಡಲು ಮುಂದೆ ಬಂದಿವೆ. ಹೆಚ್ಚು ಬೆಲೆ ಸಿಗುವ ಕಾರಣಕ್ಕೆ ರೈತರು ಅಲ್ಲಿನ ಕಾರ್ಖಾನೆಗಳಿಗೆ ಸಾಗಿಸುತ್ತಿದ್ದಾರೆ’ ಎಂದು ರೈತ ಮುಖಂಡರು ಹೇಳಿದ್ದಾರೆ.

ಜಿಲ್ಲೆಯಲ್ಲಿ 10 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆಯಲಾಗುತ್ತಿದೆ. ಜಿಲ್ಲೆಯ ರೈತರ ಹಿತದೃಷ್ಟಿಯಿಂದ ಹಾಗೂ ಉತ್ತಮ ದರ ಸಿಗಬೇಕು ಎಂಬ ಕಾರಣಕ್ಕೆ ಜಿಲ್ಲೆಯಿಂದ ಹೊರಜಿಲ್ಲೆ ಹಾಗೂ ರಾಜ್ಯಗಳಿಗೆ ಕಬ್ಬು ಪೂರೈಕೆ ಮಾಡಲು ಯಾವುದೇ ನಿರ್ಬಂಧ ವಿಧಿಸಲಾಗಿಲ್ಲ.



## ಕಲಬುರಗಿ ಕಬ್ಬು ಮಹಾರಾಷ್ಟ್ರಕ್ಕೆ

ಕಾರ್ಖಾನೆಗಳು ಸಮೀಪದಲ್ಲಿವೆ ಮತ್ತು ಸಕಾಲದಲ್ಲಿ ಹಣ ಸಿಗುತ್ತದೆ ಎಂಬ ಕಾರಣಕ್ಕೆ ಮಹಾರಾಷ್ಟ್ರ ಹಾಗೂ ತೆಲಂಗಾಣದೊಂದಿಗೆ ಗಡಿ ಹಂಚಿಕೊಂಡಿರುವ ಕಲಬುರಗಿ ಜಿಲ್ಲೆಯ ಗಡಿ ಭಾಗದ ಗ್ರಾಮಗಳ ಬೆಳೆಗಾರರು ನೆರೆ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬನ್ನು ಸಾಗಿಸುತ್ತಾರೆ.

ಜಿಲ್ಲೆಯಲ್ಲಿ ಹೆಚ್ಚು ಕಬ್ಬನ್ನು ಬೆಳೆಯುವ ಅಫಜಲಪುರ ತಾಲ್ಲೂಕಿನಲ್ಲಿ ರೇಣುಕಾ ಶುಗರ್ಸ್ ಹಾಗೂ ಕೆಪಿಆರ್ ಶುಗರ್ಸ್ ಸಕ್ಕರೆ ಕಾರ್ಖಾನೆಗಳಿದ್ದು, ಹೆಚ್ಚಿನ ಪ್ರಮಾಣದ ಕಬ್ಬನ್ನು ಇವೆರಡು ಕಾರ್ಖಾನೆಗಳಿಗೇ ಸಾಗಿಸಲಾಗುತ್ತದೆ. ಆದರೆ, ಇತ್ತೀಚಿನ ವರ್ಷಗಳಲ್ಲಿ ಸಕಾಲಕ್ಕೆ ಬಾಕಿ ಪಾವತಿ ಮಾಡದೇ ಇರುವುದರಿಂದ ಹಾಗೂ ಬೆಲೆಯೂ ಕಮ್ಮಿ ನಿಗದಿ ಆಗುವುದರಿಂದ ನೆರೆಯ ಮಹಾರಾಷ್ಟ್ರದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬನ್ನು ಪೂರೈಸುತ್ತಿದ್ದಾರೆ.

‘ಮಹಾರಾಷ್ಟ್ರದ 10 ಸಕ್ಕರೆ ಕಾರ್ಖಾನೆಗಳಿಗೆ ಅಫಜಲಪುರ, ಆಳಂದ ತಾಲ್ಲೂಕಿನ ರೈತರು ಕಬ್ಬು ಸಾಗಣೆ ಮಾಡುತ್ತಾರೆ. ಸೋಲಾಪುರ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ಈಗಾಗಲೇ ಪ್ರತಿ ಟನ್ ಕಬ್ಬಿಗೆ ₹3,440 ಬೆಲೆ ನಿಗದಿ ಮಾಡಿವೆ. ಹೀಗಾಗಿ ಕಬ್ಬು ಬೆಳೆಗಾರರು ಅಲ್ಲಿನ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಪೂರೈಸುತ್ತಿದ್ದಾರೆ’ ಎಂಬುದು ಕಲಬುರಗಿ ಜಿಲ್ಲಾ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ರಮೇಶ ಹೂಗಾರ ಅನಿಸಿಕೆ.

ಪದ

ಎಡದಿಂದ ಬಲಕ್ಕೆ
1.ಸೂರ್ಯನ ಕಾವಿನಲ್ಲಿ ಗೋಚರಿಸಿದ ಮರೀಚಿಕೆ (5)
3.ಅಗಲವಾದ ಹರಿವಾಣ (3)
5.ಮನೋರಥದಲ್ಲಿರುವ ತೇರು (2)
6.ಹೆಂಡತಿ ಇಲ್ಲಿ ತಿರುಗಿದ್ದಾಳಲ್ಲಾ! (2)
8.ಪ್ರಾತಃಕಾಲವಿದು (3)
9.ಕಿರೀಟಧಾರಣ ಮಹೋತ್ಸವವಿದು (5)
12.ಅಂತರಂಗದಲ್ಲಿನ ಅಲೆ (3)
13.ಇಂದ್ರಿಯಗಳನ್ನು ಹಿಡಿತದಲ್ಲಿಕೊಂಡಿರುವವನು (2)
15.ಒಗ್ಗರಣೆಗೆ ಹಾಕುವ ವಸ್ತು (2)
16.ಬಂಗಾರ ಇಲ್ಲಿದೆ (3)
17.ನೀರು ಹರಿದು ಹೋಗಲು ಮಾಡಿರುವ ಕೊಳವೆ

ಮೇಲಿಂದ ಕೆಳಕ್ಕೆ
1.ಶಾಖವನ್ನು ಸೂಸುತ್ತಿರುವ ನೆತ್ತರು
2.ಹೀನ ಸ್ಥಿತಿಯಿದು
4.ಅಂತರವಿರುವ ತಲೆಮಾರು!
7.ಒಳ್ಳೆಯ ಅಭಿಪ್ರಾಯ
8.ಪ್ರತೀ ಸಲ ಕಾಣಿಸಿರುವ ಚಿಹ್ನೆ!
9.ಹೂವಿನಲ್ಲಿರುವ ಹುಡಿ
10.ಪರಮಾತ್ಮ ಇಲ್ಲಿಯೇ ಪ್ರತ್ಯಕ್ಷ!
11.ಲಗ್ಗೆ ಹಾಕುವ ಬಗೆ ಬಹಳ ಚುರುಕು!
14.ಅಮೂಲ್ಯ ವಸ್ತುಗಳನ್ನಿಡುವ ಕಬ್ಬಿಣದ ಪೆಟ್ಟಿಗೆ

6212ನೇ

ಸುಡೊಕು

## ❖ 9 ರಾಜ್ಯಗಳು, 3 ಕೇಂದ್ರಾಡಳಿತ ಪ್ರದೇಶಗಳಲ್ಲಿ ಎಸ್‌ಐಆರ್ ಶುರು

**ಸಂದರ್ಭ: ದೇಶದ ಮೂರು ಕೇಂದ್ರಾಡಳಿತ ಪ್ರದೇಶಗಳು ಮತ್ತು 9 ರಾಜ್ಯಗಳ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯು ಆರಂಭವಾಗಲಿದೆ.**

- ಡಿಸೆಂಬರ್ 4ಕ್ಕೆ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಳ್ಳಲಿದ್ದು, ಡಿ.9ಕ್ಕೆ ಮತದಾರರ ಪಟ್ಟಿಯ ಕರಡನ್ನು ಚುನಾವಣಾ ಆಯೋಗವು ಬಿಡುಗಡೆ ಮಾಡಲಿದೆ. ಅಂತಿಮ ಪಟ್ಟಿಯನ್ನು 2026ರ ಫೆ.7ರಂದು ಬಿಡುಗಡೆ ಮಾಡಲಿದೆ. ಆಯೋಗವು ಬಿಹಾರದಲ್ಲಿ ಇತ್ತೀಚೆಗಷ್ಟೇ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಳಿಸಿತ್ತು.
- **ಎಲ್ಲೆಲ್ಲಿ?: ಅಂಡಮಾನ್ ಮತ್ತು ನಿಕೋಬಾರ್, ಲಕ್ಷದ್ವೀಪ, ಪುದುಚೇರಿ, ಛತ್ತೀಸಗಢ, ಗೋವಾ, ಗುಜರಾತ್, ಮಧ್ಯ ಪ್ರದೇಶ, ರಾಜಸ್ಥಾನ, ತಮಿಳುನಾಡು, ಕೇರಳ, ಉತ್ತರ ಪ್ರದೇಶ ಮತ್ತು ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ನಡೆಯಲಿದೆ.**
- ಈ ಪೈಕಿ ತಮಿಳುನಾಡು, ಪಶ್ಚಿಮ ಬಂಗಾಳ, ಪುದುಚೇರಿ ಮತ್ತು ಕೇರಳದಲ್ಲಿ 2026ರಲ್ಲಿ ಚುನಾವಣೆ ನಡೆಯಲಿದೆ. ತಮಿಳುನಾಡಿನಲ್ಲಿ ಎಸ್‌ಐಆರ್ ನಡೆಸದಂತೆ ತಡೆಯಲು ಸುಪ್ರೀಂ ಕೋರ್ಟ್‌ಗೆ ಹೋಗುವುದಾಗಿ ಅಲ್ಲಿನ ಸರ್ಕಾರ ಹೇಳಿದೆ.

***<u>'ಅಸ್ಸಾಂಗೆ ಪ್ರತ್ಯೇಕ ದಿನಾಂಕ'</u>***

- 'ಅಸ್ಸಾಂನಲ್ಲಿ ಪೌರತ್ವವನ್ನು ಪರಿಶೀಲಿಸುವ ಕಾರ್ಯ ಪ್ರಗತಿಯಲ್ಲಿದೆ. ಈ ಕಾರ್ಯವು ಸುಪ್ರೀಂ ಕೋರ್ಟ್‌ನ ಮೇಲ್ವಿಚಾರಣೆಯಲ್ಲಿ ನಡೆಯುತ್ತಿದೆ. ಆದ್ದರಿಂದ, ಈ ರಾಜ್ಯದಲ್ಲಿ ಎಸ್‌ಐಆರ್ ಆರಂಭಿಸಲು ಪ್ರತ್ಯೇಕವಾಗಿ ದಿನಾಂಕ ಘೋಷಿಸಲಾಗುವುದು' ಎಂದು ಚುನಾವಣಾ ಆಯೋಗ ಹೇಳಿದೆ. ಅಸ್ಸಾಂನಲ್ಲಿ 2026ರಲ್ಲಿ ವಿಧಾನಸಭೆಗೆ ಚುನಾವಣೆ ನಡೆಯಲಿದೆ.

***'ಐತಿಹಾಸಿಕ ಸಾಧನೆ'***

- ಬಿಹಾರದಲ್ಲಿ ಎಸ್‌ಐಆರ್ ನಡೆದಿದ್ದು, ಜಗತ್ತಿನಲ್ಲೇ ಅತಿ ದೊಡ್ಡ 'ಶುದ್ಧೀಕರಣ' ಪ್ರಕ್ರಿಯೆಯಾಗಿತ್ತು. ಜೊತೆಗೆ, ಭಾರತದ ಪ್ರಜಾಪ್ರಭುತ್ವಕ್ಕೆ ಇದೊಂದು ಮೈಲಿಗಲ್ಲು. ಸದ್ಯ ಬಿಹಾರದಲ್ಲಿ ಮಾತ್ರವೇ ಈ ಪ್ರಕ್ರಿಯೆ ಪೂರ್ಣಗೊಂಡಿದೆ.
- ಈ ಪ್ರಕ್ರಿಯೆ ಯನ್ನು ದೇಶದಾದ್ಯಂತ ವಿಸ್ತರಿಸಿದರೆ, ಅದು ದೇಶದ ಮತ್ತು ಚುನಾವಣಾ ಆಯೋಗದ ಅತ್ಯಂತ ದೊಡ್ಡ ಐತಿಹಾಸಿಕ ಸಾಧನೆಯಾಗಲಿದೆ.
- ದೇಶದಾದ್ಯಂತ ಈ ಪ್ರಕ್ರಿಯೆಯು ಪೂರ್ಣಗೊಂಡರೆ, ಆಯೋಗದ ಕುರಿತು ಮಾತ್ರವಲ್ಲ, ನಮ್ಮ ದೇಶ ಪ್ರಜಾತಂತ್ರ ವ್ಯವಸ್ಥೆ ಬಗ್ಗೆಯೇ ದೇಶದ ಜನರು ಹೆಮ್ಮೆ ಪಡುತ್ತಾರೆ

## ❖ ಯುಪಿಐ ವಹಿವಾಟು ₹27.28 ಲಕ್ಷ ಕೋಟಿ

**ಸಂದರ್ಭ: ಅಕ್ಟೋಬರ್ ತಿಂಗಳಿನಲ್ಲಿ ಏಕೀಕೃತ ಪಾವತಿ ವ್ಯವಸ್ಥೆ (ಯುಪಿಐ) ಮೂಲಕ 2,070 ಕೋಟಿ ವಹಿವಾಟುಗಳು ನಡೆದಿವೆ. ಹಣದ ಲೆಕ್ಕದಲ್ಲಿ ಒಟ್ಟು ₹27.28 ಲಕ್ಷ ಕೋಟಿಯಷ್ಟು ವಹಿವಾಟುಗಳು ನಡೆದಿವೆ ಎಂದು ರಾಷ್ಟ್ರೀಯ ಪಾವತಿ ನಿಗಮ (ಎನ್‌ಪಿಸಿಐ) ತಿಳಿಸಿದೆ.**

- ಹಬ್ಬದ ಋತುವಿನ ಅಂಗವಾಗಿ ಖರೀದಿ ಹೆಚ್ಚಿದ ಕಾರಣದಿಂದಾಗಿ ವಹಿವಾಟು ಹೆಚ್ಚಳ ಆಗಿದೆ ಎಂದು ನಿಗಮ ತಿಳಿಸಿದೆ.
- ಕಳೆದ ವರ್ಷದ ಅಕ್ಟೋಬರ್‌ನಲ್ಲಿ ₹23.49 ಲಕ್ಷ ಕೋಟಿ ಮೌಲ್ಯದ ವಹಿವಾಟು ನಡೆದಿತ್ತು. ಇದಕ್ಕೆ ಹೋಲಿಸಿದರೆ ಶೇ 16ರಷ್ಟು ಬೆಳವಣಿಗೆ ದಾಖಲಿಸಿದೆ ಎಂದು ಹೇಳಿದೆ. ಅಕ್ಟೋಬರ್‌ನಲ್ಲಿ ದಿನನಿತ್ಯ ಸರಾಸರಿ 66.8 ಕೋಟಿ ವಹಿವಾಟುಗಳು ನಡೆದಿವೆ. ಇದರ ಮೌಲ್ಯ ದಿನಕ್ಕೆ ಸರಾಸರಿ ₹87,993 ಕೋಟಿ.
- ಈ ವರ್ಷದ ಮೇ ತಿಂಗಳಿನಲ್ಲಿ ₹25.14 ಲಕ್ಷ ಕೋಟಿಯಷ್ಟು ಮೌಲ್ಯದ ವಹಿವಾಟು ನಡೆದಿತ್ತು. ಇದು ಆವರೆಗಿನ ಗರಿಷ್ಠ ಮಟ್ಟದ ವಹಿವಾಟು ನಡೆದ ತಿಂಗಳಾ ಗಿತ್ತು. ಆದರೆ, ಅಕ್ಟೋಬರ್ ವಹಿವಾಟು ಇದಕ್ಕಿಂತಲೂ ಹೆಚ್ಚಳವಾಗಿದೆ.

***ಮಲೇಷ್ಯಾದಲ್ಲೂ ಯುಪಿಐ:*** **ಮಲೇಷ್ಯಾದಲ್ಲಿ ಯುಪಿಐ ಬಳಸುವ ಮೂಲಕ ವಹಿವಾಟು ನಡೆಸಬಹುದಾಗಿದೆ ಎಂದು ಎನ್‌ಪಿಸಿಐ ತಿಳಿಸಿದೆ. ಎನ್‌ಪಿಸಿಐ ಇಂಟರ್‌ನ್ಯಾಷನಲ್ ಮತ್ತು ರೇಜರ್ ಪೇ ಕರ್ಲೆಕ್ ಈ ಕುರಿತು ಒಪ್ಪಂದ ಮಾಡಿಕೊಂಡಿವೆ.**

## ❖ 18ರಿಂದ ಬೆಂಗಳೂರು ಟೆಕ್ ಶೃಂಗಸಭೆ

**ಸಂದರ್ಭ: '28ನೇ ಆವೃತ್ತಿಯ ಬೆಂಗಳೂರು ಟೆಕ್ ಶೃಂಗಸಭೆ ತುಮಕೂರು ರಸ್ತೆಯ ಬೆಂಗಳೂರು ಅಂತರ ರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರದಲ್ಲಿ (ಬಿಐಇಸಿ) ಇದೇ 18ರಿಂದ ಮೂರು ದಿನ ನಡೆಯಲಿದೆ' ಎಂದು ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.**

- 'ಈ ಶೃಂಗಸಭೆ ಯಲ್ಲಿ 60 ದೇಶಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ತಂತ್ರಜ್ಞಾನ ಮತ್ತು ಉದ್ಯಮವನ್ನು ಒಂದೇ ವೇದಿಕೆಗೆ ತರುವ ಜಾಗತಿಕ ಕಾರ್ಯಕ್ರಮ ಇದಾಗಿದ್ದು, ಈ ಬಾರಿ **ಕ್ವಾಂಟಮ್ ಕಂಪ್ಯೂಟಿಂಗ್, ಎಐ, ಸ್ಪೇಸ್‌ಟೆಕ್, ಹೆಲ್ತ್ ಟೆಕ್‌ಗೆ ವಿಶೇಷ ಗಮನ ನೀಡ ಲಾಗುವುದು'** ಎಂದು ಹೇಳಿದರು.
- '20ರಂದು ಫ್ಯೂಚರ್ ಮೇಕರ್ಸ್ ಕಾನ್‌ಕ್ಲೇವ್ ನಡೆಯ ಲಿದ್ದು, 10 ಸಾವಿರಕ್ಕೂ ಹೆಚ್ಚಿನ ಉದ್ಯಮಿಗಳು, ಹೂಡಿಕೆದಾರರು, ಸ್ಟಾರ್ಟ್ ಅಪ್ ಸಂಸ್ಥಾಪಕರು ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಆವಿಷ್ಕಾರ ಮಾಡಿ ರುವವರು ಪಾಲ್ಗೊಳ್ಳಲಿದ್ದಾರೆ' ಎಂದರು.
- ***ಹೊಸ ನೀತಿ:*** **'ಸ್ಟಾರ್ಟ್ ಅಪ್ ಐಟಿ ಸ್ಪೇಸ್ ಟೆಕ್‌ಗೆ ಹೊಸ ನೀತಿ ತರಲು ನಿರ್ಧರಿಸಲಾಗಿದೆ. ಒಟ್ಟಾರೆ, ಈ ಬಾರಿ ನೀತಿಗಳನ್ನು ಜಾಗತಿಕ ದೃಷ್ಟಿಕೋನದಲ್ಲೇ ರೂಪಿಸಲಾಗಿದೆ. ಮಾಹಿತಿ ತಂತ್ರಜ್ಞಾನ, ಸ್ಟಾರ್ಟ್ ಅಪ್, ಸ್ಪೇಸ್ ಟೆಕ್‌ನಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ. ಈ ನೀತಿಯ ಮೂಲಕ ಕರ್ನಾಟಕದಲ್ಲಿರುವ ಇನ್ನಷ್ಟು ಅವಕಾಶಗಳ ಅರಿವು ಮೂಡಿ ಸಲು ಪ್ರಯತ್ನಿಸಲಾಗುವುದು' ಎಂದರು.**
- ***₹600 ಕೋಟಿ ಹೂಡಿಕೆ:*** 'ಕರ್ನಾಟಕವನ್ನು ಭಾರತದ ಡೀಪ್ ಟೆಕ್ ರಾಜಧಾನಿಯಾಗಿ ರೂಪಿಸುವ ಉದ್ದೇಶದಿಂದ ಸರ್ಕಾರ ₹600 ಕೋಟಿ ಹೂಡಿಕೆಗೆ ಬದ್ಧವಾಗಿದೆ. ಇದರಲ್ಲಿ ಎಐ, ಕ್ವಾಂಟಮ್ ಕಂಪ್ಯೂಟಿಂಗ್, ರೋಬೊಟಿಕ್ಸ್ ಹಾಗೂ ಸುಸ್ಥಿರತೆ ಆಧಾರಿತ ಆವಿಷ್ಕಾರಗಳಿಗೂ ಪ್ರೋತ್ಸಾಹ ನೀಡಲಾಗುವುದು' ಎಂದೂ ಅವರು ತಿಳಿಸಿದರು.

## ❖ ತಯಾರಿಕಾ ಚಟುವಟಿಕೆ ಏರಿಕೆ

**ಸಂದರ್ಭ: ದೇಶದ ತಯಾರಿಕಾ ವಲಯದ ಚಟುವಟಿಕೆ ಅಕ್ಟೋಬರ್ ತಿಂಗಳಿನಲ್ಲಿ ಏರಿಕೆಯಾಗಿದೆ ಎಂದು ಎಸ್ ಆ್ಯಂಡ್ ಪಿ ಗ್ಲೋಬಲ್ ಸಂಸ್ಥೆಯ ಮಾಸಿಕ ಸಮೀಕ್ಷಾ ವರದಿ ತಿಳಿಸಿದೆ.**

- ಎಸ್ ಆ್ಯಂಡ್ ಪಿ ಗ್ಲೋಬಲ್ ಸಂಸ್ಥೆಯು ನಿರ್ವಹಿಸುವ 'ಎಚ್‌ಎಸ್‌ಬಿಸಿ ಇಂಡಿಯಾ ಮ್ಯಾನುಫ್ಯಾಕ್ಚರಿಂಗ್ ಪರ್ಚೇಸಿಂಗ್ ಮ್ಯಾನೇಜರ್ಸ್ ಸೂಚ್ಯಂಕ' ವು ಸೆಪ್ಟೆಂಬರ್ ತಿಂಗಳಲ್ಲಿ 57.7 ದಾಖಲಾಗಿತ್ತು. ಇದು ಅಕ್ಟೋಬರ್‌ನಲ್ಲಿ 59.2ಕ್ಕೆ ಏರಿಕೆಯಾಗಿದೆ.
- **ಪಿಎಂಐ ಸೂಚ್ಯಂಕವು 50ಕ್ಕಿಂತ ಹೆಚ್ಚಿನ ಮಟ್ಟದಲ್ಲಿ ಇದ್ದರೆ ಅದನ್ನು ಬೆಳವಣಿಗೆ** ಎಂದು ಗುರುತಿಸಲಾಗುತ್ತದೆ.
- ಜಿಎಸ್‌ಟಿ ಇಳಿಕೆಯಿಂದ ಖರೀದಿ ಹೆಚ್ಚಳವಾಯಿತು. ದೇಶೀಯ ಮಾರುಕಟ್ಟೆಯಲ್ಲಿ ಸರಕುಗಳಿಗೆ ಹೆಚ್ಚಿದ ಬೇಡಿಕೆ ಮತ್ತು ಹೊಸ ರಫ್ತು ಕಾರ್ಯಾದೇಶದಿಂದ ಸೂಚ್ಯಂಕವು ಏರಿಕೆ ಕಂಡಿದೆ ಎಂದು ತಿಳಿಸಿದೆ. ಜೊತೆಗೆ ತಂತ್ರಜ್ಞಾನ ಕಂಪನಿಗಳು ಹೂಡಿಕೆ ಪ್ರಮಾಣವನ್ನು ಹೆಚ್ಚಿಸಿದ್ದು ಸಹ ಸೂಚ್ಯಂಕಗಳ ಏರಿಕೆಗೆ ಕಾರಣವಾಗಿದೆ ಎಂದು ತಿಳಿಸಿದೆ.
- ಆದರೆ, ಇದೇ ಅವಧಿಯಲ್ಲಿ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಮಾರಾಟ ಮಂದಗೊಂಡಿದೆ ಎಂದು ಹೇಳಿದೆ.

- ‘ಅಕ್ಟೋಬರ್‌ನಲ್ಲಿ ತಯಾರಿಕಾ ವಲಯದ ಉತ್ಪಾದನೆ ಏರಿಕೆಯಾಗಿದೆ. ಹೊಸ ಕಾರ್ಯಾದೇಶ ಮತ್ತು ಉದ್ಯೋಗ ಸೃಷ್ಟಿ ಹೆಚ್ಚಳವಾಗಿದೆ’ ಎಂದು ಎಚ್‌ಎಸ್‌ಬಿಸಿ ಇಂಡಿಯಾದ ಮುಖ್ಯ ಅರ್ಥಶಾಸ್ತ್ರಜ್ಞೆ ಪ್ರಾಂಜುಲ್ ಭಂಡಾರಿ ಹೇಳಿದ್ದಾರೆ.

## ❖ ಅಣ್ವಸ್ತ್ರ ಪರೀಕ್ಷೆ: ಟ್ರಂಪ್ ಸಮರ್ಥನೆ

**ಸಂದರ್ಭ:‘ಅಣ್ವಸ್ತ್ರಗಳನ್ನು ಪರೀಕ್ಷಿಸುತ್ತಿರುವ ದೇಶಗಳಲ್ಲಿ ಪಾಕಿಸ್ತಾನ ಮತ್ತು ಚೀನಾ ಸೇರಿವೆ’ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.**

- ಮೂರು ದಶಕಗಳ ನಂತರ ಅಮೆರಿಕದ ಸ್ವಂತ ಅಣ್ವಸ್ತ್ರಗಳ ಪರೀಕ್ಷೆಯನ್ನು ಪುನರಾರಂಭಿಸುವ ತಮ್ಮ ಆಡಳಿತದ ಯೋಜನೆಗಳನ್ನು ಸಮರ್ಥಿಸಿಕೊಳ್ಳುವ ಭಾಗವಾಗಿ ಟ್ರಂಪ್ ಈ ಹೇಳಿಕೆ ನೀಡಿದ್ದಾರೆ ಎನ್ನಲಾಗಿದೆ.
- ಕಳೆದ ವಾರ ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಅವರೊಂದಿಗಿನ ಭೇಟಿಗೂ ಮುನ್ನ ಟ್ರಂಪ್ ಅವರು, ಅಮೆರಿಕವು ಪ್ರತಿಸ್ಪರ್ಧಿ ಶಕ್ತಿಗಳೊಂದಿಗೆ ಸರಿಸಮವಾಗಿ ಅಣ್ವಸ್ತ್ರಗಳ ಪರೀಕ್ಷೆ ಆರಂಭಿಸುವುದಾಗಿ ಘೋಷಿಸಿದ್ದರು.
- ‘ಸಿಬಿಎಸ್ ನ್ಯೂಸ್’ ಗೆ ನೀಡಿದ ಸಂದರ್ಶನದಲ್ಲಿ ಟ್ರಂಪ್ ಅವರು, ರಷ್ಯಾ, ಚೀನಾ, ಉತ್ತರ ಕೊರಿಯಾ ಮತ್ತು ಪಾಕಿಸ್ತಾನ ಪರಮಾಣು ಶಸ್ತ್ರಾಸ್ತ್ರಗಳನ್ನು ಪರೀಕ್ಷಿಸುವ ದೇಶಗಳೆಂದು ಹೆಸರಿಸಿದರು.
- ‘ರಷ್ಯಾ, ಚೀನಾ ಪರೀಕ್ಷೆ ನಡೆಸುತ್ತಿವೆ. ಆದರೆ, ಅವರು ಅದರ ಬಗ್ಗೆ ಮಾತನಾಡುವು ದಿಲ್ಲ. ಉತ್ತರ ಕೊರಿಯಾ, ಪಾಕಿಸ್ತಾನ ಪರೀಕ್ಷೆ ನಡೆಸುತ್ತಿ ರುವುದು ನಿಸ್ಸಂಶಯ’ ಎಂದು ಟ್ರಂಪ್ ಹೇಳಿದರು.
- ‘ನಾವೂ ಪರಮಾಣು ಶಸ್ತ್ರಾಸ್ತ್ರಗಳನ್ನು ಪರೀಕ್ಷಿಸಬೇಕು. ಶಸ್ತ್ರಾಸ್ತ್ರಗಳ ವಿಶ್ವಾಸಾರ್ಹತೆ ಯನ್ನು ಖಚಿತಪಡಿಸಿ ಕೊಳ್ಳಲು ಇಂತಹ ಪರೀಕ್ಷೆ ಅಗತ್ಯ’ ಎಂದು ಟ್ರಂಪ್ ಹೇಳಿದರು.
- ಅಮೆರಿಕದ ಮಾಧ್ಯಮ ವರದಿಗಳ ಪ್ರಕಾರ, ‘ಅಮೆರಿಕ ಸೇನೆಯು ಪರಮಾಣು ಸಿಡಿತಲೆಯನ್ನು ಹೊತ್ತೊಯ್ಯುವ ಸಾಮರ್ಥ್ಯವಿರುವ ತನ್ನ ಕ್ಷಿಪಣಿಗಳನ್ನು ನಿಯಮಿತವಾಗಿ ಪರೀಕ್ಷಿಸುತ್ತದೆ. ಆದರೆ, 1992ರಿಂದ ಶಸ್ತ್ರಾಸ್ತ್ರಗಳನ್ನು ಸ್ಫೋಟಿಸಿಲ್ಲ.
- ರಷ್ಯಾ ಪೋಸಿಡಾನ್ ಪರಮಾಣು ಸಾಮರ್ಥ್ಯದ ಸೂಪರ್ ಟಾರ್ಪಿಡೊವನ್ನು ಪರೀಕ್ಷಿಸಿದೆ ಎಂದು ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಕಳೆದ ವಾರ ಹೇಳಿದ್ದರು.




## ❖ ತ್ವರಿತ ನ್ಯಾಯಕ್ಕೆ ‘ಎಐ’ ತಂತ್ರಜ್ಞಾನ

**ಸಂದರ್ಭ: ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ನ್ಯಾಯಾಲಯಗಳಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಅಳವಡಿಕೆ, ಬಾಕಿ ಪ್ರಕರಣಗಳ ಇತ್ಯರ್ಥಕ್ಕೆ ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ತ್ವರಿತ ನ್ಯಾಯಾಲಯ ಸ್ಥಾಪಿಸುವುದೂ ಸೇರಿದಂತೆ ಜಿಲ್ಲಾ ನ್ಯಾಯಾಂಗಕ್ಕೆ ಸಮಗ್ರ ಸುಧಾರಣೆ ತರಲು ಸರ್ಕಾರ ಮುಂದಡಿ ಇಟ್ಟಿದೆ.**

- ಈ ಉದ್ದೇಶದಿಂದ ‘ಕರ್ನಾಟಕ ಜಿಲ್ಲಾ ನ್ಯಾಯಾಂಗ ಸುಧಾರಣೆಗಳ ಮಸೂದೆ-2025’ರ ಕರಡು ಸಿದ್ಧಗೊಂಡಿದೆ. ಬೆಳಗಾವಿ ಅಧಿವೇಶನದಲ್ಲಿ ಈ ಮಸೂದೆ ಮಂಡಿಸುವ ತಯಾರಿಯೂ ನಡೆದಿದೆ.
- ನ್ಯಾಯಾಂಗ ಪ್ರಕ್ರಿಯೆ ಗಳಲ್ಲಿ ವೇಗ, ನಿಖರತೆ, ಪಾರದರ್ಶಕತೆ ಮತ್ತು ವಸ್ತುನಿಷ್ಠತೆ ಹೆಚ್ಚಿಸಲು ಕೃತಕ ಬುದ್ಧಿಮತ್ತೆ (ಎಐ) ಸಾಧನ ಬಳಸಬೇಕು ಮತ್ತು ಡಿಜಿಟಲ್ ತಂತ್ರಜ್ಞಾನಗಳನ್ನು ಪರಿಚಯಿಸಬೇಕು. ಆ ಮೂಲಕ ಜಿಲ್ಲಾ ನ್ಯಾಯಾಂಗದಲ್ಲಿ ನ್ಯಾಯದಾನ ವ್ಯವಸ್ಥೆಯನ್ನು ವ್ಯವಸ್ಥಿತಗೊಳಿಸಲು ರಾಜ್ಯ ಸರ್ಕಾರ ಮತ್ತು ಹೈಕೋರ್ಟ್ ಸಮನ್ವಯದಿಂದ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂಬ ಪ್ರಸ್ತಾವ ಮಸೂದೆಯಲ್ಲಿದೆ.



ಮಸೂದೆಯ ಪ್ರಮುಖ ಅಂಶಗಳು

- ಎಲ್ಲ ಜಿಲ್ಲಾ ನ್ಯಾಯಾಲಯಗಳು ಹೈಕೋರ್ಟ್‌ಗೆ ಸಂಯೋಜಿತವಾದ ‘ಸಮಗ್ರ ಪ್ರಕರಣ ನಿರ್ವಹಣಾ ವ್ಯವಸ್ಥೆ’ (ಐಸಿಎಂಎಸ್) ಜಾರಿಗೆ ತರಬೇಕು
- ಕಾಗದರಹಿತ ವ್ಯವಸ್ಥೆ ಮತ್ತು ಇ-ನ್ಯಾಯಾಲಯಗಳ ಮೂಲಕ ಪ್ರಕ್ರಿಯೆಗಳನ್ನು ನಡೆಸಬೇಕು
- ಪ್ರಕರಣದ ದತ್ತಾಂಶವನ್ನು ಗೋಪ್ಯತೆಯ ಸುರಕ್ಷತೆಗಳಿಗೆ ಒಳಪಟ್ಟು, ಆನ್‌ಲೈನ್ ಪೋರ್ಟಲ್ ಮೂಲಕ ಸಾರ್ವಜನಿಕವಾಗಿ ಲಭ್ಯವಾಗುವಂತೆ ಮಾಡಬೇಕು
- ಪ್ರಕರಣಗಳ ಮುಂದೂಡಿಕೆಗೆ ಕೊಟ್ಟ ಕಾರಣ ಕ್ಷುಲ್ಲಕವೆಂದು ಕಂಡುಬಂದರೆ ನ್ಯಾಯಾಲಯಗಳು ಕನಿಷ್ಠ ₹ 5 ಸಾವಿರ ವೆಚ್ಚ ವಿಧಿಸಬಹುದು
- ಗಂಭೀರ ಉಲ್ಲಂಘನೆಗಳು ಸಾಬೀತಾದರೆ ಮಾತ್ರ ಮಧ್ಯಂತರ ತಡೆಯಾಜ್ಞೆ ಅಥವಾ ತಡೆಯಾಜ್ಞೆ ನೀಡಲಾಗುವುದು
- ಮಧ್ಯಂತರ ತಡೆಯಾಜ್ಞೆ ಅಥವಾ ತಡೆಯಾಜ್ಞೆ ವಿರುದ್ಧ 15 ದಿನಗಳೊಳಗೆ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬೇಕು
- ಜಿಲ್ಲಾ ನ್ಯಾಯಾಂಗದ ನ್ಯಾಯಾಧೀಶರು ತಮ್ಮ ಆಸ್ತಿಯನ್ನು ವರ್ಷಕ್ಕೊಮ್ಮೆ ಘೋಷಣೆ ಮಾಡುವುದು ಕಡ್ಡಾಯ

‘ಜಿಲ್ಲಾ ನ್ಯಾಯಾಂಗ’ ಎಂದರೆ ಯಾವುದು?

ಪ್ರಧಾನ ಜಿಲ್ಲಾ ನ್ಯಾಯಾಧೀಶರು, ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರು, ಸಿವಿಲ್ ನ್ಯಾಯಾಧೀಶರು, ಮ್ಯಾಜಿಸ್ಟ್ರೇಟ್‌ಗಳು ಮತ್ತು ತ್ವರಿತ ನ್ಯಾಯಾಲಯಗಳು ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿರುವ ನ್ಯಾಯಾಲಯ-ಗಳನ್ನು ಒಳಗೊಂಡ ವ್ಯವಸ್ಥೆಯೇ ಜಿಲ್ಲಾ ನ್ಯಾಯಾಂಗ.

‘ಬಿಡಿಜೆಆರ್’ ಸ್ಥಾಪನೆ ಪ್ರಸ್ತಾಪ

‘ಜಿಲ್ಲಾ ನ್ಯಾಯಾಂಗ ಸುಧಾರಣೆಗಳ ಬ್ಯೂರೊ’ (ಬಿಡಿಜೆಆರ್) ಎಂಬ ಶಾಶ್ವತ ಸಂಸ್ಥೆಯನ್ನು ಸರ್ಕಾರ ರಚಿಸಬೇಕು. ಹೈಕೋರ್ಟ್‌ನ ಹಾಲಿ ನ್ಯಾಯಮೂರ್ತಿ ಅಥವಾ ಹೈಕೋರ್ಟ್ ಮಾಜಿ ನ್ಯಾಯಮೂರ್ತಿ ಈ ಬ್ಯುರೊ ಅಧ್ಯಕ್ಷರಾಗಿರುತ್ತಾರೆ. ಹೈಕೋರ್ಟ್‌ನಿಂದ ನಾಮನಿರ್ದೇಶನಗೊಂಡ ಇಬ್ಬರು ಜಿಲ್ಲಾ ನ್ಯಾಯಾಧೀಶರು, ಕರ್ನಾಟಕ ನ್ಯಾಯಾಂಗ ಅಕಾಡೆಮಿಯ ಒಬ್ಬ ಪ್ರತಿನಿಧಿ, ಮೂವರು ಕಾನೂನು ತಜ್ಞರು ಅಥವಾ ನ್ಯಾಯಾಂಗ ಆಡಳಿತದ ತಜ್ಞರು ಇದರ ಸದಸ್ಯರು. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿ ಶ್ರೇಣಿಯವರು ಸದಸ್ಯ ಕಾರ್ಯದರ್ಶಿ ಆಗಿರುತ್ತಾರೆ. ಈ ಬ್ಯುರೊ ಜಿಲ್ಲಾ ನ್ಯಾಯಾಂಗದಲ್ಲಿ ಸಮಗ್ರ ಸುಧಾರಣೆಗಾಗಿ ನೇಮಕಾತಿ, ತರಬೇತಿ, ಮೂಲಸೌಕರ್ಯ, ಪ್ರಕರಣಗಳ ನಿರ್ವಹಣೆ ಮತ್ತು ಕಾರ್ಯಕ್ಷಮತೆಯ ಮೌಲ್ಯಮಾಪನದಲ್ಲಿ ಸುಧಾರಣೆಗಳನ್ನು ಪರಿಶೀಲಿಸಬೇಕು ಮತ್ತು ಶಿಫಾರಸು ಮಾಡಬೇಕು ಎಂದು ಕರಡು ಮಸೂದೆ ಹೇಳಿದೆ.

- **<u>ಮಸೂದೆಯಲ್ಲಿ ಏನಿದೆ?</u>:** ರೈತರು, ನಿರುದ್ಯೋಗಿಗಳು, ಉದ್ಯೋಗ ವಂಚಿತರು, ಭೂ ವಿವಾದಗಳು, ಕೃಷಿ ಸಾಲಗಳು, ಬೆಳೆ ವಿಮೆ ಮತ್ತು ಹಿಡುವಳಿ ಸಮಸ್ಯೆಗಳು ಸೇರಿದಂತೆ ಕೃಷಿ ವಿವಾದಗಳನ್ನು ಒಳಗೊಂಡ ಸಿವಿಲ್ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವುದಕ್ಕೆ ಅನುಗುಣವಾಗಿ ಪ್ರತಿ ಜಿಲ್ಲೆಗೆ ಕನಿಷ್ಠ ಒಂದು ‘ತ್ವರಿತ ನ್ಯಾಯಾಲಯ’ ಸ್ಥಾಪಿಸಬೇಕು.
- ಈ ನ್ಯಾಯಾಲಯಗಳ ಮುಂದಿರುವ ಎಲ್ಲ ಪ್ರಕರಣಗಳಿಗೆ ಮಧ್ಯಸ್ಥಿಕೆ ಕೇಂದ್ರಗಳು, ಲೋಕ ಅದಾಲತ್ ಗಳು ಅಥವಾ ಪರ್ಯಾಯ ವಿವಾದ ಪರಿಹಾರ ಕೇಂದ್ರಗಳ ಮೂಲಕ ಪೂರ್ವ ವಿಚಾರಣೆಯ ಮಧ್ಯಸ್ಥಿಕೆ ಕಡ್ಡಾಯವಾಗಿ ಮಾಡಬೇಕು.
- ತ್ವರಿತ ನ್ಯಾಯಾಲಯಗಳ ಕಾರ್ಯಕ್ಷಮತೆಯ ಬಗ್ಗೆ ಜಿಲ್ಲಾ ನ್ಯಾಯಾಂಗ ಮೇಲ್ವಿಚಾರಣಾ ಸಮಿತಿಯು ತ್ರೈಮಾಸಿಕ ವರದಿಯನ್ನು ಹೈಕೋರ್ಟ್‌ಗೆ ಸಲ್ಲಿಸಬೇಕು. ಈ ನ್ಯಾಯಾಲಯಗಳ ಪೀಠಾಸೀನ ಅಧಿಕಾರಿಯು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ದೊಂದಿಗೆ ಸಮನ್ವಯ ಸಾಧಿಸಿ, ರೈತರಿಗೆ, ನಿರುದ್ಯೋಗಿಗಳಿಗೆ ಮತ್ತು ಉದ್ಯೋಗ ವಂಚಿತರಿಗೆ ಕಾನೂನು ನೆರವಿನ ಲಭ್ಯತೆಯನ್ನು ಖಾತರಿಪಡಿಸಬೇಕು.
- 10 ವರ್ಷಗಳಿಗಿಂತ ಹೆಚ್ಚು ಅವಧಿಯಿಂದ ಬಾಕಿ ಇರುವ ಪ್ರಕರಣ ಗಳನ್ನು (ವಿಶೇಷ ಕಾರಣಗಳಿಗಾಗಿ ಹೈಕೋರ್ಟ್ ನಿರ್ದೇಶನ ನೀಡದ ಹೊರತು) ಪ್ರಾದೇಶಿಕ ಮತ್ತು ವಿಷಯದ ಅಧಿಕಾರ ವ್ಯಾಪ್ತಿ ಹೊಂದಿರುವ ತ್ವರಿತ ನ್ಯಾಯಾಲಯಕ್ಕೆ ವರ್ಗಾಯಿಸಬೇಕು.
- ಐದು ಮತ್ತು ಹತ್ತು ವರ್ಷಗಳ ನಡುವೆ ಬಾಕಿ ಉಳಿದಿರುವ ಪ್ರಕರಣಗಳನ್ನು ಜಿಲ್ಲಾ ನ್ಯಾಯಾಧೀಶರ ಶಿಫಾರಸಿನ ಆಧಾರದಲ್ಲಿ ಅಥವಾ ಹೈಕೋರ್ಟ್ ನಿರ್ದೇಶನದ ಮೂಲಕ ತ್ವರಿತ ನ್ಯಾಯಾಲಯಕ್ಕೆ ವರ್ಗಾಯಿಸಬಹುದು. ಹೀಗೆ ವರ್ಗಾಯಿಸಿದ ಪ್ರತಿಯೊಂದು ಪ್ರಕರಣವನ್ನು ಸಾಧ್ಯವಾದಷ್ಟು ಮಟ್ಟಿಗೆ

Dr. RajkumarIAS

ವರ್ಗಾವಣೆಯಾದ ದಿನದಿಂದ 12 ತಿಂಗಳ ಒಳಗೆ ವಿಲೇವಾರಿ ಮಾಡಬೇಕು. ಈ ಬಗ್ಗೆ ಹೈಕೋರ್ಟ್‌ಗೆ ಪ್ರಗತಿ ವರದಿ ಸಲ್ಲಿಸಬೇಕು.

- ಮೇಲ್ವಿಚಾರಣಾ ಸಮಿತಿ ರಚನೆ: ಪ್ರತಿ ಜಿಲ್ಲೆಯಲ್ಲಿ ಪ್ರಧಾನ ಜಿಲ್ಲಾ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ, ಇಬ್ಬರು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ವಕೀಲರ ಸಂಘದ ಒಬ್ಬ ಪ್ರತಿನಿಧಿಯನ್ನು ಒಳಗೊಂಡ 'ಜಿಲ್ಲಾ ನ್ಯಾಯಾಂಗ ಮೇಲ್ವಿಚಾರಣಾ ಸಮಿತಿ' ಯನ್ನು ಹೈಕೋರ್ಟ್ ಸ್ಥಾಪಿಸಬೇಕು ಎಂದೂ ಮಸೂದೆಯಲ್ಲಿ ಉಲ್ಲೇಖಿಸಲಾಗಿದೆ.

## ❖ ಸಂಡೂರಿನಲ್ಲಿ ಕೌಶಲ ವಿ.ವಿ ಸ್ಥಾಪನೆ: 30 ಲಕ್ಷ ಯುವಜನರಿಗೆ ಕೌಶಲ ತರಬೇತಿ ಗುರಿ

**ಸಂದರ್ಭ: ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಕೌಶಲ ವಿಶ್ವವಿದ್ಯಾಲಯ ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.**

- ರಾಜ್ಯದ ಜನಸಂಖ್ಯೆಯ ಶೇಕಡ 60ಕ್ಕಿಂತ ಹೆಚ್ಚು ಜನರು 35 ವರ್ಷದ ಒಳಗೆ ಇದ್ದಾರೆ. ಯುವಪೀಳಿಗೆಯನ್ನು ಸರಿಯಾದ ಕೌಶಲ ಮತ್ತು ಆತ್ಮ ವಿಶ್ವಾಸದಿಂದ ಸಜ್ಜುಗೊಳಿಸ ಬೇಕಿದೆ.ನವೋದ್ಯಮ ರಾಜಧಾನಿಯಾಗಿ ರೂಪಾಂತರಗೊಂಡಿರುವ ಬೆಂಗಳೂರು ನಗರ, ಈಗ ಭಾರತದ ಕೌಶಲ ರಾಜಧಾನಿ ಆಗಿರುವುದು ಹೆಮ್ಮೆ ಎಂದರು.
- **'ಬಜೆಟ್‌ನಲ್ಲಿ ಘೋಷಿಸಿದ್ದ ಕರ್ನಾಟಕ ಕೌಶಲಾಭಿವೃದ್ಧಿ ನೀತಿ 2025-32 ಅನ್ನು ಕೌಶಲ ಶೃಂಗಸಭೆ-2025ರ ಮೂಲಕ ಕಾರ್ಯರೂಪಕ್ಕೆ ತರಲಾಗುತ್ತಿದೆ.** ಏಳು ವರ್ಷದ ಕಾರ್ಯತಂತ್ರದ ನೀಲನಕ್ಷೆಗೆ ₹4,432 ಕೋಟಿ ಅನುದಾನ ನೀಡಿ, ರಾಜ್ಯವನ್ನು ಕೌಶಲಭರಿತ ಹಾಗೂ ಭವಿಷ್ಯದ ಸವಾಲುಗಳಿಗೆ ಸನ್ನದ್ಧ ವಾಗಿಸುವ ಹಾಗೂ ಕಾರ್ಮಿಕ ಶಕ್ತಿಯ ಜಾಗತಿಕ ಕೇಂದ್ರವನ್ನಾಗಿ ರೂಪಿಸುವ ಉದ್ದೇಶವಿದೆ' ಎಂದು ವಿವರಿಸಿದರು.
- **2032ರ ವೇಳೆಗೆ ಸುಮಾರು 30 ಲಕ್ಷ ಯುವಜನರಿಗೆ ಕೌಶಲ ತರಬೇತಿ ನೀಡಲಾಗುವುದು**. ಐಟಿಐಗಳಲ್ಲಿ ಮಹಿಳೆಯರ ಪ್ರವೇಶವನ್ನು ಶೇಕಡ 33ಕ್ಕೆ ಹೆಚ್ಚಿಸುವ ಹಾಗೂ ಅಂತರರಾಷ್ಟ್ರೀಯ ವಲಸೆ ಕೇಂದ್ರ ಮೂಲಕ ಜಾಗತಿಕ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಗುರಿ ಹೊಂದಲಾಗಿದೆ ಎಂದರು..
- **ನೀಲನಕ್ಷೆ ಬಿಡುಗಡೆ:** 2025–2032 ಹಾಗೂ ಕರ್ನಾಟಕ ವರ್ಕ್‌ಫೋರ್ಸ್ ಬ್ಲೂಪ್ರಿಂಟ್-2030 ಬಿಡುಗಡೆ ಮಾಡಲಾಯಿತು.

## ❖ 'ಆಹಾರ ಸುರಕ್ಷತೆಗೆ ಮಾನದಂಡ ರೂಪಿಸಿ'

**ಸಂದರ್ಭ: 'ಬೀದಿ ಬದಿ ವ್ಯಾಪಾರಿಗಳು ಹಾಗೂ ದೊಡ್ಡ-ದೊಡ್ಡ ರೆಸ್ಟೋರೆಂಟ್‌ಗಳು ಆರೋಗ್ಯ ಮತ್ತು ಸುರಕ್ಷತಾ ಮಾನದಂಡ ನಿಯಮಗಳನ್ನು ಚಾಚೂ ತಪ್ಪದೆ ಅನುಸರಣೆ ಮಾಡುವ ಜತೆಗೆ, ನಿಯಮಗಳ ಕಟ್ಟುನಿಟ್ಟಿನ ಅನುಷ್ಠಾನದ ಬಗ್ಗೆ ನಿಗಾ ಇರಿಸುವುದಕ್ಕೆ ಸೂಕ್ತ ಕಾರ್ಯ ವಿಧಾನವೊಂದನ್ನು ರೂಪಿಸಬೇಕು' ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಮಹತ್ವದ ನಿರ್ದೇಶನ ನೀಡಿದೆ.**

- 'ಕರ್ನಾಟಕ ಪ್ರದೇಶ ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳ ಸಂಘ' ದ ಗೌರವ ಕಾರ್ಯದರ್ಶಿ ನಾಗರಾಜ ಧನ್ಯ ಮತ್ತು 'ಬೃಹತ್ ಬೆಂಗಳೂರು ಹೋಟೆಲ್‌ಗಳ ಸಂಘ' ದ ಅಧ್ಯಕ್ಷ ಕೆ.ಎನ್. ವಾಸುದೇವ ಅಡಿಗ ಸಲ್ಲಿಸಿದ್ದ ರಿಟ್ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಕುರಿತಂತೆ ತೀರ್ಪು ನೀಡಿದೆ.

***ನ್ಯಾಯಪೀಠ ಹೇಳಿದ್ದೇನು?***

- 'ಮಾನವನ ಆಹಾರ ಸೇವನೆ ಎಲ್ಲಿಯವರೆಗೆ ಜೀವಂತವಾಗಿರುತ್ತದೆಯೋ ಅಲ್ಲಿಯವರೆಗೂ ಸೇವಿಸುವ ಆಹಾರ ಆರೋಗ್ಯಕರವಾಗಿ ಇರಬೇಕು. ಆರೋಗ್ಯ ಕಾರಣಗಳಿಗಾಗಿ, ಪ್ರತಿಯೊಬ್ಬ ನಾಗರಿಕನೂ ತನ್ನ ಆಹಾರದ ಗುಣಮಟ್ಟವನ್ನು ಕಾಪಾಡಿಕೊಳ್ಳುವುದು ಅತ್ಯಗತ್ಯ.

Rajkumar IAS/KAS Academy

- ‘ಭಾರತದಲ್ಲಿ ಬೀದಿ ಬದಿ ಆಹಾರಕ್ಕೆ ಅದರದೇ ಆದ ಸಾಂಸ್ಕೃತಿಕ ಆಯಾಮವಿದೆ. ರಸ್ತೆಬದಿಯ ಸಾಮಾನ್ಯ ಅಂಗಡಿಗಳಿಂದ ಹಿಡಿದು ಆಧುನಿಕ ರೆಸ್ಟೋರೆಂಟ್‌ಗಳವರೆಗೆ, ಭಾರತೀಯ ಪಾಕಪದ್ಧತಿಯ ವಿಶೇಷ ಘಮಲು ಚೈತನ್ಯಶೀಲ ಅಭಿವೃದ್ಧಿ ಉದ್ಯಮದ ಸಂಕೇತವಾಗಿದೆ. ಆದ್ದರಿಂದ, ಈ ಎಲ್ಲ ಉದ್ಯಮಗಳ ವಾರ್ಷಿಕ ವಹಿವಾಟನ್ನು ಆರ್ಥಿಕ ಮಾಪಕದ ಮೂಲಕ ಆಹಾರ ವ್ಯವಹಾರಗಳ ಪರವಾನಗಿ ಮತ್ತು ನೋಂದಣಿ ನಿಯಮಗಳು-2011ರಡಿ ಸಣ್ಣ ಮತ್ತು ದೊಡ್ಡ ರೆಸ್ಟೋರೆಂಟ್‌ಗಳೆಂದು ಪ್ರತ್ಯೇಕಿಸುತ್ತವೆ ಎಂಬುದು ಗಮನಾರ್ಹ.’
- ‘ಮನುಷ್ಯರ ಆರೋಗ್ಯಕ್ಕೆ ಎದುರಾಗುವ ಅಪಾಯಗಳ ಬಗ್ಗೆ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಕಾಯ್ದೆ-2006ರ ನಿಯಮಗಳ ಅಡಿಯಲ್ಲಿ ಸಣ್ಣ, ಮಧ್ಯಮ ಮತ್ತು ಬೃಹತ್ ರೆಸ್ಟೋರೆಂಟ್‌ಗಳಿಗೆ ತ್ರಿಪಕ್ಷೀಯ ಮಾರ್ಗಸೂಚಿಯೊಂದನ್ನು ರೂಪಿಸಬೇಕು’ ಎಂದೂ ನ್ಯಾಯಪೀಠ ಇದೇ ವೇಳೆ ಕೇಂದ್ರ ಸರ್ಕಾರಕ್ಕೆ ಖಡಕ್ ತಾಕೀತು ಮಾಡಿದೆ.
- ‘ಅರ್ಜಿದಾರರು ಆಕ್ಷೇಪಿಸಿರುವ ನಿಬಂಧನೆಗಳನ್ನು ಅಸಾಂವಿಧಾನಿಕ ಎಂದು ನಿರ್ಣಯಿಸಿ ಅವುಗಳನ್ನು ರದ್ದುಗೊಳಿಸಲು ಯಾವುದೇ ಕಾರಣಗಳಿಲ್ಲ’ ಎಂದು ಸ್ಪಷ್ಟಪಡಿಸಿದೆ.
- ***ಏನಿದು ಅರ್ಜಿ?:*** ‘ಆಹಾರ ಸುರಕ್ಷತೆ ದೃಷ್ಟಿಯಿಂದ ನಿಯಮಗಳನ್ನು ರೂಪಿಸಿ, ಸೂಕ್ತ ಮಾರ್ಗಸೂಚಿಗಳನ್ನು ಹೊರಡಿಸಬೇಕು’ ಎಂದು ಕೇಂದ್ರ ಸರ್ಕಾರ ಎಲ್ಲ ರಾಜ್ಯಗಳಿಗೆ ನಿರ್ದೇಶನ ನೀಡಿತ್ತು. ಈ ಸಂಬಂಧ ಆಹಾರ ಸುರಕ್ಷಾ ಆಯುಕ್ತರು 2012ರ ಮಾರ್ಚ್ 13ರಂದು ಅಧಿಸೂಚನೆ ಹೊರಡಿಸಿದ್ದರು.
- ‘ಈ ಅಧಿಸೂಚನೆಯನ್ನು ರದ್ದುಪಡಿಸಬೇಕು’ ಎಂದು ಕೋರಿ ಅರ್ಜಿದಾರರು ಹೈಕೋರ್ಟ್ ಮೆಟ್ಟಿಲೇರಿದ್ದರು. **‘ಆಹಾರ ಸುರಕ್ಷತೆ ಮತ್ತು ಮಾನದಂಡಗಳ ನಿಯಂತ್ರಣ, (ಪ್ಯಾಕೇಜಿಂಗ್ ಮತ್ತು ಲೇಬಲಿಂಗ್) ನಿಯಮಗಳು-2011, ಆಹಾರ ಸುರಕ್ಷತೆ ಮತ್ತು ಮಾನದಂಡಗಳು, ಆಹಾರ ಉತ್ಪನ್ನಗಳ ಮಾನದಂಡಗಳು ಮತ್ತು ಆಹಾರ ಸೇರ್ಪಡೆಗಳ ನಿಯಮಗಳು-2011 ಮತ್ತು ಆಹಾರ ಸುರಕ್ಷತೆ ಮತ್ತು ಪ್ರಮಾಣಿತ ಕಾಯ್ದೆ-2006ರ 50 ರಿಂದ 65 ರವರೆಗಿನ ಕಲಂಗಳು ಅಸಾಂವಿಧಾನಿಕ’ ಎಂದು ಅರ್ಜಿದಾರರು ಆಕ್ಷೇಪಿಸಿದ್ದರು.**
- ‘ಮಾನದಂಡಗಳನ್ನು ಅನ್ವಯಿಸಲು ನಮಗೆ ಸಾಧ್ಯವಿಲ್ಲ’ ಎಂದು ಅರ್ಜಿದಾರರಾದ ಹೋಟೆಲ್ ಸಂಘಗಳು ಪ್ರತಿಪಾದಿಸಿದ್ದವು.

## ❖ ದೇಶದ ಆರನೇ ಕಲುಷಿತ ನಗರ ದೆಹಲಿ: ವರದಿ

**ಸಂದರ್ಭ: ಅಕ್ಟೋಬರ್‌ನಲ್ಲಿ ಗಾಳಿಯು ಅತಿ ಹೆಚ್ಚು ಕಲುಷಿತಗೊಂಡ ದೇಶದ 10 ನಗರಗಳ ಪಟ್ಟಿಯಲ್ಲಿ ದೆಹಲಿ ಆರನೇ ಸ್ಥಾನ ಪಡೆದಿದ್ದು, ಗಾಜಿಯಾಬಾದ್ ಮತ್ತು ನೊಯಿಡಾ ನಂತರದ ಸ್ಥಾನದಲ್ಲಿವೆ ಎಂದು ಅಧ್ಯಯನವೊಂದು ತಿಳಿಸಿದೆ.**

- ಶಕ್ತಿ ಮತ್ತು ಶುದ್ಧ ಗಾಳಿಯ ಸಂಶೋಧನಾ ಕೇಂದ್ರ (ಸಿಆರ್‌ಇಎ) ಬಿಡುಗಡೆ ಮಾಡಿದ ಅಕ್ಟೋಬರ್ ತಿಂಗಳ ವಾಯು ಗುಣಮಟ್ಟದ ವರದಿಯ ಪ್ರಕಾರ, ಹರಿಯಾಣದ ಧಾರುಹೆಡಾ ನಗರವು ಅಕ್ಟೋಬರ್‌ನಲ್ಲಿ ವಾಯು ಮಾಲಿನ್ಯದಲ್ಲಿ ಮೊದಲ ಸ್ಥಾನದಲ್ಲಿತ್ತು. ಅಲ್ಲಿ ಪ್ರತಿ ಘನ ಮೀಟರ್ ಗಾಳಿಯಲ್ಲಿ 123 ಮೈಕ್ರೋ ಗ್ರಾಂನಷ್ಟು ಮಾಲಿನ್ಯಕಾರಕ ಕಣಗಳು ಪತ್ತೆಯಾಗಿದ್ದವು.
- ದೇಶದಾದ್ಯಂತ ಗಾಳಿಯ ಗುಣಮಟ್ಟದಲ್ಲಿ ತೀವ್ರ ಕುಸಿತ ಕಂಡುಬಂದಿದ್ದು, ಇಂಡೋ-ಗಂಗಾ ಬಯಲು (ಐಜಿಪಿ), ವಿಶೇಷವಾಗಿ ರಾಷ್ಟ್ರ ರಾಜಧಾನಿ ಪ್ರದೇಶದಲ್ಲಿ (ಎನ್‌ಆರ್‌ಸಿ) ಪರಿಸ್ಥಿತಿ ತೀವ್ರ ಹದಗೆಟ್ಟಿದೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ.

## ❖ ‘ಪೋಕ್ಸೊ’ ದುರ್ಬಳಕೆ: ‘ಸುಪ್ರೀಂ’ ಕಳವಳ

**ಸಂದರ್ಭ: ವೈವಾಹಿಕ ಕಲಹ ಮತ್ತು ಹದಿಹರೆಯದವರ ನಡುವಿನ ಸಹಮತದ ಸಂಬಂಧಗಳ ಪ್ರಕರಣಗ ಳಲ್ಲಿ ‘ಪೋಕ್ಸೊ’ ಕಾಯ್ದೆ ದುರುಪಯೋಗ ಆಗುತ್ತಿದೆ ಎಂದು ಸುಪ್ರೀಂ ಕೋರ್ಟ್ ಕಳವಳ ವ್ಯಕ್ತಪಡಿಸಿದೆ.**

- ಈ ಸಂಬಂಧ ಕಾನೂನು ನಿಬಂಧನೆಗಳ ಕುರಿತು ಬಾಲಕರು ಮತ್ತು ಪುರುಷರಿಗೆ ಜಾಗೃತಿ ಮೂಡಿಸಬೇಕಾದ ಅಗತ್ಯವಿದೆ ಎಂದು ನ್ಯಾಯಮೂರ್ತಿಗಳಾದ ಬಿ.ವಿ.ನಾಗರತ್ನ ಮತ್ತು ಆರ್. ಮಹದೇವನ್ ಅವರ ಪೀಠ ಒತ್ತಿ ಹೇಳಿದೆ.
- ‘ದೇಶದಲ್ಲಿ ಬಾಲಕಿಯರು ಮತ್ತು ಮಹಿಳೆಯರಿಗೆ ಸುರಕ್ಷಿತ ವಾತಾವರಣ ಮೂಡಿಸಲು ‘ಪೋಕ್ಸೊ’ ಕಾಯ್ದೆ ಬಗ್ಗೆ ಜನರಲ್ಲಿ ಸಂವೇದನಾಶೀಲತೆ ಬೆಳೆಯುವಂತೆ ಮಾಡಬೇಕಿದೆ. ಅದಕ್ಕೆ ಅಗತ್ಯ ನಿರ್ದೇಶನಗಳನ್ನು ನೀಡಬೇಕು’ ಎಂದು ಕೋರಿ ಸಲ್ಲಿಕೆಯಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ (ಪಿಐಎಲ್) ವಿಚಾರಣೆಯನ್ನು ಪೀಠ ನಡೆಸಿತು.

## ❖ ಎಸ್‌ಐಆರ್ ಪ್ರಕ್ರಿಯೆ ಆರಂಭ

**ಸಂದರ್ಭ: 2002ರಲ್ಲಿ ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆಯು ಎರಡು ವರ್ಷದವರೆಗೆ ನಡೆದಿತ್ತು. ಈ ಬಾರಿ ಒಂದೇ ತಿಂಗಳಿಗೆ ಇದನ್ನು ಮುಗಿಸಿಬಿಡುವ ಆತುರ ಆಯೋಗಕ್ಕೆ ಏಕೆ? ಮಮತಾ ಬ್ಯಾನರ್ಜಿ ಪಶ್ಚಿಮ ಬಂಗಾಳ ಮುಖ್ಯಮಂತ್ರಿ.**

- ಮೂರು ಕೇಂದ್ರಾಡಳಿತ ಪ್ರದೇಶ ಮತ್ತು 9 ರಾಜ್ಯಗಳಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯವನ್ನು ಚುನಾವಣಾ ಆಯೋಗವು ಆರಂಭಿಸಿದೆ.
- ಮತಗಟ್ಟೆ ಹಂತದ ಅಧಿಕಾರಿಗಳು ಮನೆ ಮನೆಗೆ ತೆರಳಿ ಸ್ವಯಂ ಮಾಹಿತಿ ಗಳನ್ನು ತುಂಬುವ ನಮೂನೆಗಳನ್ನು ವಿತರಿಸಿದರು.
- ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ನೇತೃತ್ವದ ಸರ್ಕಾರವು ಎಸ್‌ಐ ಆರ್‌ಗೆ ತೀವ್ರ ವಿರೋಧ ವ್ಯಕ್ತಪಡಿಸಿದೆ. ‘ಎಸ್‌ಐಆರ್ ಅಂದರೆ ಮತ್ತೇನೂ ಅಲ್ಲ, ಅದು ‘ರಾಷ್ಟ್ರೀಯ ಪೌರತ್ವ ನೋಂದಣಿ (ಎನ್ ಆರ್‌ಸಿ)’ ಇದ್ದಂತೆ’ ಎಂದಿರುವ ತಮಿಳುನಾಡು ಸರ್ಕಾರ, ಇದರ ವಿರುದ್ಧ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದೆ.
- ಎಸ್‌ಐಆರ್ ಕುರಿತು ನಿರ್ಧಾರ ಕೈಗೊಳ್ಳಲು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರು ಬುಧವಾರ ಆನ್‌ಲೈನ್ ಮೂಲಕ ಸರ್ವ ಪಕ್ಷ ಸಭೆ ಕರೆದಿದ್ದಾರೆ.
- ***ವ್ಯಕ್ತಿ ಆತ್ಮಹತ್ಯೆ:***‘ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಪ್ರಕ್ರಿಯೆ ಆರಂಭಗೊಂಡ ಕಾರಣ, ದಾಖಲೆಗಳಲ್ಲಿ ಇರುವ ತನ್ನ ಹೆಸರಿನ ಕಾಗುಣಿತದಲ್ಲಿ ತಪ್ಪುಗಳಿವೆ ಎಂದು ಹೆದರಿ ಹೌರಾ ಜಿಲ್ಲೆಯ ಜಾಹಿರ್ ಮಲ್ (30) ಎಂಬುವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ’ ಎಂದು ಪೊಲೀಸರು ತಿಳಿಸಿದರು.

## ❖ ಪಿಎಲ್‌ಐ 3ನೇ ಸುತ್ತು ಶುರು

**ಸಂದರ್ಭ: ಹೂಡಿಕೆ ಇನ್ನಷ್ಟು ಆಕರ್ಷಿಸುವುದು ಕೇಂದ್ರದ ಉದ್ದೇಶ: ವಿಶೇಷ ಬಳಕೆ ಉದ್ದೇಶದ ಉಕ್ಕು ತಯಾರಿಕಾ ವಲಯದಲ್ಲಿ ಹೂಡಿಕೆಯನ್ನು ಆಕರ್ಷಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ಮೂರನೆಯ ಸುತ್ತಿನ ಉತ್ಪಾದನೆ ಆಧಾರಿತ ಉತ್ತೇಜನ (ಪಿಎಲ್‌ಐ) ಯೋಜನೆಯನ್ನು ಆರಂಭಿಸಿದೆ.**

- ದೇಶಿ ಉತ್ಪಾದನೆ ಹೆಚ್ಚಿಸುವುದು ಹಾಗೂ ಆಮದನ್ನು ತಗ್ಗಿಸುವುದು ಕೂಡ ಪಿಎಲ್‌ಐ ಯೋಜನೆಯ ಉದ್ದೇಶಗಳಲ್ಲಿ ಒಂದಾಗಿದೆ. ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಈ ಯೋಜನೆಗೆ ಚಾಲನೆ ನೀಡಿದರು.
- ರಕ್ಷಣೆ, ವೈಮಾಂತರಿಕ್ಷ, ಇಂಧನ, ವಾಹನ ಮತ್ತು ಮೂಲಸೌಕರ್ಯ ವಲಯಗಳಲ್ಲಿ ಬಳಕೆ ಮಾಡುವ ‘ವಿಶೇಷ ಬಳಕೆ ಉದ್ದೇಶದ ಉಕ್ಕು’ ತಯಾರಿಕಾ ವಲಯಕ್ಕೆ ಸಂಬಂಧಿಸಿದ ಪಿಎಲ್‌ಐ ಯೋಜನೆಗೆ ಕೇಂದ್ರ

Dr. Rajkumar IAS/KAS Academy

ಸಚಿವ ಸಂಪುಟವು 2021ರ ಜುಲೈನಲ್ಲಿ ಒಪ್ಪಿಗೆ ನೀಡಿತ್ತು. ಇದಕ್ಕೆ ₹6,322 ಕೋಟಿ ಅನುದಾನ ನಿಗದಿ ಮಾಡಲಾಗಿತ್ತು.

- ಈ ಯೋಜನೆಯು ಮೊದಲ ಎರಡು ಸುತ್ತುಗಳಲ್ಲಿ ಇದುವರೆಗೆ ₹43,874 ಕೋಟಿ ಹೂಡಿಕೆಯನ್ನು ಆಕರ್ಷಿಸಿದೆ. ಈ ಪೈಕಿ ₹22,973 ಕೋಟಿ ಈಗಾಗಲೇ ಹೂಡಿಕೆ ಆಗಿದೆ. ಅಲ್ಲದೆ, ಮೊದಲ ಎರಡು ಸುತ್ತುಗಳ ಮೂಲಕ 13 ಸಾವಿರಕ್ಕೂ ಹೆಚ್ಚಿನ ಉದ್ಯೋಗ ಸೃಷ್ಟಿಯಾಗಿದೆ.
- ‘ಮೊದಲ ಎರಡು ಸುತ್ತುಗಳಲ್ಲಿ ದೊರೆತ ಸ್ಪಂದನೆಯು ಉತ್ತೇಜನಕಾರಿ ಯಾಗಿದೆ. ಆ ಯಶಸ್ಸು ಸುಧಾರಣೆ ಆಧಾರಿತ ಹಾಗೂ ಕೈಗಾರಿಕೆಗಳಿಗೆ ಅಗತ್ಯವಿರುವ ನೀತಿಗಳ ಶಕ್ತಿಯನ್ನು ಹೇಳುತ್ತಿದೆ’ ಎಂದು ಕುಮಾರಸ್ವಾಮಿ ಅವರು ತಿಳಿಸಿದ್ದಾರೆ.
- ‘ಈ ಯೋಜನೆಯ ಮೂಲಕ ನಾವು ಭಾರತದಲ್ಲಿ ಉಕ್ಕು ತಯಾರಿಕೆ ಮಾಡುವುದಕ್ಕೆ ಮಾತ್ರ ಗಮನ ನೀಡುತ್ತಿಲ್ಲ. ಬದಲಿಗೆ, ಭಾರತದಿಂದ ಜಗತ್ತಿಗೆ ಉಕ್ಕು ಪೂರೈಕೆ ಮಾಡುವತ್ತಲೂ ಆಲೋಚನೆ ಹೊಂದಿದ್ದೇವೆ’ ಎಂದು ಹೇಳಿದ್ದಾರೆ.
- ಯೋಜನೆಯ ಮೂರನೆಯ ಸುತ್ತು ಹೊಸ ಉದ್ದಿಮೆಗಳಿಗೆ ಹಾಗೂ ಈಗಾಗಲೇ ಇರುವ ಉದ್ದಿಮೆಗಳಿಗೆ ಹೊಸ ಅವಕಾಶಗಳನ್ನು ತೆರೆಯುತ್ತದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

## ❖ ಸುಡಾನ್: ಕದನ ವಿರಾಮಕ್ಕೆ ಆಗ್ರಹ

**ಸಂದರ್ಭ: ಸುಡಾನ್‌ನಲ್ಲಿನ ಆಂತರಿಕ ಸಂಘರ್ಷ ಶಮನಗೊಳಿಸಲು ತಕ್ಷಣವೇ ಕದನ ವಿರಾಮ ಜಾರಿಗೊಳಿಸಿ ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೊನಿಯೊ ಗುಟೆರೆಸ್ ಆಗ್ರಹಿಸಿದ್ದಾರೆ.**

- ಎಲ್ ಫಾಶರ್‌ನ ಡಾರ್ಫರ್ ನಗರವನ್ನು ಅರೆಸೈನಿಕ ಪಡೆಗಳು ವಶಪಡಿಸಿಕೊಂಡ ಬೆನ್ನಿಗೆ, ‘ಸುಡಾನ್ ನಲ್ಲಿನ ಆಂತರಿಕ ಸಂಘರ್ಷವು ಯಾರ ನಿಯಂತ್ರಣಕ್ಕೂ ಸಿಗದಾಗಿದೆ’ ಎಂದಿದ್ದಾರೆ.
- ಕತಾರ್‌ನಲ್ಲಿ ನಡೆದ ವಿಶ್ವಸಂಸ್ಥೆಯ ಶೃಂಗಸಭೆಯಲ್ಲಿ ಮಾತನಾಡಿದ ಗುಟೆರೆಸ್, ‘ಗಂಭೀರ ಎಚ್ಚರಿಕೆ ನೀಡಿದ್ದರೂ ಎಲ್ ಫಾಶರ್ ವಶಪಡಿಸಿಕೊಂಡಿದ್ದಾರೆ’ ಎಂದು ಅಸಮಾಧಾನ ವ್ಯಕ್ತಪಡಿಸಿದರು.
- ಸುಡಾನ್‌ನಲ್ಲಿನ ಆಂತರಿಕ ಸಂಘರ್ಷವು ಎರಡು ವರ್ಷದಿಂದಲೂ ಜಗತ್ತಿನ ಮಾನವೀಯ ಬಿಕ್ಕಟ್ಟುಗಳಲ್ಲಿ ಒಂದಾಗಿದೆ.
- ಈ ಸಂಘರ್ಷದಲ್ಲಿ ಅಪಾರ ಸಂಖ್ಯೆಯ ನಾಗರಿಕರು ಸಿಲುಕಿಕೊಂಡಿದ್ದು, ತುರ್ತಾಗಿ ಕದನ ವಿರಾಮ ಒಪ್ಪಂದ ಏರ್ಪಡಬೇಕು ಎಂದು ಹೇಳಿದ್ದಾರೆ.

## ❖ ‘ಬ್ಯಾಂಕ್ ಖಾಸಗೀಕರಣದಿಂದ ಧಕ್ಕೆ ಇಲ್ಲ’

**ಸಂದರ್ಭ: ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳ ಖಾಸಗೀಕರಣದಿಂದ ಹಣಕಾಸಿನ ಒಳಗೊಳ್ಳುವಿಕೆಯ ಉದ್ದೇಶಕ್ಕೆ ಮತ್ತು ರಾಷ್ಟ್ರದ ಹಿತಾಸಕ್ತಿಗೆ ಧಕ್ಕೆ ಆಗುತ್ತದೆ ಎಂಬ ಆತಂಕದಲ್ಲಿ ಹುರುಳಿಲ್ಲ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.**

- 1969ರಲ್ಲಿ ನಡೆದ ಬ್ಯಾಂಕ್‌ಗಳ ರಾಷ್ಟ್ರೀಕರಣ ಪ್ರಕ್ರಿಯೆಯು ಹಣಕಾಸಿನ ಒಳಗೊಳ್ಳುವಿಕೆಯ ವಿಚಾರದಲ್ಲಿ ಅಪೇಕ್ಷಿತ ಫಲಿತಾಂಶವನ್ನು ನೀಡಿಲ್ಲ ಎಂದು ಅವರು ಹೇಳಿದರು.
- ಡೆಲ್ಲಿ ಸ್ಕೂಲ್ ಆಫ್ ಎಕನಾಮಿಕ್ಸ್‌ನ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ‘ರಾಷ್ಟ್ರೀಕರಣದಿಂದಾಗಿ ಆದ್ಯತಾ ವಲಯಗಳಿಗೆ ಸಾಲ ನೀಡುವ ವಿಚಾರದಲ್ಲಿ, ಸರ್ಕಾರದ ಯೋಜನೆಗಳ ವಿಚಾರದಲ್ಲಿ ಅನುಕೂಲ ಆಗಿದ್ದು ನಿಜ. ಆದರೆ ಸರ್ಕಾರದ ನಿಯಂತ್ರಣದ ಕಾರಣದಿಂದಾಗಿ ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳು ವೃತ್ತಿಪರತೆ ಯನ್ನು ಕಳೆದುಕೊಂಡವು’ ಎಂದು ಹೇಳಿದರು.
- ‘ನಾವು ಬ್ಯಾಂಕ್‌ಗಳನ್ನು ವೃತ್ತಿಪರವಾಗಿಸಿದ ನಂತರದಲ್ಲಿ’ ರಾಷ್ಟ್ರೀಕರಣದ ಉದ್ದೇಶಗಳು ‘ಬಹಳ ಚೆಂದವಾಗಿ ಅನುಷ್ಠಾನ ಗೊಳ್ಳುತ್ತಿವೆ’ ಎಂದು ನಿರ್ಮಲಾ ವಿವರಿಸಿದರು. ‘ಬ್ಯಾಂಕ್‌ಗಳನ್ನು ವೃತ್ತಿಪರವಾಗಿ ಸಲು ಯತ್ನಿಸಿದಾಗ, ಅಥವಾ ಅವುಗಳ ಖಾಸಗೀಕರಣದ ಉದ್ದೇಶ ಹೊಂದಿದಾಗ, ಬ್ಯಾಂಕ್

ಗಳನ್ನು ಎಲ್ಲರಿಗೂ ತೆರೆದು ಕೊಳ್ಳುವಂತೆ ಮಾಡುವ ಉದ್ದೇಶವು ಸೋಲುತ್ತದೆ ಎಂಬ ಗ್ರಹಿಕೆ ತಪ್ಪು' ಎಂದು ವಿವರಿಸಿದರು.

- ಬ್ಯಾಂಕ್‌ಗಳು ವೃತ್ತಿಪರವಾಗಿ ನಡೆಯಲು ಅವಕಾಶ ಕಲ್ಪಿಸಿದಾಗ, ಬ್ಯಾಂಕ್‌ಗಳಿಗೆ ಸಂಬಂಧಿಸಿದ ತೀರ್ಮಾನಗಳನ್ನು ಅಲ್ಲಿನ ಆಡಳಿತ ಮಂಡಳಿಗಳೇ ತೆಗೆದುಕೊಂಡಾಗ, ರಾಷ್ಟ್ರೀಯ ಹಿತಾಸಕ್ತಿ ಹಾಗೂ ಬ್ಯಾಂಕಿನ ಹಿತಾಸಕ್ತಿಗಳು ಈಡೇರುತ್ತವೆ ಎಂದು ಹೇಳಿದರು.
- ಬ್ಯಾಂಕ್ ಖಾಸಗೀಕರಣದ ಭಾಗವಾಗಿ ಕೇಂದ್ರ ಸರ್ಕಾರವು ಐಡಿಬಿಐ ಬ್ಯಾಂಕ್‌ನ ಶೇ 51ರಷ್ಟು ಷೇರುಗಳನ್ನು ಭಾರತೀಯ ಜೀವ ವಿಮಾ ನಿಗಮಕ್ಕೆ (ಎಲ್‌ಐಸಿ) 2019ರಲ್ಲಿ ಮಾರಾಟ ಮಾಡಿದೆ.

## ❖ ಮಹಿಳೆಯರ ಏಕದಿನ ರ‍್ಯಾಂಕಿಂಗ್ ಅಗ್ರಸ್ಥಾನ ಕಳೆದುಕೊಂಡ ಮಂದಾನ

**ಸಂದರ್ಭ: ಭಾರತ ಕ್ರಿಕೆಟ್ ತಂಡದ ಉಪನಾಯಕಿ ಸ್ಮೃತಿ ಮಂದಾನ ಅವರು ಐಸಿಸಿ ಮಹಿಳಾ ಏಕದಿನ ಬ್ಯಾಟರ್‌ಗಳ ರ‍್ಯಾಂಕಿಂಗ್‌ನಲ್ಲಿ ಅಗ್ರಸ್ಥಾನ ಕಳೆದುಕೊಂಡಿದ್ದಾರೆ. ಜೆಮಿಮಾ ರಾಡ್ರಿಗಸ್ ಅವರು ಅಗ್ರ ಹತ್ತರಲ್ಲಿ ಸ್ಥಾನ ಪಡೆದಿದ್ದಾರೆ.**

- ಮಹಿಳಾ ಏಕದಿನ ವಿಶ್ವಕಪ್‌ನ ಸೆಮಿಫೈನಲ್ ಮತ್ತು ಫೈನಲ್‌ನಲ್ಲಿ ಅಮೋಘ ಶತಕ ದಾಖಲಿಸಿದ್ದ ದಕ್ಷಿಣ ಆಫ್ರಿಕಾ ತಂಡದ ನಾಯಕಿ ಲಾರಾ ವೋಲ್ವಾರ್ಟ್ ಎರಡು ಸ್ಥಾನಗಳ ಬಡ್ತಿ ಪಡೆದು, ಮಂದಾನ ಅವರನ್ನು ಹಿಂದಿಕ್ಕಿ ಅಗ್ರಸ್ಥಾನಕ್ಕೇರಿದ್ದಾರೆ.
- ಟೂರ್ನಿಯಲ್ಲಿ ದಾಖಲೆಯ 571 ರನ್ ಗಳಿಸಿದ ವೋಲ್ವಾರ್ಟ್ ಅವರು ವೃತ್ತಿಜೀವನದಲ್ಲೇ ಗರಿಷ್ಠ ರೇಟಿಂಗ್ (814) ಸಂಪಾದಿಸಿದ್ದಾರೆ. ಮಂದಾನ ಎರಡನೇ ಸ್ಥಾನ ಸ್ಥಾನಕ್ಕೆ ಸರಿದಿದ್ದಾರೆ.
- ವಿಶ್ವಕಪ್ ಸೆಮಿಫೈನಲ್‌ನಲ್ಲಿ ಆಸ್ಟ್ರೇಲಿಯಾ ವಿರುದ್ಧ ಅಜೇಯ ಶತಕ ದಾಖಲಿಸಿದ್ದ ಜೆಮಿಮಾ ಒಂಬತ್ತು ಸ್ಥಾನಗಳ ಬಡ್ತಿ ಪಡೆದು 10ನೇ ಸ್ಥಾನಕ್ಕೆ ಜಿಗಿದಿದ್ದಾರೆ. ನಾಯಕಿ ಹರ್ಮನ್‌ಪ್ರೀತ್ ಕೌರ್ ನಾಲ್ಕು ಸ್ಥಾನಗಳ ಬಡ್ತಿಯೊಂದಿಗೆ 14ನೇ ಸ್ಥಾನದಲ್ಲಿದ್ದಾರೆ.
- ಬೌಲರ್‌ಗಳ ರ‍್ಯಾಂಕಿಂಗ್‌ನಲ್ಲಿ ಇಂಗ್ಲೆಂಡ್‌ನ ಸೋಫಿ ಎಕ್ಲೆಸ್ಟೋನ್ ಅಗ್ರಸ್ಥಾನದಲ್ಲಿ ಮುಂದುವರಿದಿದ್ದಾರೆ. ಭಾರತದ ದೀಪ್ತಿ ಶರ್ಮಾ ಐದನೇ ಸ್ಥಾನದಲ್ಲಿದ್ದಾರೆ.

## ❖ ಐಸಿಸಿ ತಂಡದಲ್ಲಿ ಭಾರತದ ಮೂವರು

**ಸಂದರ್ಭ: ಭಾರತ ತಂಡದ ಸ್ಮೃತಿ ಮಂದಾನ, ಜೆಮಿಮಾ ರಾಡ್ರಿಗಸ್ ಮತ್ತು ದೀಪ್ತಿ ಶರ್ಮಾ ಅವರು ಐಸಿಸಿ ಮಹಿಳಾ ಕ್ರಿಕೆಟ್ ವಿಶ್ವಕಪ್ ತಂಡದಲ್ಲಿ ಸ್ಥಾನ ಗಳಿಸಿದ್ದಾರೆ.**

- ಭಾರತದ ತಂಡದ ಜಯದಲ್ಲಿ ಈ ಮೂವರೂ ಉತ್ತಮ ಕಾಣಿಕೆ ನೀಡಿದ್ದಾರೆ. ಆದ್ದರಿಂದ ಅವರನ್ನು ತಂಡಕ್ಕೆ ಪರಿಗಣಿಸಲಾಗಿದೆ.
- ರನ್ನರ್ಸ್ ಅಪ್ ದಕ್ಷಿಣ ಆಫ್ರಿಕಾ ತಂಡದ ಲಾರಾ ವೊಲ್ವಾರ್ಟ್ ಅವರನ್ನು ಈ ತಂಡಕ್ಕೆ ನಾಯಕಿಯನ್ನಾಗಿ ನೇಮಕ ಮಾಡಲಾಗಿದೆ. ಪಾಕಿಸ್ತಾನದ ಸಿದ್ರಾ ನವಾಜ್ ಅವರನ್ನು ವಿಕೆಟ್‌ಕೀಪರ್ ಆಗಿ ಆಯ್ಕೆ ಮಾಡಲಾಗಿದೆ.
- ತಂಡ: ಲಾರಾ ವೊಲ್ವಾರ್ಟ್ (ನಾಯಕಿ/ದಕ್ಷಿಣ ಆಫ್ರಿಕಾ), ಸ್ಮೃತಿ ಮಂದಾನ (ಭಾರತ), ಜೆಮಿಮಾ ರಾಡ್ರಿಗಸ್ (ಭಾರತ), ಮರೈಝಾನ್ ಕಾಪ್ (ದಕ್ಷಿಣ ಆಫ್ರಿಕಾ), ಆ್ಯಷ್ಲೆ ಗಾರ್ಡನರ್ (ಆಸ್ಟ್ರೇಲಿಯಾ), ದೀಪ್ತಿ ಶರ್ಮಾ (ಭಾರತ), ಅನಾಬೆಲ್ ಸದರ್ಲೆಂಡ್ (ಆಸ್ಟ್ರೇಲಿಯಾ), ನದೀನ್ ಡಿ ಕ್ಲರ್ಕ್ (ದಕ್ಷಿಣ ಆಫ್ರಿಕಾ), ಸಿದ್ರಾ ನವಾಜ್ (ವಿಕೆಟ್‌ಕೀಪರ್/ ಪಾಕಿಸ್ತಾನ), ಅಲನಾ ಕಿಂಗ್ (ಆಸ್ಟ್ರೇಲಿಯಾ), ಸೋಫಿ ಎಕ್ಲೆಸ್ಟೋನ್ (ಇಂಗ್ಲೆಂಡ್), ನ್ಯಾಟ್ ಶಿವರ್ ಬ್ರಂಟ್ (ಇಂಗ್ಲೆಂಡ್/12ನೇ ಆಟಗಾರ್ತಿ).
- ಪ್ರಧಾನಿ ಭೇಟಿ ಇಂದು: ವಿಶ್ವಕಪ್ ವಿಜೇತ ಭಾರತ ತಂಡದ ಆಟಗಾರ್ತಿಯರು ನರೇಂದ್ರ ಮೋದಿ ಅವರನ್ನು ಭೇಟಿ ಯಾಗಲಿದ್ದಾರೆ. ತಂಡದ ಸದಸ್ಯೆಯರು ಮಂಗಳವಾರ ನವದೆಹಲಿಗೆ ಆಗಮಿಸಿದ್ದಾರೆ.
- ನವಿ ಮುಂಬೈನಲ್ಲಿ ನಡೆದಿದ್ದ ಫೈನಲ್‌ನಲ್ಲಿ ಹರ್ಮನ್‌ಪ್ರೀತ್ ಬಳಗವು ಜಯಿಸಿ ಪ್ರಶಸ್ತಿ ಗಳಿಸಿತ್ತು.

## ❖ 2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್ ಮೀರಾಬಾಯಿ ತೂಕ ವಿಭಾಗಕ್ಕೆ ಕೊಕ್

**ಸಂದರ್ಭ: ಭಾರತದ ವೇಟ್‌ಲಿಫ್ಟಿಂಗ್ ತಾರೆ ಮೀರಾಬಾಯಿ ಚಾನು ಅವರ ತೂಕ ವಿಭಾಗವನ್ನು 2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್ ನಲ್ಲಿ ತೆಗೆದುಹಾಕಲಾಗಿದೆ. ಅವರು ಮುಂದಿನ ಕ್ರೀಡೆಗಳಲ್ಲಿ 53 ಕೆ.ಜಿ. ತೂಕ ವಿಭಾಗದಲ್ಲಿ ಸ್ಪರ್ಧಿಸಬೇಕಾಗುತ್ತದೆ.**



**ಜೊಹ್ರಾನ್ ಮಮ್ದಾನಿ**

- 31 ವರ್ಷ ವಯಸ್ಸಿನ ಚಾನು 2020ರ ಟೋಕಿಯೊ ಕ್ರೀಡೆಗಳ 49 ಕೆ.ಜಿ. ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದು ಕೊಂಡಿದ್ದರು. ಆದರೆ 2028ರ ಕ್ರೀಡೆಗಳ ವೇಟ್‌ಲಿಫ್ಟಿಂಗ್ ಸ್ಪರ್ಧೆಗಳು 53 ಕೆ.ಜಿ. ತೂಕ ವಿಭಾಗದಿಂದ ಆರಂಭವಾಗಲಿವೆ. ವೇಟ್‌ಲಿಫ್ಟಿಂಗ್‌ನಲ್ಲಿ ಒಟ್ಟು ಸ್ಪರ್ಧೆಗಳ ಸಂಖ್ಯೆಯನ್ನು 12ಕ್ಕೆ ಹೆಚ್ಚಿಸಲು ಅಂತರ ರಾಷ್ಟ್ರೀಯ ಒಲಿಂಪಿಕ್ ಸಮಿತಿ ನಿರ್ಧರಿಸಿದೆ.
- 53 ಕೆ.ಜಿ. ತೂಕ ವಿಭಾಗದಲ್ಲಿ ಸ್ಪರ್ಧಿ ಸುವುದರಿಂದ ಚಾನು ಅವರಿಗೆ ಅನು ಕೂಲವಾಗಲಿದೆ. ಆದರೆ ಮಣಿಪುರದ ಸ್ಪರ್ಧಿಯು ಮುಂದಿನ ವರ್ಷದ ಏಷ್ಯನ್ ಗೇಮ್ಸ್‌ವರೆಗೆ ಈ ಹಿಂದಿನಂತೆ 49 ಕೆ.ಜಿ. ವಿಭಾಗದಲ್ಲೇ ಸ್ಪರ್ಧಿಸಲಿದ್ದಾರೆ ಎಂದು ರಾಷ್ಟ್ರೀಯ ಮುಖ್ಯ ಕೋಚ್ ವಿಜಯ್ ಶರ್ಮಾ ತಿಳಿಸಿದ್ದಾರೆ.
- ಪುರುಷರ ವಿಭಾಗ ಮತ್ತು ಮಹಿಳೆಯರ ವಿಭಾಗಗಳಲ್ಲಿ ತಲಾ ಆರು ತೂಕ ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯಲಿವೆ. ಈ ವರ್ಷ ಎರಡನೇ ಬಾರಿ ಅಂತರಾಷ್ಟ್ರೀಯ ವೇಟ್‌ಲಿಫ್ಟಿಂಗ್ ಫೆಡರೇಷನ್ ತೂಕ ವಿಭಾಗಗಳಲ್ಲಿ ಬದಲಾವಣೆ ತಂದಿದೆ. ಈ ಹಿಂದಿನ ಪಟ್ಟಿಯ ಪ್ರಕಾರ ಅವರು 48 ಕೆ.ಜಿ. ವಿಭಾಗದಲ್ಲಿ (49 ಕೆ.ಜಿ. ತೆಗೆದುಹಾಕಿದ ಕಾರಣ) ಕಣಕ್ಕಿಳಿಯಲು ಯೋಚಿಸಿದ್ದರು.
- 48 ಕೆ.ಜಿ. ವಿಭಾಗದಲ್ಲಿ ಸ್ಪರ್ಧಿಸಲು ಆಗುತ್ತಿರುವ ದೈಹಿಕ ಸವಾಲುಗಳ ಬಗ್ಗೆ ಚಾನು ಹಲವು ಬಾರಿ ಮಾತನಾಡಿದ್ದರು. 'ಏಷ್ಯನ್ ಗೇಮ್ಸ್ ನಂತರ 53 ಕೆ.ಜಿ. ತೂಕ ವಿಭಾಗದಲ್ಲಿ ಸ್ಪರ್ಧಿಸಲು ಬೇಕಾದ ಪ್ರಕ್ರಿಯೆಗಳನ್ನು ಆರಂಭಿಸುತ್ತೇವೆ' ಎಂದು ಶರ್ಮಾ ಹೇಳಿದ್ದಾರೆ.

## ❖ ಭಾರತ ಸಂಜಾತ ನ್ಯೂಯಾರ್ಕ್ ಮೇಯರ್

**ಸಂದರ್ಭ: ನ್ಯೂಯಾರ್ಕ್ ನಗರದ ಮೇಯರ್ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ, ಭಾರತ ಸಂಜಾತ ಜೊಹ್ರಾನ್ ಮಮ್ದಾನಿ (34) ಐತಿಹಾಸಿಕ ಗೆಲುವು ದಾಖಲಿಸಿದ್ದಾರೆ.**

- ಅಮೆರಿಕದ ಅತಿ ದೊಡ್ಡ ನಗರವಾದ **ನ್ಯೂಯಾರ್ಕ್‌ನ 'ಪ್ರಥಮ ಪ್ರಜೆ' ಯಾಗಿ ಆಯ್ಕೆಯಾದ ಮೊದಲ ಮುಸ್ಲಿಂ ಹಾಗೂ ದಕ್ಷಿಣ ಏಷ್ಯಾದ ಮೊದಲ ವ್ಯಕ್ತಿ** ಎಂಬ ಹೆಗ್ಗಳಿಕೆಗೂ ಅವರು ಪಾತ್ರರಾಗಿದ್ದಾರೆ.
- ಜೊಹ್ರಾನ್ ಅವರು **ಭಾರತದ ಸಿನಿಮಾ ನಿರ್ದೇಶಕಿ ಮತ್ತು ನಿರ್ಮಾಪಕಿ ಮೀರಾ ನಾಯರ್ ಮತ್ತು ಪ್ರೊ. ಮಹಮದ್ ಮಮ್ದಾನಿ ಅವರ ಪುತ್ರ.**
- **ಮಮ್ದಾನಿ ಜನಿಸಿದ್ದು ಉಗಾಂಡಾದ ಕಂಪಾಲದಲ್ಲಿ. ಅವರಿಗೆ 5 ವರ್ಷವಿದ್ದಾಗ ದಕ್ಷಿಣ ಆಫ್ರಿಕಾದ ಕೇಪ್ ಟೌನ್‌ಗೆ, ನಂತರ 7 ವರ್ಷ ಇದ್ದಾಗ ನ್ಯೂಯಾರ್ಕ್‌ಗೆ ವಲಸೆ ಬಂದು ಅವರ ಕುಟುಂಬ ನೆಲೆಗೊಂಡಿತ್ತು. ಮಮ್ದಾನಿ ಅವರಿಗೆ 2018ರಲ್ಲಿ ಅಮೆರಿಕದ ಪೌರತ್ವ ಲಭಿಸಿತ್ತು.ಅಮೆರಿಕನ್ ಅನಿಮೇಟರ್ ರಮಾ ಸವಾಫ್ ದುವಾಜಿ ಅವರ ಪತ್ನಿ.**
- ಯಾರ್ಕ್‌ನ ಮಾಜಿ ಗವರ್ನರ್, ಪ್ರಭಾವಿ ರಾಜಕೀಯ ಮುಖಂಡ ಆ್ಯಂಡ್ರ್ಯೂ ಕೌಮೊ ಮತ್ತು ರಿಪಬ್ಲಿಕನ್ ಅಭ್ಯರ್ಥಿ ಕರ್ಟಿಸ್ ಸ್ಲಿವಾ ಅವರನ್ನು ಮಮ್ದಾನಿ ಸೋಲಿಸಿದ್ದಾರೆ.
- ಮಮ್ದಾನಿ ಅವರು ಜನವರಿ 1ರಂದು ಅಮೆರಿಕದ ಅತಿ ದೊಡ್ಡ ನಗರವಾದ ನ್ಯೂಯಾರ್ಕ್‌ನ ಮೇಯರ್ ಪಟ್ಟಕ್ಕೇರು ವಾಗ, ಈ ಸ್ಥಾನ ಅಲಂಕರಿಸುತ್ತಿರುವ ಮೊದಲ ಮುಸ್ಲಿಂ, ಮೊದಲ ಭಾರತೀಯ, ಆಫ್ರಿಕಾದಲ್ಲಿ ಜನಿಸಿದ ಮೊದಲ ವ್ಯಕ್ತಿ ಮತ್ತು ಕಳೆದೊಂದು ಶತಮಾನದಲ್ಲಿ ಮೇಯರ್ ಹುದ್ದೆಗೇರಿದ ಕಿರಿಯ ವ್ಯಕ್ತಿ ಎಂಬ ಹೆಗ್ಗಳಿಕೆಗಳಿಗೂ ಪಾತ್ರರಾಗಲಿದ್ದಾರೆ.

- ಮಮ್ದಾನಿ ಗೆಲುವಿನೊಂದಿಗೆ ನ್ಯೂಯಾರ್ಕ್ ನಗರ ಮತ್ತು ಅಮೆರಿಕವು ಹೊಸ ರಾಜಕೀಯ ಮತ್ತು ಸೈದ್ಧಾಂತಿಕ ಯುಗಕ್ಕೆ ಮುನ್ನುಡಿ ಬರೆದಿದೆ. ಬಂಡವಾಳಶಾಹಿಯ ವಿರುದ್ಧ ಪ್ರಜಾಪ್ರಭುತ್ವವಾದಿ, ಸಮಾಜವಾದಿಯ ಐತಿಹಾಸಿಕ ಗೆಲುವು, ದೇಶದ ರಾಜಕೀಯ ಸ್ಥಿತ್ಯಂತರಕ್ಕೂ ಕಾರಣವಾಗಲಿವೆ ಎಂಬ ವಿಶ್ಲೇಷಣೆಗಳು ನಡೆಯುತ್ತಿವೆ.



ನ್ಯೂಯಾರ್ಕ್‌ನ ನೂತನ ಮೇಯರ್ ಆಗಿ ಆಯ್ಕೆಯಾಗಿರುವ ಜೊಹ್ರಾನ್ ಮಮ್ದಾನಿ ಅವರು, ತಮ್ಮ ತಂದೆ ಮುಹಮ್ಮದ್ ಮಮ್ದಾನಿ, ಪತ್ನಿ ರಮಾ ದುವಾಜಿ ಮತ್ತು ತಾಯಿ ಮೀರಾ ನಾಯರ್ ಅವರೊಂದಿಗೆ ಮಂಗಳವಾರ ಸಂಭ್ರಮಿಸಿದರು —ಎಪಿ ಚಿತ್ರ

- ಮಮ್ದಾನಿ ಅವರು ಬ್ರಾಂಕ್ಸ್ ಹೈಸ್ಕೂಲ್ ಆಫ್ ಸೈನ್ಸ್ ನಲ್ಲಿ ಪ್ರೌಢ ಶಿಕ್ಷಣ ಹಾಗೂ ಬೌಡೊಯಿನ್ ಕಾಲೇಜಿನಿಂದ ಪದವಿ ಪಡೆದಿದ್ದಾರೆ. ಪ್ರೌಢಶಾಲಾ ಹಂತದ ಕ್ರಿಕೆಟ್ ತಂಡದಲ್ಲೂ ಅವರು ಪ್ರಮುಖ ಆಟಗಾರರಾಗಿದ್ದರು.
- ವಸತಿ ಸಲಹೆಗಾರ ಅಧಿಕಾರಿ ಯಾಗಿಯೂ ಕಾರ್ಯನಿರ್ವಹಿಸಿದ್ದ ಅವರು, ನ್ಯೂಯಾರ್ಕ್‌ನಲ್ಲಿ ಕಡಿಮೆ ಆದಾಯ ಹೊಂದಿರುವ ವಲಸಿಗರನ್ನು ಮನೆಗಳಿಂದ ಹೊರಹಾಕುವುದನ್ನು ತಡೆಗಟ್ಟಲು ಅಪಾರವಾಗಿ ಶ್ರಮಿಸಿದ್ದರು. ಈ ಕಾರ್ಯಕ್ಕಾಗಿ ವಲಸಿಗರ, ಕಾರ್ಮಿಕರ ವಿಶ್ವಾಸ ಗಳಿಸಿದ್ದ ಅವರು, 2020ರಲ್ಲಿ ಮೊದಲ ಬಾರಿ ನ್ಯೂಯಾರ್ಕ್ ಅಸೆಂಬ್ಲಿಗೆ ಆಯ್ಕೆಯಾಗಿದ್ದರು.
- ನ್ಯೂಯಾರ್ಕ್ ಮೇಯರ್ ಚುನಾವಣೆಯ ಪ್ರಾಥಮಿಕ ಹಂತದಿಂದಲೇ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಮಮ್ದಾನಿ ಅವರನ್ನು ವಿರೋಧಿಸಿಕೊಂಡು ಬಂದಿದ್ದರು.

***'ವೆಚ್ಚ ಕಡಿಮೆಗೊಳಿಸಿ, ಜೀವನ ಸುಗಮಗೊಳಿಸಿ'***

- ಬೆಲೆ ಏರಿಕೆ, ಹಣದುಬ್ಬರ ಹೆಚ್ಚಳ, ಉದ್ಯೋಗ ಕಡಿತ ಸೇರಿದಂತೆ ರಾಜಕೀಯ ಮತ್ತು ಆರ್ಥಿಕ ಅಸ್ಥಿರತೆ ಎದುರಿಸುತ್ತಿರುವ ಅಮೆರಿಕನ್ನರಿಗೆ, ವಿಶೇಷವಾಗಿ ನ್ಯೂಯಾರ್ಕ್‌ನ ಜನರಿಗೆ, 'ಜೀವನ ನಿರ್ವಹಣೆ ವೆಚ್ಚವನ್ನು ಕಡಿಮೆ ಮಾಡಲೆಂದೇ ನ್ಯೂಯಾರ್ಕ್‌ನ ಮೇಯರ್ ಸ್ಥಾನಕ್ಕೆ ಸ್ಪರ್ಧಿಸುತ್ತಿದ್ದೇನೆ' ಎಂಬ ಮಮ್ದಾನಿ ಅವರ ಭರವಸೆಯ ನುಡಿಗಳು ವಿಶ್ವಾಸ ಮೂಡಿಸಿದ್ದವು. ನಗರ ಸಾರಿಗೆ ಬಸ್‌ಗಳಲ್ಲಿ ಉಚಿತ ಪ್ರಯಾಣ, ಮಕ್ಕಳಿಗಾಗಿ ಸಾರ್ವಜನಿಕ ಆಸ್ಪತ್ರೆ, ಕಡಿಮೆ ವೆಚ್ಚದ ಮನೆಗಳು ಸೇರಿದಂತೆ 'ವೆಚ್ಚ ಕಡಿಮೆಗೊಳಿಸಿ, ಜೀವನ ಸುಗಮಗೊಳಿಸಿ' ಎನ್ನುವುದು ಅವರ ಚುನಾವಣಾ ಘೋಷಣೆಯಾಗಿತ್ತು.
- ಬಂಡವಾಳಶಾಹಿ ವ್ಯವಸ್ಥೆಗೆ ವಿರುದ್ಧವಾಗಿದ್ದ ಈ ಯುವ ರಾಜಕಾರಣಿಯು ನ್ಯೂಯಾರ್ಕ್‌ನ ಯುವಸಮೂಹ ಹಾಗೂ ಶ್ರಮಿಕ ವರ್ಗದ ಅಪಾರ ಬೆಂಬಲವನ್ನು ಗಳಿಸಿರುವುದು ಚುನಾವಣಾ ಫಲಿತಾಂಶದಲ್ಲಿ ಸ್ಪಷ್ಟವಾಗಿದೆ.

***ಭಾರತದ ನಂಟು***

- ತಮ್ಮ ಮೊದಲ ವಿಜಯೋತ್ಸವ ಭಾಷಣದಲ್ಲಿ ಮಮ್ದಾನಿ, ಭಾರತ ಅಥವಾ ಭಾರತೀಯರನ್ನು ನೇರವಾಗಿ ಉಲ್ಲೇಖಿಸದಿದ್ದರೂ, ನೆಹರೂ ಮತ್ತು 'ಧೂಮ್ ಮಚಾಲೆ' ಹಾಡಿನ ಮೂಲಕ ತಮ್ಮ ಭಾರತೀಯ ಬೇರನ್ನು ಸ್ಮರಿಸಲು ಮರೆಯಲಿಲ್ಲ. ವಿಜಯೋತ್ಸವ ಭಾಷಣದ ಬೆನ್ನಲ್ಲೇ ವೇದಿಕೆಯಲ್ಲಿ ಬಾಲಿವುಡ್‌ನ ಜನಪ್ರಿಯ 'ಧೂಮ್ ಮಚಾಲೆ' ಹಾಡು ಕೇಳಿಬಂತು. ಮಮ್ದಾನಿ ಅವರ ವಾಕ್ಚಾತುರ್ಯ ಮತ್ತು ಸಾಮಾಜಿಕ ಮಾಧ್ಯಮದ ಮೇಲಿನ ಹಿಡಿತ ಕೂಡ ಅವರ ಗೆಲುವಿನಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ ಎನ್ನಲಾಗುತ್ತಿದೆ.

***ದಾಖಲೆ ಮತ ಚಲಾವಣೆ***

- ನ್ಯೂಯಾರ್ಕ್ ಮೇಯರ್ ಚುನಾವಣೆಯಲ್ಲಿ 1969ರ ಬಳಿಕ ಇದೇ ಮೊದಲ ಬಾರಿಗೆ 20 ಲಕ್ಷ ಮತಗಳು ಚಲಾವಣೆಯಾಗಿವೆ ಎಂದು ನ್ಯೂಯಾರ್ಕ್‌ನ ಚುನಾವಣಾ ಮಂಡಳಿ ಹೇಳಿದೆ.

Dr. Rajkumar IAS/KAS Academy

## ❖ ಕೃತಕ ಬುದ್ಧಿಮತ್ತೆ ವಿಷಯ ಪರಿಚಯ

**ಸಂದರ್ಭ: ಸ್ಯಾಮ್‌ಸಂಗ್ ಹಾಗೂ ಹಲವು ವಿ.ವಿ.ಗಳ ಜತೆ ಬೆಂಗಳೂರು ಕೃಷಿ ವಿ.ವಿ ಒಪ್ಪಂದ: ಬೆಂಗಳೂರು ಕೃಷಿ ವಿಶ್ವ ವಿದ್ಯಾಲಯದ ಬೋಧನೆ, ಸಂಶೋಧನೆ ಹಾಗೂ ವಿಸ್ತರಣಾ ಚಟುವಟಿಕೆಗಳಲ್ಲಿ ಕೃತಕ ಬುದ್ಧಿಮತ್ತೆ (ಎಐ) ಹಾಗೂ ಮಷಿನ್ ಲರ್ನಿಂಗ್ (ಎಂಎಲ್) ತಂತ್ರಜ್ಞಾನ ಅಳವಡಿಸಿಕೊಳ್ಳುವ ಉದ್ದೇಶದಿಂದ 2025–26ನೇ ಶೈಕ್ಷಣಿಕ ಸಾಲಿನಿಂದ ಪದವಿ ಹಾಗೂ ಸ್ನಾತಕೋತ್ತರ ಪದವಿ (ಬಿ.ಎಸ್ಸಿ ಕೃಷಿ ಹಾಗೂ ಎಂ.ಎಸ್ಸಿ ಕೃಷಿ) ವಿದ್ಯಾರ್ಥಿಗಳಿಗೆ ಎಐ ಹಾಗೂ ಎಂಎಲ್ ವಿಷಯವನ್ನು ಪರಿಚಯಿಸಲಾಗುತ್ತಿದೆ.**

- ಬೆಂಗಳೂರು ಕೃಷಿ ವಿಶ್ವವಿದ್ಯಾಲ ಯವು ಸ್ಯಾಮ್‌ಸಂಗ್ ಕಂಪನಿಯೊಂದಿಗೆ ಎಐ ಮತ್ತು ಎಂಎಲ್ ವಿಷಯದ ತರಬೇತಿ ನೀಡುವ ಕುರಿತು ಒಪ್ಪಂದ ಮಾಡಿಕೊಂಡಿದೆ. ಸ್ಯಾಮ್‌ಸಂಗ್‌ನ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ (ಸಿಎಸ್‌ಆರ್) ಮೊದಲ ಹಂತದಲ್ಲಿ ಸ್ನಾತಕೋತ್ತರ ಪದವಿ ಅಧ್ಯಯನ ಮಾಡುತ್ತಿರುವ 300 ವಿದ್ಯಾರ್ಥಿಗಳಿಗೆ ಎಐ–ಎಂಎಲ್ ವಿಷಯದ ಬಗ್ಗೆ 80 ಗಂಟೆಗಳ ಕಾಲ ಆನ್‌ಲೈನ್ ಹಾಗೂ ಆಫ್‌ಲೈನ್ ತರಬೇತಿ ಕಾರ್ಯಕ್ರಮ ನಡೆಯುತ್ತಿದೆ.
- ‘ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ದ ಪ್ರಥಮ ವರ್ಷದ ಪದವಿಯ ಎರಡನೇ ಸೆಮಿಸ್ಟರ್‌ನಲ್ಲಿ ಎಐ-ಎಂಎಲ್ ವಿಷಯ ಇರಲಿದ್ದು, ಇದಕ್ಕೆ ಅಂಕಗಳು ಇರುವುದಿಲ್ಲ. ಆದರೆ ಕಡ್ಡಾಯವಾಗಿ ಉತ್ತೀರ್ಣ ಆಗಬೇಕು. ಎಂ.ಎಸ್ಸಿ ಪ್ರಥಮ ವರ್ಷದ ಎರಡನೇ ಸೆಮಿಸ್ಟರ್‌ಗೆ ಎಐ-ಎಲ್ ವಿಷಯ ಇರಲಿದ್ದು, ವಿದ್ಯಾರ್ಥಿಗಳಿಗೆ ಆರು ತಿಂಗಳ ತರಬೇತಿ ನೀಡಲಾಗುತ್ತದೆ.
- ‘ವಿಶ್ವವಿದ್ಯಾಲಯದಲ್ಲಿ ಕೃತಕ ಬುದ್ಧಿಮತ್ತೆ (ಎಐ) ಹಾಗೂ ಮಷಿನ್ ಲರ್ನಿಂಗ್ (ಎಂಎಲ್) ಎಂಬ ನೂತನ ವಿಭಾಗವನ್ನು ಪ್ರಾರಂಭಿಸಲಾಗಿದೆ. ಇದು ಬಹುಶಿಸ್ತೀಯ ಅಧ್ಯಯನ ವಿಭಾಗವಾಗಿದ್ದು, ಕಂಪ್ಯೂಟರ್ ತಂತ್ರಜ್ಞಾನದ ಬಗ್ಗೆ ಹೆಚ್ಚು ಮಾಹಿತಿ ಇರುವವರನ್ನು ಇದರ ಮುಖ್ಯಸ್ಥರನ್ನಾಗಿ ಮಾಡಲಾಗುತ್ತದೆ’ ಎಂದು ಹೇಳಿದರು.
- ‘ಎಐ-ಎಂಎಲ್ ನೂತನ ವಿಭಾಗದಲ್ಲಿ ಕೆಲಸ ಮಾಡುವ ಸಿಬ್ಬಂದಿಗೆ ನಗರದ ಹಲವು ಎಂಜಿನಿಯರಿಂಗ್ ಕಾಲೇಜುಗಳ ನುರಿತ ತಜ್ಞರಿಂದ ತರಬೇತಿ ನೀಡಲಾಗುತ್ತದೆ. ಇದರ ಭಾಗವಾಗಿ ಈಗಾಗಲೇ ಗೀತಂ ವಿಶ್ವ ವಿದ್ಯಾಲಯದೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ರೇವಾ ವಿಶ್ವವಿದ್ಯಾಲಯ, ಮಣಿಪಾಲ್ ಅಕಾಡೆಮಿಯೊಂದಿಗೆ ಒಪ್ಪಂದ ಮಾಡಿಕೊಳ್ಳುವ ಕುರಿತು ಮಾತುಕತೆ ನಡೆಯುತ್ತಿದೆ. ಎಐ-ಎಂಎಲ್‌ಗೆ ಸಂಬಂಧಿಸಿದ ಕಂಪ್ಯೂಟರ್ ಆಧಾರಿತ ಪಠ್ಯ ವಿಷಯಗಳ ಬಗ್ಗೆ ಎಂಜಿನಿಯರಿಂಗ್ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳ ಅಧ್ಯಾಪಕರು ನಮ್ಮ ವಿದ್ಯಾರ್ಥಿಗಳಿಗೆ ಪಾಠ ಮಾಡಲಿದ್ದಾರೆ’ ಎಂದರು.
- ‘ಸ್ಯಾಮ್‌ಸಂಗ್ ಕಂಪನಿಯೊಂದಿಗೆ ಮತ್ತೊಂದು ಒಪ್ಪಂದ ಮಾಡಿಕೊಳ್ಳ ಲಾಗುತ್ತಿದ್ದು, ನೂತನ ಎಐ-ಎಂಎಲ್‌ನ ವಿಭಾಗದ ವಿಷಯಗಳಿಗೆ ಸಂಬಂಧಿಸಿದಂತೆ ಕಂಪನಿಯ ಸಿಬ್ಬಂದಿಯು ವಿದ್ಯಾರ್ಥಿಗಳಿಗೆ ತರಬೇತಿ ನೀಡಲಿದ್ದಾರೆ. ಪದವಿ ಹಂತದಲ್ಲಿಯೇ ವಿದ್ಯಾರ್ಥಿಗಳಿಗೆ ಇಂತಹ ಈ ವಿಷಯಗಳನ್ನು ಪರಿಚಯಿಸುತ್ತಿದ್ದೇವೆ. ವಿದ್ಯಾರ್ಥಿಗಳು ಉತ್ತೀರ್ಣರಾದ ನಂತರ ಕೃಷಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗ ಪಡೆದುಕೊಳ್ಳಲು ಸಹಾಯಕವಾಗಲಿದೆ’ ಎಂದು ತಿಳಿಸಿದರು.

### ‘ಎಐ-ಎಂಎಲ್ ಪದವಿ ಪ್ರಾರಂಭಿಸುವ ಚಿಂತನೆ’

- ‘ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾಲಯಗಳ ಪೈಕಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಎಐ-ಎಂಎಲ್ ಕೋರ್ಸ್ ಅನ್ನು ಮೊದಲ ಬಾರಿಗೆ ಪರಿಚಯಿಸಲಾಗುತ್ತಿದೆ. ನಾಲ್ಕು ವರ್ಷಗಳ ನಂತರ ಬಿ.ಎಸ್ಸಿ ಅಗ್ರಿ ಇನ್ ಎಐ-ಎಂಎಲ್, ಬಿ.ಎಸ್ಸಿ ಹಾರ್ಟಿಕಲ್ಚರ್ ಇನ್ ಎಐ-ಎಂಲ್ ವಿಷಯಗಳಲ್ಲಿ ಪದವಿಯನ್ನೂ ಪ್ರಾರಂಭಿಸುವ ಚಿಂತನೆ ಇದೆ’ ಎಂದು ಎಸ್.ವಿ. ಸುರೇಶ ತಿಳಿಸಿದರು.
- ‘ಈಗ ಬಹುತೇಕ ಎಲ್ಲ ಕ್ಷೇತ್ರಗಳಲ್ಲೂ ಎಐ-ಎಂಎಲ್ ಆಕ್ರಮಿಸಿಕೊಂಡಿದೆ. ಆದ್ದರಿಂದ ಕೃಷಿ ಕ್ಷೇತ್ರದಲ್ಲಿ ಬದಲಾವಣೆ ತರಲು ವಿದ್ಯಾರ್ಥಿಗಳನ್ನು ಈ ನೂತನ ಕೋರ್ಸ್‌ಗೆ ಅಣಿಗೊಳಿಸುತ್ತಿದ್ದೇವೆ’ ಎಂದರು.

## ❖ ಅರಣ್ಯ: ಕಾಮಗಾರಿಗಳಿಗೆ ಷರತ್ತುಬದ್ಧ ಒಪ್ಪಿಗೆ

**ಸಂದರ್ಭ: ವನ್ಯಜೀವಿ ಮಂಡಳಿ ಸ್ಥಾಯಿ ಸಮಿತಿ ಸಭೆ । ಚಿತ್ತಾಪುರದಲ್ಲಿ ಚಿರತೆ ಸಂರಕ್ಷಣಾ ಮೀಸಲು ಪ್ರಸ್ತಾವ: ಶರಾವತಿ ಸಿಂಗಳೀಕ ವನ್ಯಜೀವಿಧಾಮ, ರಂಗನತಿಟ್ಟು ಪಕ್ಷಿಧಾಮ ಪರಿಸರ ಸೂಕ್ಷ್ಮ ವಲಯ ಹಾಗೂ ಸೋಮೇಶ್ವರ ವನ್ಯಜೀವಿಧಾಮ ದಲ್ಲಿ ರಸ್ತೆ ನಿರ್ಮಾಣ ಮತ್ತು ರಸ್ತೆ ಅಗಲೀಕರಣದ ಯೋಜನೆಗಳಿಗೆ ನಡೆದ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿ ಸಭೆ ಷರತ್ತುಬದ್ಧ ಒಪ್ಪಿಗೆ ನೀಡಿದೆ.**

- ವನ್ಯಜೀವಿಗಳಿಗೆ ಯಾವುದೇ ರೀತಿಯಲ್ಲಿ ತೊಂದರೆ ಆಗದಂತೆ ಯೋಜನೆಯನ್ನು ರೂಪಿಸಬೇಕು ಎಂಬ ಕರಾರು ವಿಧಿಸಿ ಸಭೆ ಅನುಮೋದನೆ ನೀಡಿತು. ಚಿತ್ತಾಪುರದಲ್ಲಿ ಚಿರತೆ ಸಂರಕ್ಷಣಾ ಮೀಸಲು ಸ್ಥಾಪಿಸುವ ಕುರಿತು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿ ವರದಿ ಸಲ್ಲಿಸುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚಿಸಿದರು.
- ಸಿಂಗಳೀಕ ವನ್ಯಜೀವಿಧಾಮದ ವ್ಯಾಪ್ತಿಯ ಉತ್ತರ ಕನ್ನಡ ಜಿಲ್ಲೆ ಹೊನ್ನಾವರ ತಾಲ್ಲೂಕಿನ ಹಿರೇಬೈಲ್ ಗ್ರಾಮದ ಅಂದಬಳ್ಳಿ ಮತ್ತು ಇತರ 5 ಗ್ರಾಮಗಳ 325 ಮನೆಗಳಿಗೆ, ಹೊನ್ನಾವರ ಪಟ್ಟಣ ಮತ್ತು ಮಾರ್ಗದಲ್ಲಿರುವ 9 ಗ್ರಾಮ ಪಂಚಾಯಿತಿಗಳಿಗೆ ಕುಡಿಯುವ ನೀರಿನ ಪೈಪ್‌ಲೈನ್ ಯೋಜನೆಗೆ 0.976 ಹೆಕ್ಟೇರ್ ಅರಣ್ಯ ಪ್ರದೇಶವನ್ನು ನೀಡುವ ಯೋಜನೆಗೆ ಅನುಮೋದನೆ ಪಡೆಯಲು ರಾಷ್ಟ್ರೀಯ ವನ್ಯಜೀವಿ ಮಂಡಳಿಗೆ ಪ್ರಸ್ತಾವ ಕಳುಹಿಸಲು ಸಭೆ ತೀರ್ಮಾನಿಸಿದೆ.
- ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕಿನ ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 291 ಜನವಸತಿ ಪ್ರದೇಶಗಳಿಗೆ (ಯೋಜನೆ ಹಂತ-2 ರಲ್ಲಿ 193 ಜನವಸತಿ ಪ್ರದೇಶಗಳಿಗೆ) ಕುಡಿಯುವ ನೀರಿನ ಸಂಪರ್ಕ ನೀಡುವ ಪ್ರಸ್ತಾವದ ಬಗ್ಗೆ ಚರ್ಚಿಸಿದ ಮಂಡಳಿ, ಇದಕ್ಕಾಗಿ 4.4 ಹೆಕ್ಟೇರ್ ಅರಣ್ಯ ಭೂಮಿ ನೀಡುವ ಪ್ರಸ್ತಾವಕ್ಕೆ ಒಪ್ಪಿಗೆ ಪಡೆಯಲು ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಅನುಮೋದನೆಗೆ ಕಳುಹಿಸಲು ತೀರ್ಮಾನಿಸಲಾಗಿದೆ.
- ಅತ್ತಿವೇರಿ ಪಕ್ಷಿಧಾಮ, ಶರಾವತಿ ಸಿಂಗಳೀಕ ವನ್ಯಜೀವಿಧಾಮ ಹಾಗೂ ಸೋಮೇಶ್ವರ ವನ್ಯಜೀವಿಧಾಮದಲ್ಲಿ ಸಂವಹನ ಕಂಬಗಳನ್ನು ಅಳವಡಿಸುವ ಕುರಿತಾದ ಬಿಎಸ್‌ಎನ್‌ಎಲ್ ಪ್ರಸ್ತಾವವನ್ನು ಮುಂದೂಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ಸಂವಹನ ಕಂಬಗಳಿಂದ ಪರಿಸರಕ್ಕೆ, ಪಶುಪಕ್ಷಿ ಗಳಿಗೆ ಆಗುವ ತೊಂದರೆ ಕುರಿತು ವಿವರ ಮಂಡಿಸಲು ಸೂಚಿಸಲಾಯಿತು.
- ಪಶ್ಚಿಮಘಟ್ಟದಲ್ಲಿ ಕಾರ್ಯಗತವಾಗಿರುವ ರಸ್ತೆ ಮತ್ತಿತರ ಅಭಿವೃದ್ಧಿ ಯೋಜನೆಗಳಲ್ಲಿ ಷರತ್ತುಗಳ ಪಾಲನೆ ಆಗಿದೆಯೇ ಇಲ್ಲವೇ ಎಂಬ ಬಗ್ಗೆ ಪರಾಮರ್ಶೆ ನಡೆಸುವಂತೆ ಈಶ್ವರ ಖಂಡ್ರೆ ಸೂಚಿಸಿದರು.
- ಅರಣ್ಯ ಮತ್ತು ವನ್ಯಜೀವಿಧಾಮಗಳಲ್ಲಿ ಯಾವುದೇ ಯೋಜನೆಗೆ ಅನುಮತಿ ನೀಡುವಾಗ ವನ್ಯಜೀವಿಗಳಿಗೆ ತೊಂದರೆ ಆಗದಂತೆ ಅಪಾಯ ತಗ್ಗಿಸುವ ಪರಿಹಾರಗಳೊಂದಿಗೆ ಪ್ರಸ್ತಾವನೆ ಮಂಡಿಸುವುದನ್ನು ಕಡ್ಡಾಯಗೊಳಿಸುವಂತೆ ಅವರು ನಿರ್ದೇಶನ ನೀಡಿದರು.

### *'ರೇಡಿಯೊ ಕಾಲರ್ ಹಾಕಿ ಕಾಡಿಗೆ ಬಿಡಿ'*

- ಚಿಕ್ಕಮಗಳೂರು ಜಿಲ್ಲೆ ಶೃಂಗೇರಿ ಬಳಿಯ ಕೆರೆಕಟ್ಟೆ ಸಮೀಪ ಸೆರೆ ಹಿಡಿಯಲಾಗಿರುವ ಆನೆಗೆ ರೇಡಿಯೊ ಕಾಲರ್ ಅಳವಡಿಸಿ ಕಾಡಿಗೆ ಬಿಡುವುದು ಸೂಕ್ತ ಎಂದು ಸಚಿವ ಈಶ್ವರ ಖಂಡ್ರೆ ಸಭೆಯಲ್ಲಿ ಸೂಚಿಸಿದರು.

### *ಕುಂಬ್ಳೆ ಕರೆಯಲು ಸೂಚನೆ*

- ಅರಣ್ಯ ಮತ್ತು ವನ್ಯಜೀವಿ ರಾಯಭಾರಿ ಯಾಗಿ ನೇಮಕಗೊಂಡಿರುವ ಅನಿಲ್ ಕುಂಬ್ಳೆ ಅವರನ್ನು ಮುಂದಿನ ಸಭೆಗಳಿಗೆ ಆಹ್ವಾನಿಸುವಂತೆ ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಖಂಡ್ರೆ ಸೂಚನೆ ನೀಡಿದರು.

Dr. Rajkumar IAS/KAS Academy

## ❖ 2025ರ ಪ್ರಕಾಶಮಾನ ಚಂದಿರ ಗೋಚರ

**ಸಂದರ್ಭ: ಪ್ರಸಕ್ತ ವರ್ಷದ ಅತಿದೊಡ್ಡ ಹಾಗೂ ಅತ್ಯಂತ ಪ್ರಕಾಶಮಾನವಾದ ಚಂದ್ರ (ಸೂಪರ್ ಮೂನ್) ಬುಧವಾರ ಗೋಚರಿಸಿದೆ. 'ನವೆಂಬರ್ ಸೂಪರ್ ಮೂನ್' ಎಂದು ಕರೆಯಲಾಗುವ ಈ ಚಂದ್ರ, ಸಾಮಾನ್ಯ ಹುಣ್ಣಿಮೆಯ ಚಂದ್ರನಿಗಿಂತಲೂ ಭೂಮಿಗೆ ಬರೋಬ್ಬರಿ 17,000 ಮೈಲಿಗಳಷ್ಟು ಸಮೀಪದಲ್ಲಿದ್ದದ್ದು ವಿಶೇಷ.**

- 2025ನೇ ಸಾಲಿನಲ್ಲಿ ಕಾಣಿಸಿ ಕೊಳ್ಳುವ ಮೂರು ಸೂಪರ್ ಮೂನ್‌ಗಳ ಪೈಕಿ ಇದು ಎರಡನೆಯದ್ದಾಗಿದ್ದು, ಸಾಮಾನ್ಯ ಹುಣ್ಣಿಮೆ ಚಂದ್ರನಿಗಿಂತ ಈ ಸೂಪರ್ ಮೂನ್ ಶೇಕಡ 14ರಷ್ಟು ದೊಡ್ಡದಾಗಿ ಹಾಗೂ ಶೇ 30ರಷ್ಟು ಹೆಚ್ಚು ಪ್ರಕಾಶಮಾನವಾಗಿ ಕಾಣಿಸಿಕೊಂಡಿದೆ.
- **ಭೂಮಿಯಿಂದ 3,57,000 ಕಿ.ಮೀ.**ದೂರದಲ್ಲಿ ಅಂದರೆ ಅತ್ಯಂತ ಸಮೀಪದಲ್ಲಿ ಚಂದ್ರ ಗೋಚರಿಸಿರುವ ಕಾರಣ, ಇದು ಅತ್ಯಂತ ದೊಡ್ಡದಾಗಿ ಹಾಗೂ ಪ್ರಕಾಶಮಾನವಾಗಿ ಕಾಣಿಸಿಕೊಂಡಿದೆ ಎಂದು ಎನ್‌ಡಿಟಿವಿ ವರದಿ ಮಾಡಿದೆ.
- ಸಂಜೆ 6.49ರ ಸುಮಾರಿಗೆ ದೇಶದ ವಿವಿಧ ಭಾಗಗಳಲ್ಲಿ ಜನರು ಸೂಪರ್ ಮೂನ್ ವೀಕ್ಷಿಸಲು ಸಾಧ್ಯವಾಗಿದ್ದು, ಹಲವರು 'ಅತ್ಯಂತ ಪ್ರಕಾಶಮಾನವಾದ ಸೂಪರ್ ಮೂನ್' ಎಂಬ ಶೀರ್ಷಿಕೆಗಳೊಂದಿಗೆ ಫೋಟೋಗಳನ್ನು ಜಾಲತಾಣಗಳಲ್ಲಿ ಹಂಚಿಕೊಂಡಿದ್ದಾರೆ.

## ❖ ದಶಕ ಕಳೆದರೂ ಸಿಗದ ನ್ಯಾಯಬೆಲೆ

# ದಶಕ ಕಳೆದರೂ ಸಿಗದ ನ್ಯಾಯಬೆಲೆ

**ಕಬ್ಬಿಗೆ ಉತ್ತಮ ದರ ನಿಗದಿಗೆ ಆಗ್ರಹಿಸಿ ರೈತರ ಪ್ರತಿಭಟನೆ ತೀವ್ರ; ಆಂದೋಲನ ರೂಪ ಪಡೆಯುತ್ತಿರುವ ಹೋರಾಟ**

• ಸಂತೋಷ ಈ. ಚಿನಗುಡಿ

ರಾಜ್ಯದ ಕಬ್ಬು ಬೆಳೆಗಾರರು, ಸಕ್ಕರೆ ಕಾರ್ಖಾನೆಗಳು ಹಾಗೂ ಸರ್ಕಾರದ ನಡುವಿನ ತ್ರಿಕೋನ ಸಂಘರ್ಷಕ್ಕೆ ದಶಕಗಳ ಇತಿಹಾಸವಿದೆ. ಬೆಳಗಾವಿಯಲ್ಲಿ ರೈತರು ಪ್ರಾಣ ಪಣಕ್ಕಿಟ್ಟು 'ನ್ಯಾಯ ಸಮ್ಮತ' ಬೆಲೆಗಾಗಿ ಹೋರಾಡುವ ದಿನಗಳು ಮತ್ತೆ ಮರುಕಳಿಸಿದಂತೆ ಕಾಣುತ್ತಿದೆ. ಇಲ್ಲಿ ವಾರದಿಂದ ನಡೆಯುತ್ತಿರುವ ಚಳವಳಿ ಇನ್ನಷ್ಟು ತೀವ್ರಗೊಳ್ಳುತ್ತಿದ್ದರೆ, ಕಬ್ಬು ಬೆಳೆಯುವ ಇತರ ಜಿಲ್ಲೆಗಳಲ್ಲೂ ಉತ್ತಮ ದರಕ್ಕಾಗಿ ಆಗ್ರಹಿಸಿ ರೈತರು ಹೋರಾಟ ನಡೆಸುತ್ತಿದ್ದಾರೆ.

2013–14ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಮೊದಲ ಚಳಿಗಾಲದ ಅಧಿವೇಶನ ನಡೆದಿತ್ತು. ಸಿದ್ದರಾಮಯ್ಯ ಆಗಲೂ ಮುಖ್ಯಮಂತ್ರಿ. ಕಬ್ಬು ದರ ಹೆಚ್ಚಿಸಲು ರೈತರು ಸೌಧದ ಮುಂದೆ ಬೃಹತ್ ಹೋರಾಟ ಆರಂಭಿಸಿದ್ದರು. ರಾಯಬಾಗ ತಾಲ್ಲೂಕಿನ ಕಂಕಣವಾಡಿ ಗ್ರಾಮದ ರೈತ ವಿಠ್ಠಲ ಭೀಮಪ್ಪ ಅರಭಾವಿ ಅವರು ಕೀಟನಾಶಕ ಕುಡಿದು ಸೌಧದ ಎದುರೇ ಪ್ರಾಣ ಬಿಟ್ಟರು. ಬಳಿಕ ಅನ್ನದಾತರು ಉಗ್ರಸ್ವರೂಪ ತಾಳಿದರು. ಆಕ್ರೋಶಕ್ಕೆ ಬೆಚ್ಚಿಬಿದ್ದ ಸರ್ಕಾರ ಪ್ರತಿ ಟನ್ ಕಬ್ಬಿಗೆ ₹165 ಪ್ರೋತ್ಸಾಹ ಧನ ಘೋಷಣೆ ಮಾಡಿತು. ಆಗ ಸಕ್ಕರೆ ಸಚಿವರಾಗಿದ್ದ ಪ್ರಕಾಶ ಹುಕ್ಕೇರಿ ತಕ್ಷಣಕ್ಕೆ ₹300 ಕೋಟಿ ನೆರವು ನಿಧಿ ಬಿಡುಗಡೆ ಮಾಡಿದ್ದರು.

ಕಾಲ ಉರುಳಿದೆ. ಆದರೆ, ರೈತರ ಬದುಕು ಅಲ್ಲೇ ನಿಂತಿದೆ. ಸಿದ್ದರಾಮಯ್ಯ ಮತ್ತೆ ಮುಖ್ಯಮಂತ್ರಿ ಆಗಿದ್ದಾರೆ. ಅದೇ ಕಬ್ಬಿಗಾಗಿ, ಅದೇ ರೈತರು ಆಂದೋಲನ ಮಾಡುತ್ತಿದ್ದಾರೆ. ದಶಕ ಕಳೆದರೂ ಕಬ್ಬು ಬೆಳೆಗಾರರ ಬದುಕು 'ಸಿಹಿ' ಆಗಲೇ ಇಲ್ಲ. ಆಗ ಒಂದು ಕಾರ್ಖಾನೆ ಹೊಂದಿದ್ದ ಮಾಲೀಕರು ಈಗ ಎರಡು–ಮೂರು ಕಾರ್ಖಾನೆ ಕಟ್ಟಿಕೊಂಡಿದ್ದಾರೆ.

ಅಂದಿನ ದಿನಗಳು ಈಗ ಮರುಕಳಿಸಿವೆ. ಅದೇ ರಾಯಬಾಗ ತಾಲ್ಲೂಕಿನ ಆಲಕನೂರ ಗ್ರಾಮದ ಲಕ್ಷ್ಮಪ್ಪ ಗುಣದಾಳ (30) ಎಂಬ ರೈತ ಸೋಮವಾರ (ನ.3) ಹೋರಾಟದ ಸ್ಥಳದಲ್ಲೇ ವಿಷ ಕುಡಿದಿದ್ದಾರೆ. ಸಾವು–ಬದುಕಿನ ಮಧ್ಯೆ ಹೋರಾಡುತ್ತಿರುವ ಅವರನ್ನು ಬೆಳಗಾವಿಯ ಕೆಎಲ್‌ಇ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಂದಿನಿಂದ ರೈತರ ಹೋರಾಟ ತೀವ್ರಸ್ವರೂಪ ಪಡೆದಿದೆ. ಬುಧವಾರ ಬೆಳಗಾವಿ, ಹುಕ್ಕೇರಿ, ರಾಯಬಾಗ ಮುಂತಾದ ಕಡೆಗಳಲ್ಲಿ ಜನ ಸ್ವಯಂ ಪ್ರೇರಣೆಯಿಂದ ಬಂದ್ ಆಚರಿಸಿದರು. ಬೆಳಿಗ್ಗೆ ಬಸ್ ಸಂಚಾರ ವಿರಳವಾಗಿತ್ತು. ಶಾಲೆ, ಕಾಲೇಜು, ಚಿತ್ರ ಮಂದಿರಗಳಲ್ಲಿ ಜನ ವಿರಳವಾಗಿದ್ದರು. ರಾಯಬಾಗ ಪಟ್ಟಣವನ್ನು ಸಂಪೂರ್ಣ ಬಂದ್ ಮಾಡಲಾಯಿತು. ಔಷಧ ಮಳಿಗೆ, ಸರ್ಕಾರಿ ಕಚೇರಿಗಳನ್ನು ಬಿಟ್ಟರೆ ಉಳಿದೆಲ್ಲವನ್ನೂ ಜನ ತಾವಾಗಿಯೇ ಬಂದ್ ಮಾಡಿದರು.

ಮೂಡಲಗಿ ತಾಲ್ಲೂಕಿನ ಗುರ್ಲಾಪುರದಲ್ಲಿ ರಾಷ್ಟ್ರ ಹೆದ್ದಾರಿ ಬಂದ್ ಮಾಡಿರುವ ರೈತರ ಹೋರಾಟ ಏಳು ದಿನ ಪೂರೈಸಿದೆ. ಬುಧವಾರದಿಂದ ಅರೆ ಬೆತ್ತಲೆ ಧರಣಿ ಶುರು ಮಾಡಿದ್ದಾರೆ. ಜಿಲ್ಲೆಯ ಎಲ್ಲ ರಾಷ್ಟ್ರ ಹೆದ್ದಾರಿಗಳಲ್ಲೂ ಜನರು ಎರಡು ತಾಸು ರಸ್ತೆತಡೆ ನಡೆಸಿದ್ದಾರೆ.

**ರೈತರಿಗೆ ಮೋಸ ಹೇಗೆ?:** ಕೇಂದ್ರ ಸರ್ಕಾರ ವರ್ಷದಿಂದ ವರ್ಷಕ್ಕೆ ನ್ಯಾಯಸಮ್ಮತ ಹಾಗೂ ಲಾಭದಾಯಕ (ಎಫ್‌ಆರ್‌ಪಿ) ಬೆಲೆ ಹೆಚ್ಚಿಸುತ್ತದೆ. ಪರೋಕ್ಷವಾಗಿ ಸಕ್ಕರೆ ಕಾರ್ಖಾನೆಗಳು ಇಳುವರಿ ಪ್ರಮಾಣದ ಮಿತಿಯನ್ನೂ ಏರಿಸುವ ಮೂಲಕ ರೈತರಿಗೆ ಲಾಭವೇ ಸಿಗದಂತೆ ಮಾಡುತ್ತಿವೆ. ಹೀಗಾಗಿ, ಈ ಬಾರಿ ರೈತರು ನಿರ್ಣಾಯಕ ಹೋರಾಟಕ್ಕೆ ನಿಂತಿದ್ದಾರೆ. ಪ್ರತಿ ಟನ್‌ಗೆ ₹3,500 ದರ ನೀಡಬೇಕು, ಇಳುವರಿ ಪ್ರಮಾಣದ (ರಿಕವರಿ ರೇಟ್) ಮಿತಿಯನ್ನೂ ಶೇ 9.5ಕ್ಕೆ ಇಳಿಸಬೇಕು ಎಂದು ಪಟ್ಟು ಹಿಡಿದಿದ್ದಾರೆ.

**ಕಾರ್ಖಾನೆಗಳಿಗೆ ಲಾಭ:** 'ಕಬ್ಬು ಅರೆಯುವ ಕಾರ್ಖಾನೆಗಳು ಸಕ್ಕರೆಯನ್ನಷ್ಟೇ ಉತ್ಪಾದಿಸುವುದಿಲ್ಲ. ಮೊಲಾಸಿಸ್, ಎಥೆನಾಲ್, ವಿದ್ಯುತ್ ಅನ್ನು ಉತ್ಪಾದಿಸುತ್ತವೆ. ಇವುಗಳಿಂದಲೂ ಕಾರ್ಖಾನೆಗಳ ಮಾಲೀಕರು ಲಾಭ ಗಳಿಸುತ್ತಾರೆ. ಹೆಚ್ಚು ಲಾಭ ಬರುವಾಗ ನಮಗೆ ಉತ್ತಮ ದರ ನೀಡಲು ಅವರಿಗೆ ಯಾಕೆ ಸಾಧ್ಯವಿಲ್ಲ' ಎಂಬುದು ಬೆಳೆಗಾರರ ಪ್ರಶ್ನೆ.

ವಾರದಿಂದ ರಸ್ತೆ ತಡೆ, ಬಂದ್, ಉರುಳುಸೇವೆ, ಅರೆಬೆತ್ತಲೆ ಮರವಣಿಗೆ ಮಾಡಿದ ರೈತರು, ಶುಕ್ರವಾರದ (ನ. 7) ಒಳಗೆ ಬೇಡಿಕೆ ಈಡೇರದಿದ್ದರೆ ಅಂದಿನಿಂದ ಸಾಮೂಹಿಕ ಆಮರಣ ಉಪವಾಸ ಕೈಗೊಳ್ಳಲು ನಿರ್ಧರಿಸಿದ್ದಾರೆ.



ಗೋಕಾಕದಲ್ಲಿ ಬುಧವಾರ ರಸ್ತೆ ತಡೆ ನಡೆಸಿದ ರೈತರು ಹೆದ್ದಾರಿಯಲ್ಲೇ ಕುಳಿತು ಊಟ ಮಾಡಿದರು ಪ್ರಜಾವಾಣಿ ಚಿತ್ರ: ರಾಮೇಶ್ವರ ಕಲ್ಯಾಣಶೆಟ್ಟಿ

### ಅಫಜಲಪುರ: ಇಂದು ಬಂದ್

ಕಲಬುರಗಿ ಜಿಲ್ಲೆಯಲ್ಲೂ ಕಬ್ಬು ದರ ನಿಗದಿ ಕಗ್ಗಂಟು ಮುಂದುವರಿದಿದೆ. ರೈತರ ಪರವಾಗಿ ಜಿಲ್ಲಾಡಳಿತ ಹಾಗೂ ಸಕ್ಕರೆ ಕಾರ್ಖಾನೆಗಳ ನಡುವೆ ಹಲವು ಸುತ್ತಿನ ಮಾತುಕತೆ, ಸಭೆಯ ಹೊರತಾಗಿಯೂ ಹಗ್ಗಜಗ್ಗಾಟ ಮುಂದುವರಿದಿದೆ. 'ಜಿಲ್ಲೆಯಲ್ಲಿ ಕಬ್ಬಿನ ಇಳುವರಿ ಕಡಿಮೆಯಿದ್ದು, ಎಫ್‌ಆರ್‌ಪಿ ದರ ನೀಡುವುದಾಗಿ ಕಾರ್ಖಾನೆಗಳು ಹೇಳುತ್ತಿವೆ. ಆದರೆ, ಪ್ರತಿ ಟನ್ ಕಬ್ಬಿಗೆ ಕಟಾವು ಮತ್ತು ಸಾಗಣೆ ವೆಚ್ಚ ಹೊರತುಪಡಿಸಿ ₹3,500 ದರಕ್ಕೆ ಬೆಳೆಗಾರರು ಆಗ್ರಹಿಸಿದ್ದಾರೆ. ಏಕರೂಪ ದರ ನಿಗದಿಗೆ ಜಿಲ್ಲಾಡಳಿತ ಪ್ರಯತ್ನಿಸುತ್ತಿದೆ. ಕಬ್ಬು ದರ ನಿಗದಿಗೆ ಸಂಬಂಧಿಸಿದಂತೆ ಕಬ್ಬು ಬೆಳೆಗಾರರ ಸಂಘದಿಂದ ಗುರುವಾರ (ನ.6) ಅಫಜಲಪುರ ಬಂದ್‌ಗೆ ಕರೆ ನೀಡಲಾಗಿದೆ.

### ದಶಕಗಳ 'ಮೋಸ'

- 2012–13ರಲ್ಲಿ ಟನ್ ಕಬ್ಬಿಗೆ ₹1,700 ದರವಿತ್ತು. ಆಗಿದ್ದ ಇಳುವರಿ ಪ್ರಮಾಣ ಶೇ 9 ಮಾತ್ರ. 2013–14ರಲ್ಲಿ ₹3,000 ಕೇಳಿ ರೈತರು ಹೋರಾಡಿದರು. ₹2,100ಕ್ಕೆ ಏರಿಸಲಾಯಿತು. ಸಕ್ಕರೆ ಇಳುವರಿ ಪ್ರಮಾಣವನ್ನೂ ಶೇ 9.5ಕ್ಕೆ ಏರಿಸಲಾಯಿತು
- 2018ರಲ್ಲಿ ರೈತರು ಕಬ್ಬು ತುಂಬಿದ 18 ಲಾರಿಗಳನ್ನು ಸುವರ್ಣ ವಿಧಾನಸೌಧದ ಆವರಣಕ್ಕೆ ನುಗ್ಗಿಸಿ ಪ್ರತಿಭಟನೆ ಮಾಡಿದರು. ಅದಕ್ಕೆ ಮಣಿದ ಸರ್ಕಾರ ಎಫ್‌ಆರ್‌ಪಿಯನ್ನು ₹2,750ಕ್ಕೆ ಏರಿಸಿತು. ಆದರೆ, ಕಾರ್ಖಾನೆಗಳು ಒತ್ತಡ ಹೇರಿ ಇಳುವರಿ ಪ್ರಮಾಣದ ಮಿತಿಯನ್ನೂ ಶೇ 10ಕ್ಕೆ ಏರಿಸಿದವು
- 2023–24ರಲ್ಲಿ ಕಬ್ಬಿಗೆ ₹3,005 ದರ ನೀಡಲಾಯಿತು. ಕೇಂದ್ರ ಸರ್ಕಾರ ಎಫ್‌ಆರ್‌ಪಿಯನ್ನು ₹3,150ಕ್ಕೆ ಏರಿಸಿತು. ರಂಗೋಲಿ ಕೆಳಗೆ ನುಸುಳಿದ ಕಾರ್ಖಾನೆಗಳ ಮಾಲೀಕರು ಇಳುವರಿ ಮಿತಿಯನ್ನು ಶೇ 10.25ಕ್ಕೆ ನಿಗದಿಯಾಗುವಂತೆ ನೋಡಿಕೊಂಡರು
- ಈ ವರ್ಷವೂ ಎಫ್‌ಆರ್‌ಪಿ ₹3,550ಕ್ಕೆ ನಿಗದಿಯಾಗಿದೆ. ಆದರೆ, ಇಳುವರಿ ಪ್ರಮಾಣವನ್ನು ಶೇ 10.25ಕ್ಕೆ ಮಿತಿಗೊಳಿಸಲಾಗಿದೆ. ಕಾರ್ಖಾನೆಗಳು ₹3,010ಕ್ಕೆ ಬಂದು ನಿಂತಿವೆ
- ಶೇ 9.5 ಇಳುವರಿ ಆಧರಿಸಿಯೇ ₹3,500 ದರ ನೀಡಬೇಕು ಎಂಬ ರೈತರ ಆಗ್ರಹ ಈಗ ಆಂದೋಲನದ ಸ್ವರೂಪ ತಾಳಿದೆ

### ಇಳುವರಿ ಪ್ರಮಾಣ ಎಂದರೆ...

ನಿರ್ದಿಷ್ಟ ತೂಕದ ಕಬ್ಬಿನ ಅರೆಯುವಿಕೆಯಿಂದ ಉತ್ಪಾದನೆಯಾದ ಸಕ್ಕರೆಯ ಶೇಕಡವಾರು ಪ್ರಮಾಣವೇ ಇಳುವರಿ ಪ್ರಮಾಣ.

ಉದಾಹರಣೆಗೆ, ಒಂದು ವೇಳೆ 100 ಕೆಜಿ ಕಬ್ಬು ಅರೆದಾಗ 10 ಕೆಜಿ ಸಕ್ಕರೆ ಸಿಕ್ಕಿದರೆ, ಆಗ ಆ ಕಬ್ಬಿನ ಇಳುವರಿ ಪ್ರಮಾಣ ಶೇ 10 ಆಗುತ್ತದೆ

ಕೇಂದ್ರ ಸರ್ಕಾರವು 2025–26ನೇ ಸಾಲಿಗೆ ಟನ್ ಕಬ್ಬಿಗೆ ಎಫ್‌ಆರ್‌ಪಿ (₹3,550) ನಿಗದಿ ಪಡಿಸುವಾಗ ಇಳುವರಿ ಪ್ರಮಾಣದ ಮಿತಿ ಶೇ 10.25 ಇರಬೇಕು ಎಂದು ಹೇಳಿದೆ. ಅಂದರೆ, 1,000 ಕೆಜಿ ಕಬ್ಬು ಅರೆದರೆ 102.5 ಕೆಜಿ ಸಕ್ಕರೆ ಉತ್ಪಾದನೆಯಾಗಬೇಕು. ಅದಕ್ಕಿಂತ ಕಡಿಮೆ ಸಕ್ಕರೆ ಉತ್ಪಾದನೆಯಾದರೆ ಟನ್ ಕಬ್ಬಿಗೆ ₹3,555 ಸಿಗುವುದಿಲ್ಲ



### ರಾಜಕೀಯಗೊಳಿಸುವ ಯತ್ನ

ಹೋರಾಟವನ್ನು ರಾಜಕೀಯಗೊಳಿಸುವ ಯತ್ನವೂ ನಡೆಯುತ್ತಿದೆ. ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ರೈತರ ಹೋರಾಟ ಬೆಂಬಲಿಸಿ, ಬುಧವಾರ ತಮ್ಮ ಜನ್ಮದಿನವನ್ನೂ ಹೋರಾಟದ ಸ್ಥಳದಲ್ಲಿ ಆಚರಿಸಿಕೊಂಡರು. ಮಂಗಳವಾರ ರಾತ್ರಿ ರೈತರೊಂದಿಗೆ ಹೆದ್ದಾರಿಯಲ್ಲಿ ಮಲಗಿದರು.

ಆದರೆ, ನಮಗೆ ಬೇಕಾದುದು ಬೆಂಬಲವಲ್ಲ; ದರ ಎಂದು ರೈತರು ಮಾರುತ್ತರಿಸಿದರು.

'ವಿಜಯೇಂದ್ರ ಬೆಂಬಲ ಕೊಡುವುದಕ್ಕಿಂತ, ಬಿಜೆಪಿಯವರ ಕೈಯಲ್ಲಿರುವ ಕಾರ್ಖಾನೆಗಳಲ್ಲಿ ಉತ್ತಮ ದರ ಕೊಡಿಸಿದರೆ ಸಾಕು. ನೀವು ಕಬ್ಬು ತಿಂದು ಜನ್ಮದಿನ ಆಚರಿಸಿಕೊಂಡು ರೈತರನ್ನು ಸಮಾಧಾನ ಮಾಡಬಹುದು. ಆದರೆ, ಮರುಳು ಮಾಡಲು ಆಗುವುದಿಲ್ಲ. ಬೆಂಬಲದ ಬದಲು ನಿಮ್ಮವರಿಂದಲೇ 'ಬೆಲೆ' ಕೊಡಿಸಿ' ಎಂದು ಭಾರತೀಯ ಕೃಷಿಕ ಸಮಾಜದ (ಸಂಯುಕ್ತ) ಅಧ್ಯಕ್ಷ ಸಿದಗೌಡ ಮೋದಗಿ ಸವಾಲು ಹಾಕಿದ್ದಾರೆ.

### ದರ ನಿಗದಿಗೆ ತಿಕ್ಕಾಟ

ಬೆಳಗಾವಿ ಮಾತ್ರವಲ್ಲದೆ, ಗದಗ, ವಿಜಯಪುರ, ಬಾಗಲಕೋಟೆ, ಉತ್ತರ ಕನ್ನಡ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಕಬ್ಬಿಗೆ ಬೆಲೆ ನಿಗದಿ ವಿಚಾರದಲ್ಲಿ ಕಾರ್ಖಾನೆಗಳು ಮತ್ತು ಬೆಳೆಗಾರರ ನಡುವೆ ತಿಕ್ಕಾಟ ನಡೆಯುತ್ತಿದೆ.

ಗದಗ ಜಿಲ್ಲೆಯ ಮುಂಡರಗಿಯ ರೈತರು ಸಾವಿರಾರು ಎಕರೆಯಲ್ಲಿ ಕಬ್ಬು ಬೆಳೆದಿದ್ದು, ತಾಲ್ಲೂಕಿನ ಗಂಗಾಪುರ ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಜಯನಗರ ಶುಗರ್ಸ್ ಕಾರ್ಖಾನೆಯವರು ಈಗಾಗಲೇ ಕಬ್ಬು ಅರೆಯಲು ಆರಂಭಿಸಿದ್ದಾರೆ. ಆದರೆ, ಕಬ್ಬಿನ ದರ ನಿಗದಿ ಕುರಿತಂತೆ ಸಕ್ಕರೆ ಕಾರ್ಖಾನೆಯವರು ಹಾಗೂ ಕಬ್ಬು ಬೆಳೆಗಾರರ ನಡುವೆ ಹಗ್ಗಜಗ್ಗಾಟ ಮುಂದುವರಿದಿದೆ.

ಕೇಂದ್ರ ಸರ್ಕಾರ ಟನ್ ಕಬ್ಬಿಗೆ ₹3,550 ಎಫ್‌ಆರ್‌ಪಿ ನಿಗದಿಗೊಳಿಸಿದ್ದು, ಅದೇ ದರದಲ್ಲಿ ಕಬ್ಬು ಖರೀದಿಸಬೇಕು ಎಂದು ಇಲ್ಲಿಯ ರೈತರು ಒತ್ತಾಯಿಸಿದ್ದಾರೆ. ಜಿಲ್ಲಾಧಿಕಾರಿ ಅವರು ಈ ಕುರಿತು ಈಗಾಗಲೇ ರೈತರು ಹಾಗೂ ಸಕ್ಕರೆ ಕಾರ್ಖಾನೆಯವರ ಸಭೆ ನಡೆಸಿದ್ದು, ಎಫ್‌ಆರ್‌ಪಿ ದರದಂತೆ ರೈತರ ಕಬ್ಬು ಖರೀದಿಸಬೇಕು ಎಂದು ಜಿಲ್ಲಾಧಿಕಾರಿ ಸಕ್ಕರೆ ಕಾರ್ಖಾನೆಯವರಿಗೆ ಸೂಚಿಸಿದ್ದಾರೆ. ಪ್ರಸ್ತುತ ಸಕ್ಕರೆ ಕಾರ್ಖಾನೆಯವರು ಟನ್ ಕಬ್ಬಿಗೆ ₹2,630 ನೀಡಿ ಖರೀದಿಸುತ್ತಿದ್ದು, ಟನ್ ಕಬ್ಬಿಗೆ ಹೆಚ್ಚುವರಿಯಾಗಿ ₹500 ನೀಡಬೇಕು ಎಂದು ರೈತರು ಪಟ್ಟು ಹಿಡಿದಿದ್ದಾರೆ.

### ದಕ್ಷಿಣದಲ್ಲೂ ಅಸಂತೃಪ್ತಿ

ಕಬ್ಬು ಬೆಳೆಯುವ ದಕ್ಷಿಣದ ಜಿಲ್ಲೆಗಳಾದ ಮಂಡ್ಯ, ಮೈಸೂರು, ಚಾಮರಾಜನಗರ ವ್ಯಾಪ್ತಿಯ ಬೆಳೆಗಾರರಲ್ಲೂ ಅಸಂತೃಪ್ತಿ ಮಡುಗಟ್ಟಿದೆ. ಎಫ್‌ಆರ್‌ಪಿ ದರಕ್ಕಾಗಿ ಪ್ರತಿ ವರ್ಷ ಪ್ರತಿಭಟನೆಗಳನ್ನು ನಡೆಸುತ್ತಲೇ ಬಂದಿದ್ದಾರೆ. ಹಾಗಿದ್ದರೂ, ಅವರ ಬೇಡಿಕೆ ಈಡೇರಿಲ್ಲ.

ಮಂಡ್ಯ ಜಿಲ್ಲೆಯಲ್ಲಿ ಈಗಾಗಲೇ ಮೈಷುಗರ್, ಚಾಂಷುಗರ್ ಸಕ್ಕರೆ ಕಾರ್ಖಾನೆ ವ್ಯಾಪ್ತಿಯ ರೈತರು ವಿವಿಧ ಬೇಡಿಕೆ ಈಡೇರಿಕೆಗಾಗಿ ಹಲವು ಹೋರಾಟಗಳನ್ನು ನಡೆಸಿದ್ದಾರೆ. ಕಾರ್ಖಾನೆಗಳು ಬಾಕಿ ಉಳಿಸಿಕೊಂಡಿದ್ದನ್ನೂ ಪಾವತಿ ಮಾಡಿಲ್ಲ ಎಂಬುದು ರೈತರ ಆಕ್ರೋಶಕ್ಕೆ ಮತ್ತೊಂದು ಕಾರಣ.

'2022-23ರ ಹಂಗಾಮಿನಲ್ಲಿ ಕಾರ್ಖಾನೆಗಳಿಗೆ ಕಬ್ಬು ಪೂರೈಸಿದ್ದವರಿಗೆ ರಾಜ್ಯ ಸರ್ಕಾರ ಟನ್ ಕಬ್ಬಿಗೆ ₹150 ಪ್ರೋತ್ಸಾಹ ಧನ ಪಾವತಿಸುವುದಾಗಿ ಘೋಷಿಸಿತ್ತು. ಕೂಡಲೇ ಅದನ್ನು ನೀಡಬೇಕು' ಎಂದು ರೈತ ಸಂಘದ ವಿಭಾಗೀಯ ಉಪಾಧ್ಯಕ್ಷ ಶಂಕರೇಗೌಡ ಆಗ್ರಹಿಸಿದ್ದಾರೆ.

'ಪ್ರತಿ ಟನ್ ಕಬ್ಬಿಗೆ ಕನಿಷ್ಠ ₹14 ಸಾವಿರದಿಂದ ₹15 ಸಾವಿರದಷ್ಟು ಆದಾಯ ಪಡೆಯುತ್ತಿರುವ ಸಕ್ಕರೆ ಕಾರ್ಖಾನೆ ಮಾಲೀಕರು ಬೆಳೆಗಾರರನ್ನು ಶೋಷಿಸುತ್ತಿದ್ದಾರೆ. ಕಬ್ಬು ಪೂರೈಸಿದವರಿಗೆ 14 ದಿನಗಳೊಳಗೆ ಹಣ ಪಾವತಿಸಬೇಕೆಂಬ ನಿಯಮವಿದ್ದರೂ ಒಂದೂವರೆ ತಿಂಗಳಿಗೂ ಹೆಚ್ಚು ಸಮಯವಾದರೂ ಪಾವತಿಸುತ್ತಿಲ್ಲ. ನಿರೀಕ್ಷಿತ ಬೆಲೆ ಸಿಗದೆ ಬೆಳೆಗಾರರು ಕಬ್ಬಿನಿಂದ ವಿಮುಖರಾಗುತ್ತಿದ್ದಾರೆ. ಶೇ 9.5ರಷ್ಟು ಇಳುವರಿಗೆ ಕನಿಷ್ಠ ₹5,500 ಎಫ್‌ಆರ್‌ಪಿ ನಿಗದಿ ಪಡಿಸಬೇಕು ಸಂಘ ಒತ್ತಾಯಿಸುತ್ತಿದೆ. ಆದರೆ, ರಾಜಕೀಯ ಪ್ರಭಾವವುಳ್ಳ ಕಾರ್ಖಾನೆ ಮಾಲೀಕರು ದರ ನಿಗದಿ ಮಾಡಲು ಬಿಡುತ್ತಿಲ್ಲ' ಎಂಬುದು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್.ಎಲ್. ಭರತ್‌ರಾಜ್ ದೂರು.



ಚನ್ನಮ್ಮನ ಕಿತ್ತೂರಿನಲ್ಲಿ ರೈತರು ರಸ್ತೆ ತಡೆ ನಡೆಸಿದ್ದರಿಂದ ಬುಧವಾರವೂ ಕಬ್ಬಿನ ಲಾರಿಗಳು ಸಾಲಾಗಿ ನಿಂತವು ಪ್ರಜಾವಾಣಿ ಚಿತ್ರ: ಪ್ರದೀಪ ಮೇಲಿನಮನಿ

ಮಾಹಿತಿ: ಬಸವರಾಜ ಹವಾಲ್ದಾರ, ಬಸವರಾಜ ಸಂಪಳ್ಳಿ, ಸತೀಶ್ ಎಂ.ಬೆಳ್ಳಕ್ಕಿ, ಸಿದ್ದು ಆರ್.ಜಿ.ಹಳ್ಳಿ, ಗಣಪತಿ ಹೆಗಡೆ, ಬಸೀರ ಅಹ್ಮದ್ ನಗಾರಿ

ಎಡದಿಂದ ಬಲಕ್ಕೆ
1.ಪೊಳ್ಳು ಹರಟೆಯಿದು (4
3.ಉತ್ತ ನೆಲವನ್ನು ಮಟ್ಟಮಾಡುವ ಸಾಧನ (3
5.ವಿನಾಯಕ ಇಲ್ಲಿಯೇ ಪ್ರತ್ಯಕ್ಷ! (3
7.ತಿರುಗಿ ಲಾಗ ಹಾಕಿದಾಗ ಆದ ಗದ್ದಲ! (3
8.ಲೋಹದ ಹಕ್ಕಿಯಲ್ಲಿನ ಪಯಣ (5
11.ಮುಳ್ಳುಗಳ ನಡುವೆ ಅರಳುವ ಹೂ (3
12.ಆನೆಯ ಮರಿಯಿದು (3
15.ಮೆಟ್ಟಿಲಿರುವ ಚೌಕಾಕಾರದ ಕೊಳ (3
16.ಕೊನೆಗೆ ದನವನ್ನಿಟ್ಟು ತುಂಡು ಮಾಡುವಿಕೆ! (4

6214ನೇ

## ❖ ‘ಎ.ಐ: ಅಗತ್ಯ ಎದುರಾದರೆ ನಿಯಂತ್ರಣ’

**ಸಂದರ್ಭ: ಕೃತಕ ಬುದ್ಧಿಮತ್ತೆ (ಎ.ಐ) ವಲಯದಲ್ಲಿ ಅಗತ್ಯ ಸೃಷ್ಟಿಯಾದಾಗ ನಿಯಂತ್ರಣ ಕ್ರಮಗಳನ್ನು ಅಥವಾ ಕಾನೂನನ್ನು ಜಾರಿಗೆ ತರಲಾಗುತ್ತದೆ ಎಂದು ಕೇಂದ್ರ ಮಾಹಿತಿ ತಂತ್ರಜ್ಞಾನ (ಐ.ಟಿ.) ಕಾರ್ಯದರ್ಶಿ ಎಸ್. ಕೃಷ್ಣನ್ ಹೇಳಿದ್ದಾರೆ.**

- ಈಗ ಸರ್ಕಾರವು ಕೃತಕ ಬುದ್ಧಿಮತ್ತೆ ವಲಯದಲ್ಲಿನ ಆವಿಷ್ಕಾರಗಳ ಮೇಲೆ ಗಮನ ನೀಡುತ್ತಿದೆ. ಎ.ಐ. ಮೂಲಕ ದೇಶದ ಜನರಿಗೆ ಅತ್ಯಂತ ಹೆಚ್ಚಿನ ಲಾಭ ತಂದುಕೊಡಲು ಸರ್ಕಾರ ಬಯಸುತ್ತಿದೆ ಎಂದು ಅವರು ಹೇಳಿದ್ದಾರೆ.
- ‘ಆವಿಷ್ಕಾರಗಳಿಗೆ ಹೆಚ್ಚಿನ ಆದ್ಯತೆ ನೀಡುವುದು ಇಂದಿನ ಅಗತ್ಯ ಎಂದು ಭಾವಿಸುವುದಾದರೆ, ನಿಯಂತ್ರಣ ಕ್ರಮಗಳನ್ನು ಜಾರಿಗೆ ತರುವುದು ಇಂದಿನ ಆದ್ಯತೆ ಆಗುವುದಿಲ್ಲ... ಆದರೆ ನಿಯಂತ್ರಣ ಕ್ರಮಗಳಿಗೆ ಅಥವಾ ಕಾನೂನಿನ ಜಾರಿಗೆ ಅಗತ್ಯ ಎದುರಾದರೆ ಸರ್ಕಾರ ಆಗ ಹಿಂದೇಟು ಹಾಕುವುದಿಲ್ಲ’ ಎಂದು ಕೃಷ್ಣನ್ ತಿಳಿಸಿದ್ದಾರೆ.

## ❖ ಡಿಸೆಂಬರ್‌ನಿಂದ ರಷ್ಯಾ ತೈಲ ಇಲ್ಲ

**ಸಂದರ್ಭ: ನೇರ ಆಮದು ನಿಲ್ಲುವ ಸಾಧ್ಯತೆ, ಮಧ್ಯವರ್ತಿಗಳ ಮೂಲಕ ಆಮದು ಮುಂದುವರಿಕೆ: ಭಾರತದ ಕಂಪನಿಗಳು ರಷ್ಯಾದಿಂದ ಕಚ್ಚಾ ತೈಲವನ್ನು ನೇರವಾಗಿ ಆಮದು ಮಾಡಿಕೊಳ್ಳುವುದನ್ನು ನವೆಂಬರ್ ಕೊನೆಯ ವಾರದಿಂದ ಕಡಿಮೆ ಮಾಡಲಿವೆ.**

- ರಷ್ಯಾದ ರೊಸ್ನೆಫ್ಟ್ ಹಾಗೂ ಲುಕಾಯಿಲ್ ಕಂಪನಿಗಳ ಮೇಲೆ ಅಮೆರಿಕವು ವಿಧಿಸಿರುವ ನಿರ್ಬಂಧಕ್ಕೆ ಅನುಗುಣವಾಗಿ ಭಾರತದ ತೈಲ ಸಂಸ್ಕರಣಾ ಕಂಪನಿಗಳು ನಡೆದುಕೊಳ್ಳುವ ನಿರೀಕ್ಷೆ ಇದೆ ಎಂದು ತಜ್ಞರು ಹೇಳಿದ್ದಾರೆ.
- ಇದರಿಂದಾಗಿ ಡಿಸೆಂಬರ್‌ನಲ್ಲಿ ಭಾರತಕ್ಕೆ ಬರುವ ರಷ್ಯಾದ ಕಚ್ಚಾ ತೈಲದ ಪ್ರಮಾಣ ತೀವ್ರವಾಗಿ ತಗ್ಗಲಿದೆ. ನಂತರದಲ್ಲಿ, 2026ರ ಆರಂಭದಿಂದ ಮಧ್ಯವರ್ತಿಗಳು ಹಾಗೂ ಪರ್ಯಾಯ ವ್ಯಾಪಾರ ಮಾರ್ಗಗಳ ಮೂಲಕ ರಷ್ಯಾದ ಕಚ್ಚಾ ತೈಲದ ಆಮದು ನಿಧಾನವಾಗಿ ಹೆಚ್ಚಳವಾಗುವ ಅಂದಾಜು ಇದೆ.
- ರಷ್ಯಾದಿಂದ ಕಚ್ಚಾ ತೈಲ ಆಮದು ಮಾಡಿಕೊಳ್ಳುವ ಕಂಪನಿಗಳ ಸಾಲಿನಲ್ಲಿ ಮೊದಲ ಸ್ಥಾನದಲ್ಲಿರುವ ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್ ಅಲ್ಲಿಂದ ಖರೀದಿಯನ್ನು ನಿಲ್ಲಿಸಲಿದೆ. ಸರ್ಕಾರಿ ಸ್ವಾಮ್ಯದ ಇತರ ಎರಡು ಸಂಸ್ಕರಣಾ ಕಂಪನಿಗಳು ರಷ್ಯಾದಿಂದ ತೈಲ ಆಮದು ನಿಲ್ಲಿಸುವುದಾಗಿ ಹೇಳಿವೆ. ಎಂಆರ್‌ಪಿಎಲ್ ಹಾಗೂ ಎಚ್‌ಪಿಸಿಎಲ್-ಮಿತ್ತಲ್ ಎನರ್ಜಿ ಲಿಮಿಟೆಡ್ ಕಂಪನಿ ಮುಂದಿನ ದಿನಗಳಲ್ಲಿ ಆಮದನ್ನು ಅಮಾನತಿನಲ್ಲಿ ಇರಿಸುವ ಆಲೋಚನೆ ಇರುವುದಾಗಿ ಹೇಳಿವೆ.
- ಆದರೆ ನಯಾರಾ ಎನರ್ಜಿ ಕಂಪನಿಯ ವಾದಿನಾರ್ ತೈಲ ಸಂಸ್ಕರಣಾ ಘಟಕವು ರಷ್ಯಾದಿಂದ ತೈಲ ಆಮದನ್ನು ಮುಂದುವರಿಸುವ ನಿರೀಕ್ಷೆ ಇದೆ. ನಯಾರಾ ಕಂಪನಿಯಲ್ಲಿ ರೊಸ್ನೆಫ್ಟ್‌ನ ಹೂಡಿಕೆ ಇದೆ.
- ದತ್ತಾಂಶ ವಿಶ್ಲೇಷಣಾ ಸಂಸ್ಥೆ ಕೆಪ್ಲರ್‌ನ ಮುಖ್ಯ ಸಂಶೋಧನಾ ವಿಶ್ಲೇಷಕ ಸುಮಿತ್ ರಿತೋಲಿಯಾ ಅವರ ಪ್ರಕಾರ, ಅಕ್ಟೋಬರ್‌ನಲ್ಲಿ ಭಾರತಕ್ಕೆ ಕಚ್ಚಾ ತೈಲ ಪೂರೈಸಿದ ದೇಶಗಳ ಸಾಲಿನಲ್ಲಿ ರಷ್ಯಾ ಮೊದಲ ಸ್ಥಾನದಲ್ಲಿದೆ. ಇರಾಕ್ ಮತ್ತು ಸೌದಿ ಅರೇಬಿಯಾ ನಂತರದ ಸ್ಥಾನಗಳಲ್ಲಿವೆ.
- ತಜ್ಞರ ಪ್ರಕಾರ ರಷ್ಯಾದಿಂದ ಕಚ್ಚಾ ತೈಲ ಆಮದು ಸಂಪೂರ್ಣವಾಗಿ ನಿಲ್ಲುವ ಸಾಧ್ಯತೆ ಇಲ್ಲ. ಆದರೆ ಮುಂದಿನ ದಿನಗಳಲ್ಲಿ ಆಮದು ಹೆಚ್ಚು ಸಂಕೀರ್ಣವಾದ ಸಾಗಣೆ ಮತ್ತು ಖರೀದಿ ವ್ಯವಸ್ಥೆಯನ್ನು ಆಶ್ರಯಿಸಲಿದೆ.
- ‘ಡಿಸೆಂಬರ್‌ನಲ್ಲಿ ರಷ್ಯಾದ ಕಚ್ಚಾ ತೈಲ ಆಮದು ಗಣನೀಯವಾಗಿ ಕಡಿಮೆ ಆಗಬಹುದು. 2026ರ ಮೊದಲಾರ್ಧದ ಮಧ್ಯಭಾಗದಲ್ಲಿ ಅಥವಾ ಕೊನೆಯ ಹಂತದಲ್ಲಿ, ಹೊಸ ಮಧ್ಯವರ್ತಿಗಳು ಹಾಗೂ ಪರ್ಯಾಯ ಮಾರ್ಗಗಳು ಸೃಷ್ಟಿಯಾದ ನಂತರ ಅಲ್ಲಿಂದ ತೈಲ ತರಿಸಿಕೊಳ್ಳುವುದು ಹಂತ ಹಂತವಾಗಿ ಹೆಚ್ಚಳವಾಗಬಹುದು’ ಎಂದು ಹೇಳಿದ್ದಾರೆ.

Dr. Rajkumar IAS/KAS Academy

## ❖ ಸ್ಟಾರ್‌ಲಿಂಕ್ ಜೊತೆ ಮಹಾರಾಷ್ಟ್ರ ಸರ್ಕಾರ ಒಪ್ಪಂದ

**ಸಂದರ್ಭ: ಉಪಗ್ರಹ ಆಧಾರಿತ ಇಂಟರ್‌ನೆಟ್ ಸೇವೆ ಒದಗಿಸುವ, ಉದ್ಯಮಿ ಇಲಾನ್ ಮಸ್ಕ್ ಒಡೆತನದ ಸ್ಟಾರ್‌ಲಿಂಕ್ ಕಂಪನಿಯ ಜೊತೆ ಮಹಾರಾಷ್ಟ್ರ ಸರ್ಕಾರ ಒಪ್ಪಂದ ಮಾಡಿಕೊಂಡಿದೆ.**

- ಮಹಾರಾಷ್ಟ್ರವು ಸ್ಟಾರ್‌ಲಿಂಕ್ ಜೊತೆಗೆ ಒಪ್ಪಂದ ಮಾಡಿಕೊಂಡ ದೇಶದ ಮೊದಲ ರಾಜ್ಯವಾಗಿದೆ ಎಂದು ಮಹಾರಾಷ್ಟ್ರ ಸರ್ಕಾರ ತಿಳಿಸಿದೆ. ಈ ಕುರಿತ ಒಪ್ಪಂದಕ್ಕೆ ಸರ್ಕಾರವು ಸ್ಟಾರ್‌ಲಿಂಕ್ ಸ್ಯಾಟ್‌ಲೈಟ್ ಕಮ್ಯುನಿಕೇಷನ್ಸ್ ಪ್ರೈವೆಟ್ ಲಿಮಿಟೆಡ್‌ನೊಂದಿಗೆ ಸಹಿ ಹಾಕಿದೆ.
- 'ಈ ಒಪ್ಪಂದದಿಂದ ಉಪಗ್ರಹ ಆಧಾರಿತ ಇಂಟರ್‌ನೆಟ್ ಸೇವೆಯನ್ನು ಸರ್ಕಾರಿ ಸಂಸ್ಥೆಗಳು, ಗ್ರಾಮೀಣ ಪ್ರದೇಶಗಳು, ಕುಗ್ರಾಮ ಮತ್ತು ಹಿಂದುಳಿದ ಪ್ರದೇಶಗಳಲ್ಲಿ ಒದಗಿಸಲಾಗುವುದು' ಎಂದು ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡಣವೀಸ್ 'ಎಕ್ಸ್' ನಲ್ಲಿ ತಿಳಿಸಿದ್ದಾರೆ.
- 'ಸ್ಟಾರ್‌ಲಿಂಕ್ ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ (ಐಸಿಟಿ) ಕ್ಷೇತ್ರದ ಅತಿದೊಡ್ಡ ಕಂಪನಿಗಳಲ್ಲಿ ಒಂದಾಗಿದೆ. ಕಂಪನಿಯೊಂದಿಗೆ ಮಹಾರಾಷ್ಟ್ರ ಒಪ್ಪಂದ ಹೊಂದಿರುವುದು ನಮಗೆ ಗೌರವವಾಗಿದೆ' ಎಂದು ತಿಳಿಸಿದ್ದಾರೆ.
- ಈ ಸಹಯೋಗವು ಡಿಜಿಟಲ್ ಮಹಾರಾಷ್ಟ್ರ ಮಿಷನ್, ಕರಾವಳಿ ಅಭಿವೃದ್ಧಿ ಸೇರಿ ಹಲವು ಅಭಿವೃದ್ಧಿಗೆ ನೆರವಾಗಲಿದೆ ಎಂದು ಹೇಳಿದ್ದಾರೆ.

## ❖ ಡೆಟ್ರಾಯಿಟ್: ಮೊದಲ ಮಹಿಳಾ ಮೇಯರ್ ಆಯ್ಕೆ



ಮೇರಿ ಶೆಫಿಲ್ಡ್

- ಡೆಟ್ರಾಯಿಟ್‌ನ ಮೊದಲ ಮಹಿಳಾ ಮೇಯರ್ ಆಗಿ ಮೇರಿ ಶೆಫೀಲ್ಡ್ ಅವರು ಆಯ್ಕೆಯಾಗಿದ್ದಾರೆ. ಸದ್ಯ ಅವರು ಸಿಟಿ ಕೌನ್ಸಿಲ್ ಅಧ್ಯಕ್ಷೆ ಆಗಿದ್ದಾರೆ.
- ಪ್ರಮುಖ ಚರ್ಚ್‌ವೊಂದರ ಪ್ರಸಿದ್ಧ ಪಾದ್ರಿ ಸೊಲೊಮನ್ ಕಿನ್ಲೊಚ್ ಅವರನ್ನು ಶೆಫೀಲ್ಡ್ ಸಾರ್ವತ್ರಿಕ ಚುನಾವಣೆಯಲ್ಲಿ ಪರಾಭವಗೊಳಿಸಿದ್ದಾರೆ. ಮೇಯರ್ ಆಗಿ ಜನವರಿಯಲ್ಲಿ ಅವರು ಅಧಿಕಾರ ಸ್ವೀಕರಿಸಲಿದ್ದಾರೆ.
- 2013ರಲ್ಲಿ ಶೆಫೀಲ್ಡ್ ತಮ್ಮ 26ನೇ ವಯಸ್ಸಿನಲ್ಲಿ ಸಿಟಿ ಕೌನ್ಸಿಲ್‌ಗೆ ಆಯ್ಕೆಯಾಗಿದ್ದು, 2022ರಲ್ಲಿ ಕೌನ್ಸಿಲ್‌ನ ಅಧ್ಯಕ್ಷರಾಗಿದ್ದರು.
- 'ಡೆಟ್ರಾಯಿಟ್‌ನ ಮಕ್ಕಳಿಗೆ ಶಿಕ್ಷಣ ನೀಡುವ ಕಡೆ ಹೆಚ್ಚು ಗಮನ ನೀಡುತ್ತೇನೆ. ಸಾರ್ವಜನಿಕರ ಸುರಕ್ಷತೆ ಮತ್ತು ಜೀವನಮಟ್ಟ ಸುಧಾರಿಸುವುದು ಚುನಾಯಿತ ಮೇಯರ್ ಆಗಿ ನನ್ನ ಆದ್ಯತೆಯಾಗಿದೆ' ಎಂದು ಮೇರಿ ಶೆಫೀಲ್ಡ್ ಹೇಳಿದ್ದಾರೆ.

## ❖ ಸಾಲದ ಹಣ ಕೌಶಲ ವೃದ್ಧಿಗೆ ಬಳಕೆ: ಸಮೀಕ್ಷೆ

**ಸಂದರ್ಭ: ದೇಶದ ಯುವಕರು ಸಾಲದ ರೂಪದಲ್ಲಿ ಪಡೆಯುವ ಹಣವನ್ನು ಬಹಳ ಜವಾಬ್ದಾರಿಯಿಂದ ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಅವರು ಈ ಹಣವನ್ನು ಕೌಶಲ ಹೆಚ್ಚಿಸಿಕೊಳ್ಳಲು, ವೃತ್ತಿಯಲ್ಲಿ ಬೆಳವಣಿಗೆ ಸಾಧಿಸಲು, ಉದ್ಯಮ ಲೋಕದಲ್ಲಿನ ಗುರಿಗಳನ್ನು ಸಾಧಿಸಲು ಬಳಸುತ್ತಿದ್ದಾರೆ ಎಂದು ಸಮೀಕ್ಷೆಯೊಂದು ಹೇಳಿದೆ.**

- ಸಾಲ ನೀಡುವ ವೇದಿಕೆ ಎಂ-ಪಾಕೆಟ್ ನಡೆಸಿರುವ ಸಮೀಕ್ಷೆಯ ಪ್ರಕಾರ ಇಂದಿನ ತಲೆಮಾರಿನ ಜನರಿಗೆ ಸಾಲ ಪಡೆಯುವುದು ಹೊಸ ಸಾಧ್ಯತೆಗಳನ್ನು ಅರಸಲು ಇರುವ ಒಂದು ಮಾರ್ಗ.
- ಸಮೀಕ್ಷೆಯಲ್ಲಿ ಭಾಗಿಯಾಗಿದ್ದವರ ಪೈಕಿ ಶೇಕಡ 63ರಷ್ಟು ಮಂದಿ ಸಾಲದಿಂದಾಗಿ ತಮ್ಮ ಹಣಕಾಸಿನ ಸ್ಥಿತಿಯ ಮೇಲೆ ಉತ್ತಮ ಪರಿಣಾಮ ಉಂಟಾಗಿದೆ ಎಂದು ಹೇಳಿದ್ದಾರೆ, ಶೇ 40ರಷ್ಟು ಮಂದಿ ಸಾಲವನ್ನು ವೃತ್ತಿಯಲ್ಲಿ ಮುಂದೆ ಬರಲು, ಜೀವನಶೈಲಿಯಲ್ಲಿ ಸುಧಾರಣೆ ತರಲು, ಶಿಕ್ಷಣಕ್ಕಾಗಿ ಬಳಕೆ ಮಾಡಿಕೊಂಡಿದ್ದಾರೆ.

- ಮೂರು ಸಾವಿರಕ್ಕೂ ಹೆಚ್ಚು ಯುವಕರು ಈ ಸಮೀಕ್ಷೆಯಲ್ಲಿ ಭಾಗಿಯಾಗಿದ್ದರು. ಶೇ 23.4ರಷ್ಟು ಮಂದಿ ಆರೋಗ್ಯ ವೆಚ್ಚ ನಿಭಾಯಿಸಲು ಸಾಲ ಪಡೆಯುತ್ತಿದ್ದಾರೆ, ಶೇ 12.4ರಷ್ಟು ಮಂದಿ ತುರ್ತು ಸಂದರ್ಭ ನಿಭಾಯಿಸಲು ಸಾಲ ಪಡೆಯುತ್ತಿದ್ದಾರೆ. ಯುವಕರು ಸಾಲ ಪಡೆದು ತಮ್ಮ ಸ್ಥಿತಿಯನ್ನು ಉತ್ತಮಪಡಿಸಿಕೊಳ್ಳಲು, ದೀರ್ಘಾವಧಿಯಲ್ಲಿ ಬೆಳವಣಿಗೆ ಸಾಧಿಸಲು ಅದನ್ನು ಬಳಸಿಕೊಳ್ಳುತ್ತಿರುವುದು ಸಮೀಕ್ಷೆಯಲ್ಲಿ ಕಂಡುಬಂದಿದೆ.

## ❖ ಅಣ್ವಸ್ತ್ರ ಪರೀಕ್ಷೆ ಪುನರಾರಂಭ: ವ್ಲಾದಿಮಿರ್ ಪುಟಿನ್ ಸೂಚನೆ

**ಸಂದರ್ಭ: 'ಅಣ್ವಸ್ತ್ರ ಪರೀಕ್ಷೆಗಳನ್ನು ಪುನರಾರಂಭಿಸುವ ಸಾಧ್ಯತೆ ಕುರಿತು ಶೀಘ್ರವೇ ಪ್ರಸ್ತಾವ ಸಲ್ಲಿಸಿ' ಎಂದು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅಧಿಕಾರಿಗಳಿಗೆ ಆದೇಶಿಸಿದ್ದಾರೆ.**

- ಅಮೆರಿಕವು ಅಣ್ವಸ್ತ್ರ ಪರೀಕ್ಷೆಗಳನ್ನು ಪುನರಾರಂಭಿಸುವ ಬಗ್ಗೆ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಇತ್ತೀಚಿನ ಹೇಳಿಕೆಗೆ ಪ್ರತಿಯಾಗಿ ರಷ್ಯಾ ಈ ಪ್ರತಿಕ್ರಿಯೆ ನೀಡಿದೆ.
- ಭದ್ರತಾ ಮಂಡಳಿ ಸದಸ್ಯರೊಂದಿಗೆ ಚರ್ಚೆ ನಡೆಸಿದ ಪುಟಿನ್, 'ಅಮೆರಿಕ ಮೊದಲು ಅಣ್ವಸ್ತ್ರ ಪರೀಕ್ಷೆ ನಡೆಸಿದರೆ ಮಾತ್ರ ರಷ್ಯಾ ಅಣ್ವಸ್ತ್ರ ಪರೀಕ್ಷೆಗಳನ್ನು ಪುನರಾರಂಭಿಸುತ್ತದೆ' ಎಂಬ ತಮ್ಮ ಹಿಂದಿನ ಹೇಳಿಕೆಯನ್ನು ದೃಢಪಡಿಸಿದರು.

## ❖ ಮತ್ತೆ ಮೇಯರ್ ಆದ ಪುರೆವಾಲ್

**ಸಂದರ್ಭ: ಭಾರತೀಯ ಮೂಲದ ಪುರೆವಾಲ್ ಅವರು ಅಮೆರಿಕದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಅವರ ಸಹೋದರ ಕೋರಿ ಬೌಮನ್ ಅವರನ್ನು ಪರಾಭವಗೊಳಿಸಿ ಎರಡನೇ ಬಾರಿಗೆ ಸಿನ್ಸಿನಾಟಿಯ ಮೇಯರ್ ಹುದ್ದೆಗೇರಿದ್ದಾರೆ.**

- ಇದರೊಂದಿಗೆ ಡೆಮಾಕ್ರಟ್‌ಗಳು ಸಿನ್ಸಿನಾಟಿಯ ಸ್ಥಳೀಯ ಸರ್ಕಾರದ ಹಿಡಿತವನ್ನು ಪಡೆದಿದ್ದಾರೆ ಮತ್ತು ಒಹಿಯೊನಲ್ಲಿ ಪುರೆವಾಲ್ ಅವರ ರಾಜಕೀಯ ಭವಿಷ್ಯವು ಉಜ್ವಲವಾಗುವ ಸೂಚನೆ ಲಭಿಸಿದೆ ಎಂದು ಸ್ಥಳೀಯ ಮಾಧ್ಯಮಗಳಲ್ಲಿ ವರದಿಯಾಗಿದೆ.

## ❖ ನಾಸ್ಕಾಂ ಫೌಂಡೇಷನ್‌ನಿಂದ ಮಹಿಳಾ ಉದ್ಯಮಿಗಳಿಗೆ ನೆರವು

**ಸಂದರ್ಭ: ಮಹಿಳಾ ಉದ್ಯಮಿಗಳನ್ನು ಇ-ವಾಣಿಜ್ಯ ಕ್ಷೇತ್ರದ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ನಾಸ್ಕಾಂ ಫೌಂಡೇಷನ್ ಮತ್ತು ಒಎನ್‌ಡಿಸಿ ನೆಟ್‌ವರ್ಕ್ ಜೊತೆಯಾಗಿ ಹೊಸ ಯೋಜನೆಯೊಂದನ್ನು ರೂಪಿಸಿವೆ. ಇದು ಕರ್ನಾಟಕದ ಮಹಿಳಾ ಉದ್ಯಮಿಗಳನ್ನು ಆದ್ಯತೆಯನ್ನಾಗಿ ಇರಿಸಿಕೊಂಡಿದೆ.**

- ಈ ಯೋಜನೆಯ ಮೂಲಕ ಮಹಿಳೆಯರ ನೇತೃತ್ವದ 200 ಉದ್ಯಮಗಳನ್ನು ಒಎನ್‌ಡಿಸಿ ನೆಟ್‌ವರ್ಕ್ ವ್ಯಾಪ್ತಿಗೆ ತರಲಾಗಿದೆ, ಅವರಿಗೆ ಇ-ವಾಣಿಜ್ಯ ಮಾರುಕಟ್ಟೆ ಲಭ್ಯವಾಗುವಂತೆ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.
- 'ಭಾರತದ ಇ-ವಾಣಿಜ್ಯ ಮಾರುಕಟ್ಟೆಯು 2034ರ ವೇಳೆಗೆ ಅಮೆರಿಕದ ಇ-ವಾಣಿಜ್ಯ ಮಾರುಕಟ್ಟೆಯನ್ನು ಮೀರಿ ಬೆಳೆಯುವ ಅಂದಾಜು ಇದೆ. ಹೀಗಿದ್ದರೂ, ಈ ವಲಯದಲ್ಲಿ ಬೆಳೆಯಲು ಬೇಕಿರುವ ಡಿಜಿಟಲ್ ಪರಿಣತಿಯು ಸಣ್ಣ ಹಾಗೂ ಮಧ್ಯಮ ಗಾತ್ರದ ವ್ಯಾಪಾರಿಗಳ ಪೈಕಿ ಹಲವರಿಗೆ ಈಗಲೂ ಇಲ್ಲ.
- ಒಎನ್‌ಡಿಸಿ ಜೊತೆಗಿನ ನಮ್ಮ ಪಾಲುದಾರಿಕೆಯು 200ಕ್ಕೂ ಹೆಚ್ಚು ಮಹಿಳಾ ಉದ್ಯಮಿಗಳಿಗೆ ಆನ್‌ಲೈನ್ ಮಾರುಕಟ್ಟೆಯಲ್ಲಿ ಬೆಳವಣಿಗೆ ಸಾಧಿಸಲು ನೆರವಾಗಿದೆ' ಎಂದು ನಾಸ್ಕಾಂ ಫೌಂಡೇಷನ್‌ನ ಸಿಇಒ ಜ್ಯೋತಿ ಶರ್ಮಾ ಹೇಳಿದ್ದಾರೆ. ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಬೆಳಗಾವಿ, ಉಡುಪಿ ಸೇರಿದಂತೆ 22 ಜಿಲ್ಲೆಗಳ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಕ್ಕೆ ತರಲಾಗಿದೆ ಎಂದು ಪ್ರಕಟಣೆಯಲ್ಲಿ ಹೇಳಲಾಗಿದೆ.

## ❖ ಸಂಸ್ಕರಿಸಿದ ನೀರಿನ ಗುಣಮಟ್ಟಕ್ಕೆ ಒಂದೇ ನೀತಿ

**ಸಂದರ್ಭ: 'ಸಂಸ್ಕರಿಸಿದ ನೀರಿನ ಗುಣಮಟ್ಟದ ಖಾತ್ರಿಗಾಗಿ ರಾಷ್ಟ್ರಮಟ್ಟ ದಲ್ಲಿ ಏಕ ರೂಪದ ನೀತಿ ರೂಪಿಸಲು ಕೇಂದ್ರ ಸರ್ಕಾರ ಚಿಂತನೆ ನಡೆಸಿದೆ'** ಎಂದು ನೀತಿ ಆಯೋಗದ ಸದಸ್ಯ ವಿ.ಕೆ.ಪಾಲ್ ತಿಳಿಸಿದರು.

- ನೀತಿ ಆಯೋಗವು ಬೆಂಗಳೂರು ಜಲ ಮಂಡಳಿಯ ಸಹಯೋಗದಲ್ಲಿ ನಗರದಲ್ಲಿ ಆಯೋಜಿಸಿರುವ ಭಾರತದಲ್ಲಿ ಸಂಸ್ಕರಿಸಿದ ನೀರಿನ ಪುನರ್‌ಬಳಕೆ ಕುರಿತ ಎರಡು ದಿನಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.
- 'ನಗರೀಕರಣದ ಪ್ರಭಾವದಿಂದಾಗಿ ನೀರಿನ ಬಳಕೆ ಪ್ರಮಾಣ ಹೆಚ್ಚಳವಾಗಿದೆ. ಆದರೆ, ಭಾರತದಲ್ಲಿ ನೀರಿನ ಲಭ್ಯತೆ ಕಡಿಮೆಯಾಗಿದೆ. ಅಂತರ್ಜಲ ಹಾಗೂ ನದಿ ನೀರಿನ ಅವಲಂಬನೆ ಜತೆಗೆ ಬಳಸಿದ ನೀರಿನ ಸಂಸ್ಕರಣೆಗೆ ಒತ್ತು ನೀಡಲಾಗುತ್ತಿದೆ.
- **ಈಗಾಗಲೇ ಕರ್ನಾಟಕವೂ ಸೇರಿ 11 ರಾಜ್ಯಗಳಲ್ಲಿ ಸಂಸ್ಕರಿಸಿದ ನೀರಿನ ಪುನರ್‌ಬಳಕೆ ನೀತಿ ಇದೆ**. 2030ರೊಳಗೆ ಶೇ 50, 2045ರ ಹೊತ್ತಿಗೆ ಶೇ 100ರಷ್ಟು ನೀರಿನ ಪುನರ್ ಬಳಕೆಯನ್ನು ಮಾಡುವತ್ತ ದೇಶ ಹೆಜ್ಜೆ ಇಡಲೇಬೇಕಾಗಿರುವುದರಿಂದ ಏಕರೂಪದ ನೀತಿ ಜಾರಿಗೆ ಪ್ರಯತ್ನ ನಡೆದಿದೆ' ಎಂದು ವಿವರಿಸಿದರು.
- 'ಭಾರತದ ನಗರ ಪ್ರದೇಶಗಳಲ್ಲಿ ಪ್ರತಿ ನಿತ್ಯ 72,368 ಮಿಲಿಯನ್ ಲೀಟರ್ (ಎಂಎಲ್‌ಡಿ) ಕೊಳಚೆ ನೀರು ಉತ್ಪಾದನೆಯಾಗುತ್ತಿದೆ. ಇದರಲ್ಲಿ 31,885 ಎಂಎಲ್‌ಡಿ ಸಂಸ್ಕರಣೆ ಯಾಗುತ್ತಿದೆ. ಶೇ 60ರಷ್ಟು ಇನ್ನೂ ಸಂಸ್ಕರಣೆಯಾಗಬೇಕಿದೆ. **ಬೆಂಗಳೂರಿನಲ್ಲಿ ನಿತ್ಯ 2,200 ಎಂಎಲ್‌ಡಿ ಕೊಳಚೆ ನೀರು ಸಂಗ್ರಹವಾಗುತ್ತಿದ್ದು 1,300 ಎಂಎಲ್‌ಡಿ ಸಂಸ್ಕರಣೆಯಾಗುತ್ತಿದೆ**. ಈ ಕಾರ್ಯ ಶ್ಲಾಘನೀಯ' ಎಂದರು.

## ❖ '5 ವರ್ಷಗಳಲ್ಲಿ 25 ಸಾವಿರ ನವೋದ್ಯಮ'

**ಸಂದರ್ಭ: 'ಕರ್ನಾಟಕ ನವೋದ್ಯಮ ನೀತಿ 2025– 2030'ಕ್ಕೆ ಸಂಪುಟ ಸಭೆ ಒಪ್ಪಿಗೆ: ಮುಂದಿನ ಐದು ವರ್ಷಗಳಲ್ಲಿ ಬೆಂಗಳೂರು ಮತ್ತು ರಾಜ್ಯದ ಇತರ ನಗರಗಳಲ್ಲಿ ಒಟ್ಟು 25,000 ಹೆಚ್ಚುವರಿ ನವೋದ್ಯಮಗಳನ್ನು ಸ್ಥಾಪಿಸುವ ಉದ್ದೇಶದ 'ಕರ್ನಾಟಕ ನವೋದ್ಯಮ ನೀತಿ 2025– 2030'ಕ್ಕೆ ಗುರುವಾರ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.**

- ಇದಕ್ಕಾಗಿ ಐದು ವರ್ಷಗಳಿಗೆ ₹518.27 ಕೋಟಿ ನಿಗದಿ ಮಾಡಲಾಗಿದೆ. ಬೆಂಗಳೂರಿನಲ್ಲಿ 15 ಸಾವಿರ ಮತ್ತು ರಾಜ್ಯದ ಇತರ ನಗರಗಳಲ್ಲಿ 10 ಸಾವಿರ ನವೋದ್ಯಮಗಳು ಸ್ಥಾಪನೆಗೊಳ್ಳಲಿವೆ.
- ರಾಜ್ಯದಲ್ಲಿ ನವೋದ್ಯಮ ವ್ಯವಸ್ಥೆಯನ್ನು ಬಲಪಡಿಸುವ ಗುರಿಯನ್ನು ಸರ್ಕಾರ ಹೊಂದಿದೆ. ಅನುದಾನ, ಇನ್‌ಕ್ಯುಬೇಷನ್, ಮೂಲಸೌಕರ್ಯ, ಮಾರ್ಗದರ್ಶನ, ಕೌಶಲ ಅಭಿವೃದ್ಧಿ, ಮಾರುಕಟ್ಟೆ ಪ್ರವೇಶ, ವಿಸ್ತರಣೆ, ಅಂತರರಾಷ್ಟ್ರೀಯ ಸಹಯೋಗವನ್ನು ನವೋದ್ಯಮ ನೀತಿ ಒಳಗೊಂಡಿದೆ.
- ಉದಯೋನ್ಮುಖ ಮತ್ತು ಮುಂದುವರಿದ ತಂತ್ರಜ್ಞಾನಗಳಲ್ಲಿ ರಾಜ್ಯವನ್ನು ಮುಂಚೂಣಿಗೆ ತರಲು ಕೃತಕ ಬುದ್ಧಿಮತ್ತೆ, ಬ್ಲಾಕ್‌ಚೈನ್, ಕ್ವಾಂಟಮ್ ಕಂಪ್ಯೂಟಿಂಗ್ ಮತ್ತು ಇತರ ಆಳವಾದ ತಂತ್ರಜ್ಞಾನ ಕ್ಷೇತ್ರಗಳಲ್ಲಿ ನಾವೀನ್ಯವನ್ನು ಪ್ರೋತ್ಸಾಹಿಸಲಾಗುವುದು. ರಾಜ್ಯದ ವಿವಿಧ ನಗರಗಳಲ್ಲಿ ಉದ್ಯಮಿಗಳನ್ನು ಬೆಂಬಲಿಸಲು ನಾವೀನ್ಯ ಕೇಂದ್ರಗಳು, ಇನ್‌ಕ್ಯುಬೇಶನ್ ಕೇಂದ್ರಗಳನ್ನು ವಿಸ್ತರಿಸಲು ನಿರ್ಧರಿಸಲಾಗಿದೆ.

***'ಇಂದಿರಾ ಕಿಟ್' ಪದಾರ್ಥ ಮಾರ್ಪಾಡು***

- ಇಂದಿರಾ ಆಹಾರ ಕಿಟ್‌ನಲ್ಲಿ ಫಲಾನುಭವಿಗಳಿಗೆ ತೊಗರಿ ಬೇಳೆ 1 ಕೆ.ಜಿ, ಅಡುಗೆ ಎಣ್ಣೆ 1 ಲೀಟರ್, ಸಕ್ಕರೆ 1 ಕೆ.ಜಿ, ಉಪ್ಪು 1 ಕೆ.ಜಿ ನೀಡಲಾಗುತ್ತದೆ. 1 ಕೆ.ಜಿ ಹೆಸರು ಕಾಳಿನ ಬದಲಿಗೆ ಅದರ ವೆಚ್ಚಕ್ಕನುಗುಣವಾಗಿ 1ರಿಂದ 3 ಸದಸ್ಯರಿಗೆ 1/4 ಕೆ.ಜಿ, 3 ರಿಂದ 4 ಸದಸ್ಯರಿರುವ ಕುಟುಂಬಕ್ಕೆ 1/2 ಕೆ.ಜಿ ಹಾಗೂ 5 ಕ್ಕೂ ಹೆಚ್ಚು ಸದಸ್ಯರಿರುವ ಕುಟುಂಬಕ್ಕೆ 3/4 ಕೆ.ಜಿ ತೊಗರಿ ಬೇಳೆಯನ್ನು ವಿತರಿಸಲು ತೀರ್ಮಾನಿಸಲಾಗಿದೆ.

Dr. Rajkumar IAS/KAS Academy

## ❖ ‘ರಕ್ಷಣಾ ಉತ್ಪಾದನೆ: ಸ್ವಾವಲಂಬನೆ’

**ಸಂದರ್ಭ: ಭಾರತದ ಉತ್ಪಾದನಾ ಪ್ರದರ್ಶನ-7ನೇ ಆವೃತ್ತಿ ಉದ್ಘಾಟನೆ: ರಕ್ಷಣಾ ಕ್ಷೇತ್ರದಲ್ಲಿ ಅತಿ ದೊಡ್ಡ ಆಮದು ರಾಷ್ಟ್ರವಾಗಿದ್ದ ಭಾರತವು, ಸದ್ಯ ತನ್ನ ಅಗತ್ಯದ ಶೇಕಡ 90ರಷ್ಟು ಸಾಮಗ್ರಿಗಳನ್ನು ತಾನೇ ಉತ್ಪಾದಿಸಿಕೊಳ್ಳುವ ಮೂಲಕ ಆತ್ಮನಿರ್ಭರ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.**

- ಐಎಂಎಸ್ ಫೌಂಡೇಷನ್, ಲಘು ಉದ್ಯೋಗ ಭಾರತಿ-ಕರ್ನಾಟಕ ಸಹಯೋಗದೊಂದಿಗೆ ಬೆಂಗಳೂರು ಅಂತರರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಆಯೋಜಿಸಿದ್ದ ಭಾರತದ ಉತ್ಪಾದನಾ ಪ್ರದರ್ಶನ-7ನೇ ಆವೃತ್ತಿ ಉದ್ಘಾಟಿಸಿ ಮಾತನಾಡಿದರು.
- ‘ಈ ಹಿಂದೆ ಶೇಕಡ 70ರಷ್ಟು ರಕ್ಷಣಾ ಸಾಮಗ್ರಿಗಳು ಆಮದು ಆಗುತ್ತಿದ್ದವು. ಈಗ ಎಲ್ಲವೂ ಸ್ವದೇಶದಲ್ಲೇ ತಯಾರಾಗುತ್ತಿವೆ. ಇದು ದೇಶದ ಸೌರ್ವಭೌಮತ್ವಕ್ಕೆ ಹಿಡಿದ ಕನ್ನಡಿ. ಈ ಎಲ್ಲಾ ಬೆಳವಣಿಗೆಗೂ ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಗಾರಿಕೆ, ಸ್ಟಾರ್ಟ್‌ಅಪ್‌ಗಳು ಹಾಗೂ ಖಾಸಗಿ ಅನ್ವೇಷಕರ ಕೊಡುಗೆ ಬಹು ದೊಡ್ಡದು’ ಎಂದರು.
- ‘ಬೆಳವಣಿಗೆ ಹಾದಿಯಲ್ಲಿದ್ದರೂ ಕೈಗಾರಿಕೆಗಳನ್ನು ಅನುಮಾನಗಳಿಂದ ನೋಡುವ ಕಾಲವಿತ್ತು. ಆದರೆ, ಇಂದು ಪ್ರಧಾನಿ ನರೇಂದ್ರ ಮೋದಿ ನಾಯಕತ್ವದಲ್ಲಿ ದೇಶ ಪ್ರಗತಿಯತ್ತ ಸಾಗುತ್ತಿದೆ’ ಎಂದು ಹೇಳಿದರು.
- 80ರ ದಶಕದ ಘಟನೆ ನೆನಪಿಸಿಕೊಂಡ ಸಚಿವರು, ‘1984ರಲ್ಲಿ ನನ್ನ ತಂದೆ ಒಂದು ಚೀಲ ಸಿಮೆಂಟ್‌ಗಾಗಿ ದಿನವಿಡೀ ಸರದಿ ಸಾಲಿನಲ್ಲಿ ನಿಂತಿದ್ದರು. ಅಂದು ಅಷ್ಟು ಅಭಾವವಿತ್ತು. ಇಂದು ಪರಿಸ್ಥಿತಿ ಬದಲಾಗಿದ್ದು, ಇಸ್ರೊ ಅಗ್ಗದ ವೆಚ್ಚದಲ್ಲಿ ಉಪಗ್ರಹಗಳನ್ನು ಉಡಾವಣೆ ಮಾಡುತ್ತಿದೆ. ಇದು ನವ ಭಾರತ’ ಎಂದರು.
- ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, **‘ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಗಾರಿಕೆ ಉದ್ಯಮವು ದೇಶದ ಆರ್ಥಿಕತೆಯ ಬೆನ್ನೆಲುಬು ಆಗಿದೆ. ಈ ಕ್ಷೇತ್ರದಲ್ಲಿ 30 ಕೋಟಿ ಜನರು ಕೆಲಸ ಮಾಡುತ್ತಿದ್ದು, ದೇಶದ ಆರ್ಥಿಕತೆಗೆ ಶೇಕಡ 30ರಷ್ಟು ಕೊಡುಗೆ ಇದೆ. ತಯಾರಿಕಾ ವಲಯದಲ್ಲಿ ಶೇಕಡ 45 ಹಾಗೂ ರಫ್ತು ಕ್ಷೇತ್ರದಲ್ಲಿ ಶೇಕಡ 40 ರಷ್ಟು ಕೊಡುಗೆ ನೀಡಿದೆ. ಇಸ್ರೊ, ಡಿಆರ್‌ಡಿಒ, ಎಚ್‌ಎಎಲ್, ಬಿಎಚ್‌ಇಎಲ್ ಸಂಸ್ಥೆಗಳು ತಮ್ಮ ಪೂರೈಕೆ ಸರಪಳಿಯಲ್ಲಿ ಸಣ್ಣ ಮತ್ತು ಕೈಗಾರಿಕಾ ವಲಯವನ್ನು ಸೇರಿಸಿಕೊಂಡು ಬೆಳೆಯಬೇಕು’** ಎಂದು ಹೇಳಿದರು.
- ಇಸ್ರೊ ನಡೆದು ಬಂದ ಹಾದಿಯನ್ನು ವಿವರಿಸಿದ ಅಧ್ಯಕ್ಷ ವಿ.ನಾರಾಯಣನ್, ‘ಕೆಲ ದಿನಗಳ ಹಿಂದೆ **ಸ್ವದೇಶಿ ನಿರ್ಮಿತ ‘ಬಾಹುಬಲಿ’ ರಾಕೆಟ್ ಮೂಲಕ ಅತ್ಯಂತ ಭಾರವಾದ ಉಪಗ್ರಹವನ್ನು ಕಕ್ಷೆಗೆ ಸೇರಿಸುವುದರೊಂದಿಗೆ ಚಾರಿತ್ರಿಕ ಸಾಧನೆ ಮಾಡಿದ್ದೇವೆ. 4,410 ಕೆ.ಜಿ ತೂಕದ ಸಂವಹನ ಉಪಗ್ರಹವನ್ನು (ಸಿಎಂಎಸ್-03) ಹೊತ್ತು ನಭಕ್ಕೆ ಚಿಮ್ಮಿದ ಲಾಂಚ್ ವೆಹಿಕಲ್ ಮಾರ್ಕ್-3 (ಎಲ್‌ವಿಎಂ3-ಎಂ5) ‘ಬಾಹುಬಲಿ’ ಯು ‘ಆತ್ಮನಿರ್ಭರ ಭಾರತ’ ದ ಸಾಧನೆಗೆ ಸಾಕ್ಷಿ. ಪ್ರಸ್ತುತ 450 ಕ್ಕೂ ಹೆಚ್ಚು ದೇಶಿಯ ಕಂಪನಿಗಳೊಂದಿಗೆ ಇಸ್ರೊ ಪಾಲುದಾರಿಕೆ ಹೊಂದಿದೆ’** ಎಂದು ತಿಳಿಸಿದರು.

## ❖ ಸಕ್ಕರೆ ಕಾರ್ಖಾನೆ

- ಸಕ್ಕರೆ ಕಾರ್ಖಾನೆಗಳು ಪ್ರತಿ ಟನ್ ಕಬ್ಬಿಗೆ ಕೇಂದ್ರ ಸರ್ಕಾರ ನಿಗದಿ ಪಡಿಸಿದಷ್ಟು ಎಫ್‌ಆರ್‌ಪಿ (₹3,550) ನೀಡಬೇಕು ಎಂದು ಆಗ್ರಹಿಸಿ ರಾಜ್ಯದ ಕಬ್ಬು ಬೆಳೆಗಾರರು ಪ್ರತಿಭಟನೆ ತೀವ್ರಗೊಳಿಸಿರುವುದರ ನಡುವೆಯೇ ರಾಜ್ಯದಲ್ಲಿರುವ ಕಾರ್ಖಾನೆಗಳ ಮಾಲೀಕತ್ವದ ಬಗ್ಗೆಯೂ ಚರ್ಚೆ ನಡೆಯುತ್ತಿದೆ.
- ರಾಜ್ಯದಲ್ಲಿ 81 ಸಕ್ಕರೆ ಕಾರ್ಖಾನೆಗಳಿದ್ದು, ಈ ಪೈಕಿ ಬೆಳಗಾವಿ, ವಿಜಯಪುರ ಮತ್ತು ಕಲಬುರಗಿ ಜಿಲ್ಲೆಯಲ್ಲಿಯೇ 53 ಇವೆ. ಹಲವು ಕಾರ್ಖಾನೆಗಳು ಸಚಿವರು, ಶಾಸಕರು, ರಾಜಕಾರಣಿಗಳು ಹಾಗೂ ಅವರ ಸಂಬಂಧಿಕರ ನೇರ ಮಾಲೀಕತ್ವದಲ್ಲಿವೆ.
- ಸಹಕಾರಿ ವ್ಯವಸ್ಥೆಯಡಿ ಹಲವು ಕಾರ್ಯನಿರ್ವಹಿಸುತ್ತಿದ್ದು, ಪರೋಕ್ಷವಾಗಿ




Dr. Rajkumar IAS Academy

ಪ್ರಭಾವಿ ರಾಜಕಾರಣಿಗಳ ಹಿಡಿತದಲ್ಲಿವೆ. ನಷ್ಟದ ಸುಳಿಗೆ ಸಿಲುಕಿರುವ ಕೆಲವು ಸಹಕಾರಿ ಕಾರ್ಖಾನೆಗಳನ್ನು ರಾಜಕಾರಣಿಗಳೇ ಗುತ್ತಿಗೆಗೆ ಪಡೆದು ನಿರ್ವಹಿಸುತ್ತಿದ್ದಾರೆ. ಉದ್ಯಮಿಗಳೇ ನೇರವಾಗಿ ನಡೆಸುತ್ತಿರುವ ಕಾರ್ಖಾನೆಗಳ ಸಂಖ್ಯೆ ಕೆಲವೇ ಕೆಲವು

## ❖ ವಿಶ್ವದರ್ಜೆಯ ಬ್ಯಾಂಕ್ ಬೇಕು: ನಿರ್ಮಲಾ

**ಸಂದರ್ಭ: ಭಾರತದಲ್ಲಿ ದೊಡ್ಡದಾದ ಹಾಗೂ ವಿಶ್ವದರ್ಜೆಯ ಬ್ಯಾಂಕ್‌ಗಳ ಅಗತ್ಯವಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಈ ವಿಚಾರವಾಗಿ ಆರ್‌ಬಿಐ ಜೊತೆ ಮಾತುಕತೆ ನಡೆಯುತ್ತಿದೆ ಎಂದಿದ್ದಾರೆ.**

- 'ಸರ್ಕಾರವು ತೀರ್ಮಾನ ತೆಗೆದುಕೊಳ್ಳುವ ಮೊದಲು ಬಹಳಷ್ಟು ಕೆಲಸಗಳು ಆಗಬೇಕಿವೆ. ಈಗಾಗಲೇ ಅಸ್ತಿತ್ವದಲ್ಲಿರುವ ಬ್ಯಾಂಕ್‌ಗಳಿಂದ ಒಂದು ಬ್ಯಾಂಕ್ ಸೃಷ್ಟಿಸುವ ಮೂಲಕ ಈ ಕೆಲಸ ಆಗದು. ವಿಲೀನದ ಮೂಲಕ ಅದನ್ನು ಮಾಡಬಹುದು, ಅದು ಕೂಡ ಒಂದು ಮಾರ್ಗ. ಆದರೆ ಹೆಚ್ಚಿನ ಬ್ಯಾಂಕ್‌ಗಳು ಕೆಲಸ ಮಾಡಲು ಅವಕಾಶ ನೀಡುವ ವ್ಯವಸ್ಥೆಯೊಂದು ರೂಪುಗೊಳ್ಳಬೇಕು' ಎಂದು ಅವರು ಹೇಳಿದ್ದಾರೆ.

## ❖ ರಾಜ್ಯದಲ್ಲೇ ಸಿದ್ಧವಾಗಲಿವೆ 'ಎಐ ಸರ್ವರ್'

**ಸಂದರ್ಭ: ಕೃತಕ ಬುದ್ಧಿಮತ್ತೆ ತಂತ್ರಜ್ಞಾನದಿಂದ ಕಾರ್ಯನಿರ್ವ ಹಿಸುವ ಅತ್ಯಾಧುನಿಕ 'ಎಐ ಸರ್ವರ್' ಗಳನ್ನು ಅಮೆರಿಕದ ಬುರ್ಕಾನ್ ವರ್ಲ್ಡ್ ಇನ್‌ವೆಸ್ಟ್‌ಮೆಂಟ್ ಗ್ರೂಪ್ ಕರ್ನಾಟಕದಲ್ಲೇ ತಯಾರಿಸಲಿದೆ.**

- ಬುರ್ಕಾನ್ ವರ್ಲ್ಡ್‌ನ ಅಧೀನ ಸಂಸ್ಥೆ ದಿ ಫಾಜಿ ಗ್ರೂಪ್ ಸಿಇಒ ಶಫಿ ಖಾನ್ ಅವರ ನೇತೃತ್ವದ ನಿಯೋಗದ ಜತೆ ಹೂಡಿಕೆ ಕುರಿತು ಮಾತುಕತೆ ನಡೆಸಿದ ನಂತರ ಸುದ್ದಿಗಾರರ ಜತೆ ಮಾತನಾಡಿದ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರು ಈ ವಿಷಯ ತಿಳಿಸಿದರು.
- ಅಮೆರಿಕದ ಮಿಯಾಮಿಯಲ್ಲಿ ಕೇಂದ್ರ ಕಚೇರಿ ಹೊಂದಿರುವ ಈ ಕಂಪನಿ ರಾಜ್ಯದಲ್ಲಿ ₹1,500 ಕೋಟಿ ಬಂಡವಾಳ ಹೂಡಲು ಮುಂದೆ ಬಂದಿದೆ. ದೇವನಹಳ್ಳಿ ಸಮೀಪ 10-15 ಎಕರೆ ಭೂಮಿ ನೀಡಲಾಗುವುದು. ಹೂಡಿಕೆಯಿಂದ ತಯಾರಿಕಾ ವಲಯದಲ್ಲಿ ಸಾಕಷ್ಟು ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ಹೇಳಿದರು.
- ಡೇಟಾ ಕೇಂದ್ರಗಳಲ್ಲಿ ಬಳಕೆಯಾಗುವ ಸರ್ವರ್‌ಗಳಿಗೆ ಬಹು ಬೇಡಿಕೆ ಇದೆ. ಇದಕ್ಕೆ ಸಂಬಂಧಿಸಿದ ತಂತ್ರಜ್ಞಾನ ಹಾಗೂ ಉಪಕರಣಗಳನ್ನು ಬೇರೆ ದೇಶಗಳಿಗೆ ರಫ್ತು ಮಾಡಲು ಸಹಕಾರ ನೀಡಲಾಗುವುದು. ಅತ್ಯಾ ಧುನಿಕ ಸಿಪಿಯು, ಜಿಪಿಯು, ಎಐ-ರೆಡಿ ನೆಟ್ವರ್ಕ್ ಸ್ವಿಚ್ ತಯಾರಿಕೆಯನ್ನೂ ಕಂಪನಿ ಆರಂಭಿಸಲಿದೆ. ಜಾಗತಿಕ ತಾಂತ್ರಿಕ ಪಾಲುದಾರ ಕಂಪನಿಗಳಾದ ಗಿಗಾಬೈಟ್ ಮತ್ತು ಸೆರಾ ನೆಟ್‌ವರ್ಕ್ ಸಹಯೋಗ ನೀಡಲಿವೆ. ಸೆಮಿಕಂಡಕ್ಟರ್, ಎಐ ಹಾರ್ಡ್-ವೇರ್, ಆಧುನಿಕ ಎಲೆಕ್ಟ್ರಾನಿಕ್ಸ್ ಕಾರ್ಯಪರಿಸರದ ಬಲವರ್ಧನೆ ಆಗಲಿದೆ. ಸ್ಥಳೀಯವಾಗಿ ಆರ್ ಆ್ಯಂಡ್ ಡಿ, ತಂತ್ರಜ್ಞಾನ ವರ್ಗಾವಣೆ, ಶಿಕ್ಷಣ ಸಂಸ್ಥೆಗಳು ಮತ್ತು ಇಲ್ಲಿಯ ಕೈಗಾರಿಕೆಗಳ ಸಹಭಾಗಿತ್ವ ಸಿಗಲಿದೆ ಎಂದರು.

## ❖ ಸೇವಾ ವಲಯ ಪ್ರಗತಿ ಇಳಿಕೆ

**ಸಂದರ್ಭ: 'ದೇಶದ ಸೇವಾ ವಲಯದ ಬೆಳವಣಿಗೆ ಅಕ್ಟೋಬರ್ ತಿಂಗಳಿನಲ್ಲಿ ಐದು ತಿಂಗಳ ಕನಿಷ್ಠ ಮಟ್ಟಕ್ಕೆ ಇಳಿಕೆ ಆಗಿದೆ' ಎಂದು ಎಸ್ ಆ್ಯಂಡ್ ಪಿ ಗ್ಲೋಬಲ್ ಸಂಸ್ಥೆಯ ಮಾಸಿಕ ಸಮೀಕ್ಷೆ ತಿಳಿಸಿದೆ.**

- ಎಚ್‌ಎಸ್‌ಬಿಸಿ ಇಂಡಿಯಾ ಸರ್ವಿಸಸ್ ಪಿಎಂಐ ಬ್ಯುಸಿನೆಸ್ ಆ್ಯಕ್ಟಿವಿಟಿ ಸೂಚ್ಯಂಕವು ಸೆಪ್ಟೆಂಬರ್‌ನಲ್ಲಿ 60.9 ದಾಖಲಾಗಿತ್ತು. ಆದರೆ, ಅಕ್ಟೋಬರ್‌ನಲ್ಲಿ 58.9ಕ್ಕೆ ಇಳಿದಿದೆ.
- 'ಹೆಚ್ಚಿದ ಸ್ಪರ್ಧಾತ್ಮಕತೆಯ ಒತ್ತಡ ಮತ್ತು ಭಾರಿ ಮಳೆಯು ಚಟುವಟಿಕೆಯ ಇಳಿಕೆಗೆ ಕಾರಣವಾದವು. ಇದು ಸೂಚ್ಯಂಕ ಇಳಿಕೆಗೆ ದಾರಿ ಮಾಡಿಕೊಟ್ಟಿತು' ಎಂದು ಎಚ್‌ಎಸ್‌ಬಿಸಿ ಇಂಡಿಯಾದ ಮುಖ್ಯ ಅರ್ಥಶಾಸ್ತ್ರಜ್ಞೆ ಪ್ರಾಂಜುಲ್ ಭಂಡಾರಿ ಹೇಳಿದ್ದಾರೆ.

Dr. Rajkumar IAS Academy

- ಹೆಚ್ಚಿದ ಬೇಡಿಕೆ ಮತ್ತು ಜಿಎಸ್‌ಟಿ ದರ ಇಳಿಕೆಯಂತಹ ಅಂಶಗಳು ಕಾರ್ಯಾಚರಣೆಯ ಸ್ಥಿತಿ ಸುಧಾರಿಸಲು ನೆರವಾದವು. ಆದರೂ, ಸ್ಪರ್ಧಾತ್ಮಕತೆ ಮತ್ತು ಹೆಚ್ಚಿನ ಮಳೆಯಿಂದ ಬೆಳವಣಿಗೆಯು ನಿಧಾನವಾಯಿತು ಎಂದು ಹೇಳಿದ್ದಾರೆ.

## ❖ ಕಬ್ಬಿಗೆ ₹3,300 ದರ, ₹50 ಪ್ರೋತ್ಸಾಹಧನ

**ಸಂದರ್ಭ: ಸಕ್ಕರೆ ಕಾರ್ಖಾನೆ ಮಾಲೀಕರು, ರೈತ ಮುಖಂಡರ ಜತೆ ನಡೆಸಿದ ಸುದೀರ್ಘ ಮಾತುಕತೆ ಬಳಿಕ ರಾಜ್ಯ ಸರ್ಕಾರ, ಪ್ರತಿ ಟನ್ ಕಬ್ಬಿಗೆ ₹3,300 ದರ ನಿಗದಿ ಮಾಡಿದೆ.**

- 'ಕೇಂದ್ರದಿಂದ ಸಕ್ಕರೆ ಕಾರ್ಖಾನೆ ಮಾಲೀಕರು ಹಾಗೂ ರೈತರಿಗೆ ಅನ್ಯಾಯವಾಗಿದೆ. ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಮಾಲೀಕರು, ರೈತರನ್ನು ಒಳಗೊಂಡು ಕೇಂದ್ರಕ್ಕೆ ನಿಯೋಗ ತೆಗೆದುಕೊಂಡು ಹೋಗಲಾಗುವುದು' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.
- ಸಕ್ಕರೆಯ ಎಂಎಸ್‌ಪಿ ಹೆಚ್ಚಳ, ಎಥೆನಾಲ್ ಹಂಚಿಕೆ ಹೆಚ್ಚಳ, ಸಕ್ಕರೆ ರಫ್ತು ಮಿತಿಯನ್ನು ಹೆಚ್ಚಿಸುವುದು ಸೇರಿದಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು' ಎಂದರು.
- ***ಕಾರ್ಖಾನೆಗಳು ಒಂದು ಟನ್‌ಗೆ ಹಿಂದೆ ನಿಗದಿಯಾಗಿದ್ದ ₹3,200ರ ಜತೆಗೆ ಹೆಚ್ಚುವರಿಯಾಗಿ ₹50 ನೀಡಿದರೆ, ರಾಜ್ಯ ಸರ್ಕಾರವು ಒಂದು ಅವಧಿಯ ಪ್ರೋತ್ಸಾಹ ಧನವಾಗಿ ₹50 ಪಾವತಿಸಲಿದೆ. ಸಾಗಣೆ ಮತ್ತು ಕಟಾವು ವೆಚ್ಚ ಹೊರತುಪಡಿಸಿ ಶೇ 11.25 ಇಳುವರಿ ಪ್ರಮಾಣ ಇರುವ ಪ್ರತಿ ಟನ್ ಕಬ್ಬಿಗೆ ₹3,300 ಹಾಗೂ ಶೇ 10.5 ಇಳುವರಿ ಪ್ರಮಾಣ ಇರುವ ಕಬ್ಬಿಗೆ ₹3,200 ದರ ಸಿಗಲಿದೆ.***
- ಕೇಂದ್ರ ಸರ್ಕಾರ ಕಟಾವು ಮತ್ತು ಸಾಗಣೆ ವೆಚ್ಚ ಸೇರಿಸಿ ಶೇ 10.5 ಇಳುವರಿ ಪ್ರಮಾಣ ಇರುವ ಪ್ರತಿ ಟನ್ ಕಬ್ಬಿಗೆ ನ್ಯಾಯಯುತ ಮತ್ತು ಲಾಭದಾಯಕ ದರ (ಎಫ್‌ಆರ್‌ಪಿ) ₹3,550 ನಿಗದಿಪಡಿಸಿದೆ. ಸಾಗಣೆ, ಕಟಾವು ವೆಚ್ಚ ಹೊರತುಪಡಿಸಿ ಸಕ್ಕರೆ ಕಾರ್ಖಾನೆಗಳಿಗೆ ಪೂರೈಸುವ ಕಬ್ಬಿಗೆ ₹3,500 ದರ ನೀಡಬೇಕು ಎಂದು ಆಗ್ರಹಿಸಿ ಬೆಳಗಾವಿ, ವಿಜಯಪುರ, ಬಾಗಲಕೋಟೆ, ಹಾವೇರಿ ಮತ್ತು ಕಲಬುರಗಿ ಸೇರಿದಂತೆ ವಿವಿಧೆಡೆ ರೈತರು ಅ.30ರಿಂದ ಪ್ರತಿಭಟನೆ ನಡೆಸುತ್ತಿದ್ದರು.
- ಸಚಿವರು ಸ್ಥಳಕ್ಕೆ ತೆರಳಿ ಮಾತುಕತೆ ನಡೆಸಿದರೂ ರೈತರು ಪಟ್ಟು ಸಡಿಲಿಸಿರಲಿಲ್ಲ. ಬೆಳಗಾವಿ ಜಿಲ್ಲಾಧಿಕಾರಿ ನಿಗದಿ ಮಾಡಿದ್ದ ₹3,200 ದರವನ್ನೂ ಬೆಳೆಗಾರರು ತಿರಸ್ಕರಿಸಿದ್ದರು.
- ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಕ್ಕರೆ ಕಾರ್ಖಾನೆ ಮಾಲೀಕರು ಮತ್ತು ರೈತ ಮುಖಂಡರ ಸಭೆ ನಡೆಸಿ, ಪರಿಷ್ಕೃತ ದರ ಘೋಷಣೆ ಮಾಡಿದರು. **ಕಬ್ಬಿನ ಇಳುವರಿ ಪ್ರಮಾಣ ಜಿಲ್ಲೆಯಿಂದ ಜಿಲ್ಲೆಗೆ ವ್ಯತ್ಯಾಸವಾಗುತ್ತದೆ. ಹಾಗಾಗಿ, ಎಲ್ಲ ಇಳುವರಿ ಪ್ರಮಾಣದ ಕಬ್ಬಿಗೂ ಪ್ರತಿ ಟನ್‌ಗೆ ₹100ರೂ ಹೆಚ್ಚಳ ಅನ್ವಯವಾಗಲಿದೆ ಎಂದು ಖಚಿತಪಡಿಸಿದರು.**
- **ಸಕ್ಕರೆಗೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ), ಕಬ್ಬಿಗೆ ಎಫ್‌ಆರ್‌ಪಿ ನಿಗದಿ ಮಾಡುವುದು ಕೇಂದ್ರ ಸರ್ಕಾರ. ಎಥೆನಾಲ್ ಹಂಚಿಕೆ, ಸಕ್ಕರೆ ರಫ್ತು ಮಿತಿ ನಿಗದಿಪಡಿಸುವುದೂ ಕೇಂದ್ರ ಸರ್ಕಾರ.**

## ❖ ಹಣಕಾಸು ವಲಯದಲ್ಲಿ ಸುಧಾರಣೆ ಅಗತ್ಯ: ವಿಶ್ವಬ್ಯಾಂಕ್

**ಸಂದರ್ಭ: 2047ರ ವೇಳೆಗೆ ಭಾರತವು 30 ಟ್ರಿಲಿಯನ್ ಡಾಲರ್ (₹2,660 ಲಕ್ಷ ಕೋಟಿ) ಆರ್ಥಿಕತೆಯಾಗಲು ಹಣಕಾಸು ವಲಯದಲ್ಲಿ ಹೆಚ್ಚಿನ ಸುಧಾರಣೆಗಳು ಮತ್ತು ಖಾಸಗಿ ಬಂಡವಾಳಕ್ಕೆ ಉತ್ತೇಜನ ನೀಡುವ ಅಗತ್ಯವಿದೆ ಎಂದು ವಿಶ್ವಬ್ಯಾಂಕ್ ವರದಿ ತಿಳಿಸಿದೆ.**

- ಭಾರತದ 'ವಿಶ್ವ ದರ್ಜೆ' ಯ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಮತ್ತು ಸರ್ಕಾರದ ಕಾರ್ಯಕ್ರಮಗಳಿಂದ ಪುರುಷರು ಮತ್ತು ಮಹಿಳೆಯರಿಗೆ ಹಣಕಾಸು ಸೇವೆಗಳು ಸುಲಭವಾಗಿ ಲಭ್ಯವಾಗುವಂತಾಗಿವೆ ಎಂದು ವಿಶ್ವ ಬ್ಯಾಂಕ್‌ನ ಹಣಕಾಸು ವಲಯದ ಮೌಲ್ಯಮಾಪನ ವರದಿ ತಿಳಿಸಿದೆ.
- ವಿಶೇಷವಾಗಿ ಮಹಿಳೆಯರ ಪಾಲ್ಗೊಳ್ಳುವಿಕೆ ಪ್ರಮಾಣ ಹೆಚ್ಚಳವಾಗಬೇಕು. ವ್ಯಕ್ತಿಗಳು ಮತ್ತು ಎಂಎಸ್‌ಎಂಇಗಳಿಗೆ ಹೆಚ್ಚಿನ ಹಣಕಾಸು ಸೌಲಭ್ಯ ಲಭ್ಯವಾಗುವಂತೆ ಮಾಡಬೇಕು. ಸಹಕಾರಿ ಬ್ಯಾಂಕ್‌ಗಳ ಮೇಲೆ ಪ್ರಾಧಿಕಾರದ ನಿಯಂತ್ರಣ ಅಗತ್ಯ ಎಂದು ಸಲಹೆ ನೀಡಿದೆ.
- ಹಣಕಾಸು ವಲಯದ ಮೌಲ್ಯಮಾಪನ ಕಾರ್ಯಕ್ರಮವು (ಎಫ್‌ಎಸ್‌ಎಪಿ) ಅಂತರರಾಷ್ಟ್ರೀಯ ಹಣಕಾಸು ನಿಧಿ ಮತ್ತು ವಿಶ್ವ ಬ್ಯಾಂಕ್‌ನ ಜಂಟಿ ಕಾರ್ಯಕ್ರಮವಾಗಿದೆ. ಇದು ದೇಶದ ಹಣಕಾಸು ವಲಯದ ಸಮಗ್ರ ಮತ್ತು ಆಳವಾದ ವಿಶ್ಲೇಷಣೆಯನ್ನು ಮಾಡುತ್ತದೆ.

Dr Rajkumar IAS/KAS Academy

## ❖ ‘ಜಿಡಿಪಿ: ಶೇ 6.8ರಷ್ಟು ನಿರೀಕ್ಷೆ’

**ಸಂದರ್ಭ: ‘ಪ್ರಸಕ್ತ ಆರ್ಥಿಕ ವರ್ಷದಲ್ಲಿ ದೇಶದ ಜಿಡಿಪಿ ಬೆಳವಣಿಗೆ ಶೇ 6.8ಕ್ಕಿಂತಲೂ ಹೆಚ್ಚಾಗುವ ವಿಶ್ವಾಸವಿದೆ’ ಎಂದು ಮುಖ್ಯ ಆರ್ಥಿಕ ಸಲಹೆಗಾರ ವಿ. ಅನಂತ ನಾಗೇಶ್ವರನ್ ಹೇಳಿದ್ದಾರೆ.**

- ಜಿಎಸ್‌ಟಿ ಇಳಿಕೆ ಮತ್ತು ಆದಾಯ ತೆರಿಗೆ ವಿನಾಯಿತಿಯಿಂದ ಜನರು ಹೆಚ್ಚು ಹಣ ವ್ಯಯಿಸಲು ಉತ್ತೇಜನ ನೀಡಿದೆ ಎಂದು ಹೇಳಿದ್ದಾರೆ.
- ಆರ್ಥಿಕ ಸಮೀಕ್ಷೆ ವರದಿ ಸಹ ಜಿಡಿಪಿ ಬೆಳವಣಿಗೆ ಶೇ 6.3ರಿಂದ ಶೇ 6.8ರಷ್ಟಾಗಲಿದೆ ಎಂದು ಅಂದಾಜಿಸಿದೆ. ಅಮೆರಿಕ ಮತ್ತು ಭಾರತದ ನಡುವಿನ ದ್ವಿಪಕ್ಷೀಯ ವ್ಯಾಪಾರ ಒಪ್ಪಂದವು ಬೆಳವಣಿಗೆಗೆ ಉತ್ತೇಜನ ನೀಡಲಿದೆ. ಈ ಒಪ್ಪಂದ ಶೀಘ್ರ ಆಗಲಿದೆ ಎಂದು ಹೇಳಿದ್ದಾರೆ.
- ಪ್ರಸಕ್ತ ಆರ್ಥಿಕ ವರ್ಷದ ಜೂನ್ ತ್ರೈಮಾಸಿಕದಲ್ಲಿ ದೇಶದ ಜಿಡಿಪಿ ಬೆಳವಣಿಗೆ ಶೇ 7.8ರಷ್ಟಾಗಿತ್ತು. ಕೃಷಿ ವಲಯ ಮತ್ತು ಸೇವಾ ವಲಯದಿಂದ ಈ ಪ್ರಗತಿ ಸಾಧಿಸಿತ್ತು.

## ❖ ರಾಜ್ಯದ ಕಚ್ಚಾ ಗೇರು ಆಮದು ಹೆಚ್ಚಳ

**ಸಂದರ್ಭ: 14ರಿಂದ 16ರವರೆಗೆ ಗೋಡಂಬಿ ಶತಮಾನೋತ್ಸವ ಶೃಂಗ: ‘ಜಗತ್ತಿನ ಒಟ್ಟು ಗೋಡಂಬಿ ಬಳಕೆಯಲ್ಲಿ ಭಾರತದ ಪ್ರಮಾಣ ಮೂರನೇ ಒಂದರಷ್ಟಿದೆ. ದೇಶದ ಗೋಡಂಬಿ ಸಂಸ್ಕರಣೆಯಲ್ಲಿ ಕರ್ನಾಟಕದ ಪಾಲು ಶೇ 25ರಷ್ಟಿದೆ. ರಾಜ್ಯದ ಕಚ್ಚಾಗೇರು ಆಮದು ಪ್ರಮಾಣ 5 ಲಕ್ಷ ಟನ್‌ಗೆ ತಲುಪಿದೆ’ ಎಂದು ಕರ್ನಾಟಕ ಗೇರು ಉತ್ಪಾದಕರ ಸಂಘ ಹೇಳಿದೆ.**

- ‘ಮಂಗಳೂರಿನ ಗೇರು ಸಂಸ್ಕರಣಾ ಉದ್ಯಮಕ್ಕೆ (1925ರಲ್ಲಿ ಆರಂಭ) ನೂರು ವರ್ಷ ತುಂಬಿರುವ ಹಿನ್ನೆಲೆಯಲ್ಲಿ ‘ಗೋಡಂಬಿ ಶತಮಾನೋತ್ಸವ ಶೃಂಗ’ ವನ್ನು ಇದೇ 14ರಿಂದ 16ರವರೆಗೆ ಇಲ್ಲಿ ಆಯೋಜಿಸಲಾಗಿದೆ’ ಎಂದು ಸಂಘದ ಅಧ್ಯಕ್ಷ ಎಸ್. ಅನಂತ ಕೃಷ್ಣ ರಾವ್ ಹಾಗೂ ಶೃಂಗದ ಸಂಚಾಲಕ ಕೆ. ಪ್ರಕಾಶ್ ಕಲ್ಬಾವಿ ಇಲ್ಲಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.
- ‘ಗೇರು ಸಂಸ್ಕರಣೆಯಲ್ಲಿ ಹೊಸ ಆವಿಷ್ಕಾರಗಳ ಪರಿಚಯ, ಸಮಸ್ಯೆಗಳ ಬಗ್ಗೆ ಚರ್ಚೆ ಇರಲಿದೆ. ದೇಶದಲ್ಲಿ ಗೋಡಂಬಿ ಸಂಸ್ಕರಣೆಯಲ್ಲಿ ತೊಡಗಿರುವ ಸಾವಿರಕ್ಕೂ ಹೆಚ್ಚು ಉದ್ಯಮಿಗಳು ಪಾಲ್ಗೊಳ್ಳಲಿದ್ದಾರೆ’ ಎಂದರು.
- ‘ರಾಷ್ಟ್ರ ಮತ್ತು ಅಂತರ ರಾಷ್ಟ್ರೀಯ ಮಟ್ಟದಲ್ಲಿ ಕರ್ನಾಟಕ ಅದರಲ್ಲೂ ಮಂಗಳೂರು ಗೋಡಂಬಿಗೆ ಬೇಡಿಕೆ ಹೆಚ್ಚಿದೆ. ಆರಂಭದಲ್ಲಿ ವರ್ಷಕ್ಕೆ 50 ಸಾವಿರ ಟನ್ ಇದ್ದ ಕಚ್ಚಾ ಗೇರು ಬೀಜ ಸಂಸ್ಕರಣೆಯ ಪ್ರಮಾಣ ಈಗ ವರ್ಷಕ್ಕೆ 5 ಲಕ್ಷ ಟನ್‌ಗೆ ತಲುಪಿದೆ. ನವಮಂಗಳೂರು ಬಂದರಿಗೆ ಏಳು ತಿಂಗಳಲ್ಲಿ 3.45 ಲಕ್ಷ ಟನ್ ಕಚ್ಚಾಗೇರು ಆಮದಾಗಿದ್ದು, ಒಂದು ವರ್ಷದಲ್ಲಿ ಇದರ ಪ್ರಮಾಣ 5 ಲಕ್ಷ ಟನ್ ಆಗಲಿದೆ’ ಎಂದರು.
- ಭಾರತದ ಸಂಸ್ಕರಣಾ ಉದ್ಯಮಕ್ಕೆ 20 ಲಕ್ಷ ಟನ್ ಕಚ್ಚಾ ಗೇರು ಬೀಜ ಬೇಕು. ಆದರೆ, ನಮ್ಮ ದೇಶದಲ್ಲಿ ಬೆಳೆಯುವುದು ಸರಾಸರಿ 5 ಲಕ್ಷ ಟನ್ ಮಾತ್ರ. ನಮಗೆ ಬೇಕಿರುವ ಕಚ್ಚಾ ಗೇರು ಬೀಜಗಳ ಪೈಕಿ ಶೇ 25ರಷ್ಟು ಮಾತ್ರ ದೇಶೀಯವಾಗಿ ಬೆಳೆಯಲಾಗುತ್ತಿದೆ. ಶೇ 75ರಷ್ಟು ಹೊರದೇಶಗಳನ್ನೇ ಅವಲಂಬಿಸಿದ್ದೇವೆ.
- ಕರ್ನಾಟಕದಲ್ಲಿ ಕಚ್ಚಾ ಗೇರು ಬೆಳೆಯುವ ಪ್ರಮಾಣ 50 ಸಾವಿರ ಟನ್‌ನಷ್ಟು ಮಾತ್ರ. ರಾಜ್ಯದ 26 ಜಿಲ್ಲೆಗಳಲ್ಲಿ ಗೇರು ಕೃಷಿ ಇದ್ದು, ಇದಕ್ಕೆ ಇನ್ನಷ್ಟು ಉತ್ತೇಜನ ನೀಡಬೇಕು. ಗೇರು ಹಣ್ಣಿನಿಂದ ಕಚ್ಚಾ ಗೇರು ಬೀಜ ಹೊರ ತೆಗೆದ ನಂತರ, ಆ ಹಣ್ಣು (ಹಣ್ಣಿನ ಶೇ 80ರಷ್ಟು ಭಾಗ) ಈಗ ವ್ಯರ್ಥವಾಗುತ್ತಿದೆ. ಅದರಿಂದ ಉಪ ಉತ್ಪನ್ನ ತಯಾರಿಸಿ ಈ ಬೆಳೆಯನ್ನು ಲಾಭದಾಯಕವಾಗಿಸಬೇಕಿದೆ ಎಂದರು.
- ದೇಶೀಯ ಮಾರುಕಟ್ಟೆಯಲ್ಲಿ ಬೇಡಿಕೆ ಮತ್ತು ದರ ಹೆಚ್ಚಾಗಿದೆ. ಹೀಗಾಗಿ ನಮ್ಮ ದೇಶದ ಗೋಡಂಬಿ ರಫ್ತು ಪ್ರಮಾಣ ಕೇವಲ 50 ಸಾವಿರ ಟನ್‌ನಷ್ಟು ಮಾತ್ರ ಇದೆ ಎಂದು ಹೇಳಿದರು.
- ರಾಜ್ಯದ ಕರಾವಳಿಯಲ್ಲಿ ಅಂದಾಜು 400 ಗೋಡಂಬಿ ಸಂಸ್ಕರಣಾ ಘಟಕಗಳು ಇದ್ದವು. ಈಗ 250 ಘಟಕಗಳು ಮಾತ್ರ ಕಾರ್ಯನಿರ್ವಹಿಸುತ್ತಿವೆ. ಯಾಂತ್ರೀಕರಣಕ್ಕೆ ಒಗ್ಗಿಕೊಳ್ಳದಿರುವುದು ಮತ್ತಿತರ ಕಾರಣ

Dr. Rajkumar IAS/KAS ...

ಕೆಲ ಘಟಕಗಳು ಮುಚ್ಚಿವೆ. ಘಟಕಗಳು ಕಡಿಮೆಯಾದರೂ, ಗೋಡಂಬಿ ಸಂಸ್ಕರಣೆಯ ಪ್ರಮಾಣ ಹೆಚ್ಚುತ್ತಲೇ ಇದೆ ಎಂದು ಅವರು ಹೇಳಿದರು.

## ❖ ಬೆಂಗಳೂರು- ಎರ್ನಾಕುಳಂ 'ವಂದೇ ಭಾರತ್‌ಗೆ' ಹಸಿರು ನಿಶಾನೆ ಇಂದು

**ಸಂದರ್ಭ: ಬೆಂಗಳೂರು- ಎರ್ನಾಕುಳಂ ನಡುವೆ ವಂದೇ ಭಾರತ್ ರೈಲು ಸಂಚಾರಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ವರ್ಚುವಲ್ ಆಗಿ ಹಸಿರು ನಿಶಾನೆ ತೋರಲಿದ್ದಾರೆ.**

- ಎರ್ನಾಕುಲಂ ಜಂಕ್ಷನ್‌ನಿಂದ ಹೊರಡುವ ರೈಲು ತ್ರಿಶ್ಶೂರ್, ಪಾಲಕ್ಕಾಡ್, ಕೊಯಮತ್ತೂರು, ತಿರುಪ್ಪೂರು, ಈರೋಡ್, ಸೇಲಂ, ಕೃಷ್ಣರಾಜಪುರಂ ನಿಲ್ದಾಣಗಳ ಮೂಲಕ ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣ ತಲುಪಲಿದೆ. ಕೇರಳ-ತಮಿಳುನಾಡು-ಕರ್ನಾಟಕದಲ್ಲಿ ಸಂಚರಿಸುವ ಈ ರೈಲು ಎಂಟು ಕೋಚ್‌ಗಳನ್ನು ಒಳಗೊಂಡಿರಲಿದೆ.

## ❖ 97 ಜೆಟ್ ಎಂಜಿನ್ ಖರೀದಿಗೆ ಒಪ್ಪಂದ

**ಸಂದರ್ಭ: ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ (ಎಚ್‌ಎಎಲ್) ತನ್ನ ತೇಜಸ್ ಲಘು ಯುದ್ಧ ವಿಮಾನ ಕಾರ್ಯಕ್ರಮಕ್ಕಾಗಿ 97 ಜೆಟ್ ಎಂಜಿನ್‌ಗಳನ್ನು ಖರೀದಿಸಲು ಜಿಇ ಏರೋಸ್ಪೇಸ್ ಜತೆ ಒಪ್ಪಂದ ಮಾಡಿಕೊಂಡಿದೆ.**

- ಒಪ್ಪಂದದ ಪ್ರಕಾರ, ಎಫ್‌404–ಜಿಇ-ಐಎನ್‌20 ಎಂಜಿನ್‌ಗಳ ವಿತರಣೆಯು 2027ರಿಂದ ಪ್ರಾರಂಭವಾಗಲಿದ್ದು, 2032ರ ವೇಳೆಗೆ ಪೂರೈಕೆ ಪೂರ್ಣಗೊಳಿಸಬೇಕಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.
- 97 ಲಘು ಯುದ್ಧ ವಿಮಾನ ಎಂಕೆ1ಎ ಕಾರ್ಯಕ್ರಮವನ್ನು ಕಾರ್ಯಗತ ಗೊಳಿಸಲು ಎಂಜಿನ್‌ಗಳು ಹಾಗೂ 'ಪೂರಕ ಪ್ಯಾಕೇಜ್' ಖರೀದಿಗೆ ಜನರಲ್ ಎಲೆಕ್ಟ್ರಿಕ್ ಕಂಪನಿಯೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ.
- ಭಾರತೀಯ ವಾಯುಪಡೆಗೆ 97 ತೇಜಸ್ ಎಂಕೆ-1ಎ ಲಘು ಯುದ್ಧ ವಿಮಾನಗಳನ್ನು ಖರೀದಿಸಲು ರಕ್ಷಣಾ ಸಚಿವಾಲಯವು ಎಚ್‌ಎಎಲ್‌ನೊಂದಿಗೆ ಸೆಪ್ಟೆಂಬರ್‌ನಲ್ಲಿ ₹62,370 ಕೋಟಿ ಮೊತ್ತದ ಒಪ್ಪಂದ ಮಾಡಿಕೊಂಡಿತ್ತು.

## ❖ ಭಾರತ ಹಾಕಿಗೆ ಶತಮಾನ ಸಂಭ್ರಮ


**ಸಂದರ್ಭ: ಐತಿಹಾಸಿಕ ಕ್ಷಣಗಳಿಗೆ ಸಾಕ್ಷಿಯಾದ ದಿಗ್ಗಜರು ಅಪರೂಪದ ಛಾಯಾಚಿತ್ರ, ಸ್ಮರಣಿಕೆಗಳ ಪ್ರದರ್ಶನ: ಇಲ್ಲಿನ ಹೆಗ್ಗುರುತಾದ ಮೇಜರ್ ಧ್ಯಾನ್ ಚಂದ್ ಕ್ರೀಡಾಂಗಣ ಸಂಭ್ರಮದಿಂದ ಕಳೆಗಟ್ಟಿತ್ತು. ತಲೆಮಾರು ಗಳನ್ನು ಪ್ರಭಾವಿಸಿದ ದಿಗ್ಗಜ ಆಟಗಾರರು, ಒಲಿಂಪಿಕ್ ಸ್ವರ್ಣ ವಿಜೇತ ಆಟಗಾರರು ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾದರು.**


ಕೇಂದ್ರ ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯ ಅವರು ಹಾಕಿ ದಿಗ್ಗಜ ಗುರುಬಕ್ಷ್ ಸಿಂಗ್ ಅವರನ್ನು ಗೌರವಿಸಿದರು. ತಮಿಳುನಾಡು ಉಪ ಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ ಚಿತ್ರದಲ್ಲಿದ್ದಾರೆ ಪಿಟಿಐ ಚಿತ್ರ

- ಭಾರತದ ಹಾಕಿ ಸುವರ್ಣಯುಗದಲ್ಲಿ ಆಡಿದ್ದ ಗುರುಬಕ್ಷ್ ಸಿಂಗ್, ಅಸ್ಲಂ ಶೇರ್ ಖಾನ್, ಹರ್ಬಿಂದರ್ ಸಿಂಗ್, ಅಜಿತ್ ಪಾಲ್ ಸಿಂಗ್, ಅಶೋಕ್ ಕುಮಾರ್, ಬಿ.ಪಿ.ಗೋವಿಂದ, ಜಾಫರ್ ಇಕ್ಬಾಲ್, ಬ್ರಿಗೇಡಿಯರ್ ಹರಚರಣ್ ಸಿಂಗ್, ವಿನೀತ್ ಕುಮಾರ್, ಮಿರ್ ರಂಜನ್ ನೇಗಿ, ರೋಮಿಯೊ ಜೇಮ್ಸ್, ಅಸುಂತ ಲಾಕ್ರಾ, ಸುಭದ್ರ ಪ್ರಧಾನ್ ಇವರಲ್ಲಿ ಒಳಗೊಂಡಿದ್ದರು.
- ಈ ಸಂದರ್ಭದಲ್ಲಿ ಹಾಜರಿದ್ದ ಕೇಂದ್ರ ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯ ಅವರು ಭಾರತದ ರಾಷ್ಟ್ರೀಯ ಕ್ರೀಡೆಯ ವೈಭವಯುತ ಪಯಣವನ್ನು

ಕೊಂಡಾಡಿದರು. ದೇಶದ ಕ್ರೀಡಾ ಪರಂಪರೆಯಲ್ಲಿ ಈ ಆಟದ ಗಟ್ಟಿ ಬೇರುಗಳನ್ನು ನೆನಪಿಸಿದರು.

- 'ಈ ಕ್ರೀಡೆಯು ದೇಶದಲ್ಲಿ ವಿವಿಧ ಹಂತಗಳನ್ನು ದಾಟಿದೆ. ಭಾರತ ಕ್ರೀಡಾ ಕ್ಷೇತ್ರದಲ್ಲಿ ಮೆರೆಯಬಹುದು ಎಂಬುದನ್ನು ಭಾರತ ಹಾಕಿ ತಂಡವು ಒಲಿಂಪಿಕ್ಸ್‌ನಲ್ಲಿ ಉತ್ತಮ ಪ್ರದರ್ಶನದ ಮೂಲಕ ಸಾಧಿಸಿ ತೋರಿಸಿತು' ಎಂದು ಮಾಂಡವೀಯ ಬಣ್ಣಿಸಿದರು.




-----------------------------------------ಶುಭವಂದನೆಗಳು-----------------------------------------